ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

Volume: 01, Issue: 209 RNI Number : KNKAN/25/A2770 09-08-2026 Sunday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :209 ರಾಯಚೂರು 09-08-2026 ರವಿವಾರ ಪುಟ 04 ಬೆಲೆ ರೂ.2/- ಮೊ:8660146563

ಸಿಎಸ್‌ಆರ್ ನಿಧಿ ಮೇಲೆ ನಿಗಾ ವಹಿಸಲು ಐಎಎಸ್ ಅಧಿಕಾರಿ ನೇಮಕ; ಡಿಕೆಶಿ

ಬೆಂಗಳೂರು,ಅ.8-

ಕಾರ್ಪೋರೇಟ್ ಸಂಸ್ಥೆಗಳು, ಕೈಗಾರಿಕೆಗಳು ಒಳಗೊಂಡಂತೆ ಸಾಮಾಜಿಕ ಹೊಣೆಗಾರಿಕೆ ನಿಧಿ ಸಿಎಸ್‌ಆರ್ ನಿಧಿ ಅಡಿ ಬರುವ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ನೀತಿ ಜಾರಿಗೆ ತರಲು ಸರ್ಕಾರ ತೀರ್ಮಾನಿಸಿದೆ. ಸಿಎಸ್‌ಆರ್ ಚಟುವಟಿಕೆಗಳ ಮೇಲೆ ನಿಗಾವಹಿಸಲು ಐಎಎಸ್ ಅಧಿಕಾರಿಯೊಬ್ಬರನ್ನು ನಿಯೋಜಿಸಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರು ಐಟಿ ಕಂಪೆನಿಗಳು ಮತ್ತು ಕೈಗಾರಿಕೆಗಳ ಸಂಘದಿಂದ ಆಯೋಜಿಸಲಾದ ಸಿಎಸ್‌ಆರ್ ವಿಷನ್ -2030 ಸಮಾವೇಶದಲ್ಲಿ ಮಾತನಾಡಿದ ಅವರು, ಸಿ.ಎಸ್.ಆರ್ ಚಟುವಟಿಕೆಯಲ್ಲಿ ಮೊದಲ ಹಂತದಲ್ಲಿ ಶಿಕ್ಷಣಕ್ಕೆ ಒತ್ತು ನೀಡುತ್ತಿದ್ದು, ನಂತರ ಆರೋಗ್ಯ ಸೇವೆಗೆ ಆದ್ಯತೆ ನೀಡಲಾಗುವುದು. ಕಂಪೆನಿಗಳು ಸಿಎಸ್‌ಆರ್ ಚಟುವಟಿಕೆಯಲ್ಲಿ ವೆಚ್ಚ ಮಾಡುವ ಹಣ, ಚಟುವಟಿಕೆಗಳ ಮೇಲೆ ನಿಗಾ ವಹಿಸಲು ಸೂಕ್ತ ಕಣ್ಗಾವಲು ವ್ಯವಸ್ಥೆಯನ್ನು ರೂಪಿಸಲಾಗುವುದು ಎಂದರು.

ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮ ತೆಗೆದುಕೊಳ್ಳಬೇಕು. ಬೆಂಗಳೂರು ಹೊರತುಪಡಿಸಿ ಜಿಲ್ಲಾ ಕೇಂದ್ರಗಳಲ್ಲೂ ಶಾಲೆಗಳ ಅಭಿವೃದ್ಧಿಯನ್ನು ಕೈಗೆತ್ತಿಕೊಳ್ಳುವಂತಿಲ್ಲ. ಗ್ರಾಮ ಪಂಚಾಯತ್ ಹಂತದಲ್ಲಿ ಶಾಲಾಭಿವೃದ್ಧಿಗೆ ಗಮನಹರಿಸಬೇಕು. ಯಾವ ಗ್ರಾಮದ ಶಾಲೆಯನ್ನಾದರೂ ಅಭಿವೃದ್ಧಿಪಡಿಸಿದರೂ ಸರ್ಕಾರ ನಿರ್ಬಂಧ ವಿಧಿಸುವುದಿಲ್ಲ. ಯಾರಿಗೆ ಬೇಕಾದರೂ ಗುತ್ತಿಗೆ ನೀಡಿ. ಆದರೆ ಗ್ರಾಮ ಪಂಚಾಯತ್ ಹಂತದಲ್ಲಿ ಉತ್ತಮ ಚಿಕಿತ್ಸೆ ದೊರೆಯುವಂತಹ ವ್ಯವಸ್ಥೆ ಕಲ್ಪಿಸಬೇಕು. ಇದಕ್ಕಾಗಿ ಎಲ್ಲಾ ಜಿಲ್ಲೆಗಳಲ್ಲಿ ಅಧಿಕಾರಿಗಳು, ಸಿಎಸ್‌ಆರ್ ವ್ಯಾಪ್ತಿಗೆ ಒಳಪಡುವ ಸಂಸ್ಥೆಗಳು ಬಿಲ್ಡರ್ ಗಳನ್ನು ಒಳಗೊಂಡಂತೆ ಸಮಿತಿ ರಚಿಸಲಾಗುವುದು ಎಂದು ಹೇಳಿದರು.

ರಾಜ್ಯದಲ್ಲಿ ಸಿ.ಎಸ್.ಆರ್ ವ್ಯಾಪ್ತಿಯಡಿ ಪ್ರಸ್ತುತ 3394 ಕೋಟಿ ರೂ ವೆಚ್ಚ ಮಾಡುತ್ತಿದ್ದು, ಇದು ಅತ್ಯಂತ ಕಡಿಮೆಯಾಗಿದೆ. ವಾರ್ಷಿಕ ಸುಮಾರು 10 ಸಾವಿರ ಕೋಟಿ ರೂ ವೆಚ್ಚ ಮಾಡಬೇಕಾಗಿದೆ. ಈ ಬಗ್ಗೆ ಮುಂದಿನ ದಿನಗಳಲ್ಲಿ ಐಎಎಸ್ ಅಧಿಕಾರಿಯೊಬ್ಬರು ಈ ಬಗ್ಗೆ ಗಮನಹರಿಸಲಿದ್ದಾರೆ. ಸರ್ಕಾರ



ನಿರ್ಮಾಣ ಚಟುವಟಿಕೆ ಮಾಡಿದರೆ ಶೇ 18 ರಷ್ಟು ಜಿ.ಎಸ್.ಟಿ ಪಾವತಿಸಬೇಕಾಗುತ್ತದೆ. ಹಾಗಾಗಿ ಗುಣಮಟ್ಟದ ನಿರ್ಮಾಣ ಕಾರ್ಯಗಳನ್ನು ನೀವೇ ನಿರ್ವಹಿಸಬೇಕು. ಜೊತೆಗೆ ದೊಡ್ಡ ದೊಡ್ಡ ಶಿಕ್ಷಣ ಸಂಸ್ಥೆಗಳು ಸಹ ರಾಜ್ಯದಲ್ಲಿ ತಲಾ ಒಂದೊಂದು ಸರ್ಕಾರಿ ಶಾಲೆಯನ್ನು ದತ್ತು ತೆಗೆದುಕೊಂಡು ನಿರ್ವಹಣೆ ಮಾಡಬೇಕು. ನನ್ನ ಮಗಳು ಸಹ ಮೂರು ಶಾಲೆಗಳನ್ನು ದತ್ತು ಪಡೆದಿದ್ದಾಳೆ. ಬೆಂಗಳೂರು ದಕ್ಷಿಣ ಜಿಲ್ಲೆಯ ಗ್ರಾಮೀಣ ಬಾಗದಲ್ಲಿ ಹಲವು ಶಾಲೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಬೆಂಗಳೂರು ನಗರದ ಬೆಳವಣಿಗೆಗೆ ಪಂಡಿತ್ ಜವಾಹರ್ ಲಾಲ್ ನೆಹರು ಸ್ವಾತಂತ್ರ್ಯೋತ್ತರದಲ್ಲಿ ಉತ್ತಮ ಅಡಿಪಾಯ ಹಾಕಿದ್ದು, ಜಗತ್ತಿನ ಅತ್ಯುತ್ತಮ ಕಂಪೆನಿಗಳು ಇಲ್ಲಿವೆ. ಈ ನಗರದಲ್ಲಿ ನಾವು ಮಾತನಾಡುವ ಎಲ್ಲವೂ ಲಭ್ಯವಿದೆ. ಆದರೆ ಮುಂಬೈನಂತೆ ಬೆಂಗಳೂರು ನಗರ ದುಬಾರಿಯಲ್ಲ. ಒಂದೂವರೆ ಕೋಟಿಗೆ ನಗರದ ಆಸುಪಾಸಿನಲ್ಲಿ ಉತ್ತಮ ಮನೆಗಳನ್ನು ಖರೀದಿಸಬಹುದು. ಮುಂಬರುವ ಬೆಂಗಳೂರು ಟೆಕ್ ಸಮ್ಮಿಟ್ ನಲ್ಲಿ ಈ ನಗರಕ್ಕೆ ಮತ್ತಷ್ಟು ಅಚ್ಚರಿಗಳು ದೊರೆಯಲಿವೆ ಎಂದರು.

ಸಮ್ಮೇಳನದಲ್ಲಿ ಮಾಜಿ ರಾಜ್ಯಸಭಾ ಸದಸ್ಯ ಪ್ರೊ. ರಾಜೀವ್ ಗೌಡ, ವಾರ್ತಾ ಇಲಾಖೆ ಕಾರ್ಯದರ್ಶಿ ಜೆ. ಮಂಜುನಾಥ್, ಯಶವಂತ್ ವಿ ಗುರುಕರ್, ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ ಸಿಇಒ ಸಂಜೀವ್ ಕುಮಾರ್ ಗುಪ್ತಾ, ಜಿಬಿಐಟಿಸಿಐಎ ಚೇರ್ ಮನ್ ಆದಿತ್ಯ ಪಿ.ಎಸ್, ಜಿಬಿಐಟಿಸಿಐಎ ಅಧ್ಯಕ್ಷ ಗಿರೀಶ್ ಎಚ್.ಕೆ., ಖಜಾಂಚಿ ಎಸ್. ಮಯೂರ್, ಸಿಎಸ್‌ಆರ್ ಮುಖ್ಯಸ್ಥ ವಾಸುದೇವ್ ಮತ್ತಿತರರು ಉಪಸ್ಥಿತರಿದ್ದರು.

2ನೇ ದಿನವೂ ಬರ ಅಧ್ಯಯನ: ಸಂಕಷ್ಟದಲ್ಲಿರುವ ಪ್ರತಿಯೊಬ್ಬ ರೈತನಿಗೆ ಸೂಕ್ತ ಪರಿಹಾರ: ಸಚಿವ ಡಾ.ಅಜಯ್ ಧರ್ಮಸಿಂಗ್

ನಿಮ್ಮೂರ ಸುದ್ದಿ

ರಾಯಚೂರು,ಆ.08-

ರಾಯಚೂರು ಜಿಲ್ಲೆಯಲ್ಲಿ ಬರ ಅಧ್ಯಯನ ಆರಂಭಿಸಿರುವ ಕರ್ನಾಟಕ ಸರ್ಕಾರದ ನೂತನ ಸಚಿವರಾದ ಡಾ.ಅಜಯ್ ಧರಂಸಿಂಗ್ ಅವರು 2ನೇ ದಿನವೂ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಬರ ಪರಿಶೀಲನೆ ನಡೆಸುವಲ್ಲಿ ನಿರತರಾದರು.

ಈ ವೇಳೆ ಕರ್ನಾಟಕ ಸರ್ಕಾರದ ನೂತನ ಸಚಿವರಾದ ಡಾ.ಅಜಯ್ ಧರಂಸಿಂಗ್ ಅವರು ಪೋತ್ನಾಳ ಗ್ರಾಮದ ಜಮೀನಿನ ಪರಿಶೀಲನೆ ನಂತರ ಮಾತನಾಡಿದ ಅವರು ರಾಯಚೂರು ಜಿಲ್ಲೆಯಲ್ಲಿ ಮಳೆಯ ಅಭಾವ ಹಾಗೂ ಕೃಷಿ ಬಿಕ್ಕಟ್ಟಿನಿಂದಾಗಿ ರೈತರು ತೀವ್ರ ಸಂಕಷ್ಟ



ಎದುರಿಸುತ್ತಿದ್ದು, ಪರಿಸ್ಥಿತಿ ಅತ್ಯಂತ ಗಂಭೀರವಾಗಿದೆ. ಈ ಹಿನ್ನೆಲೆಯಲ್ಲಿ ಮಸ್ಕಿ ಮತ್ತು ಸಿಂಧನೂರು ತಾಲೂಕುಗಳ ವಿವಿಧ ಪ್ರದೇಶಗಳಿಗೆ ಜನಪ್ರತಿನಿಧಿಗಳ ಹಾಗೂ ನಾಯಕರ ತಂಡ ಭೇಟಿ ನೀಡಿ, ನೇರವಾಗಿ ರೈತರನ್ನು ಭೇಟಿಯಾಗಿ ಅವರ ಕುಂದುಕೊರತೆಗಳನ್ನು ಆಲಿಸಲಾಗುತ್ತಿದೆ.

ಜಿಲ್ಲೆಯಲ್ಲಿ ಪ್ರಸಕ್ತ ಕೃಷಿ ಸ್ಥಿತಿ ಆತಂಕಕಾರಿಯಾಗಿದೆ. ಪ್ರತಿ ವರ್ಷ ಕನಿಷ್ಠ 1 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗುತ್ತಿತ್ತು. ಆದರೆ ಈ ಬಾರಿ ಕೇವಲ 12,000 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದೆ. ಇದರಲ್ಲಿ ಸುಮಾರು 4,000 ಹೆಕ್ಟೇರ್ ಹತ್ತಿ ಹಾಗೂ 7,000 ಹೆಕ್ಟೇರ್ ಸೂರ್ಯಕಾಂತಿ ಬೆಳೆ ಸೇರಿದೆ ಎಂದರು.

ವಾಡಿಕೆಯಂತೆ ನಡೆಯಬೇಕಿದ್ದ 1 ಲಕ್ಷ ಹೆಕ್ಟೇರ್ ಬಿತ್ತನೆಗೆ ಹೋಲಿಸಿದರೆ ಈ ಬಾರಿ ಬಿತ್ತನೆ ಯಾಗಿರುವುದು ಕೇವಲ 12,000 ಹೆಕ್ಟೇರ್ ಮಾತ್ರ. ಮಸ್ಕಿಯಿಂದ ಸಿಂಧನೂರು ವರೆಗಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಬೆಳೆ ಹಾನಿ ಹಾಗೂ ರೈತರ ಸಂಕಷ್ಟದ ಬಗ್ಗೆ ಸಮಗ್ರ ವರದಿ ಸಿದ್ಧಪಡಿಸಲಾ ಗುತ್ತಿದೆ.

ನಮ್ಮ ಸರ್ಕಾರ ಸಂಪೂರ್ಣವಾಗಿ ರೈತರ ಪರವಾಗಿದ್ದು, ಸಂಕಷ್ಟದಲ್ಲಿರುವ ಪ್ರತಿಯೊಬ್ಬ ರೈತನಿಗೆ ಸೂಕ್ತ ಪರಿಹಾರ ಮತ್ತು ಅಗತ್ಯ ನೆರವು ಒದಗಿಸಲು ಎಲ್ಲಾ ಕ್ರಮ ಕೈಗೊಳ್ಳಲಾಗುವುದು. ಅಲ್ಲದೆ ರೈತರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಸಂಪೂರ್ಣ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ,

3 ನೇ ಪುಟಕ್ಕೆ

ಎಐಬಿಇ ಪಾಸಾಗುವ ಮುನ್ನವೇ ವಕಾಲತ್‌ಗೆ ಅವಕಾಶ

ಯುವ ವಕೀಲರ ಹೋರಾಟಕ್ಕೆ ಜಯ: ಕಾರ್ತಿಕ್ ಕುಮಾರ್



ನಿಮ್ಮೂರ ಸುದ್ದಿ

ರಾಯಚೂರು,ಆ.08-

ರಾಜ್ಯ ಬಾರ್ ಕೌನ್ಸಿಲ್‌ನಲ್ಲಿ ಕಾನೂನುಬದ್ಧವಾಗಿ ನೋಂದಾಯಿಸಿಕೊಂಡಿರುವ ಯುವ ವಕೀಲರು ಆಲ್ ಇಂಡಿಯಾ ಬಾರ್ ಎಕ್ಸಾಮಿನೇಷನ್ (ಎಐಬಿಇ) ಪರೀಕ್ಷೆ ಉತ್ತೀರ್ಣರಾಗುವ ಮುನ್ನವೇ ವಕಾಲತ್‌ನಾಮೆಗೆ ಸಹಿ ಮಾಡಿ ನ್ಯಾಯಾಲಯಕ್ಕೆ ಸಲ್ಲಿಸಬಹುದು ಹಾಗೂ ಕಕ್ಷಿದಾರರ ಪರವಾಗಿ ವಾದ ಮಂಡಿಸಬಹುದು ಎಂದು ಯುವ ವಕೀಲ ಕಾರ್ತಿಕ್ ಕುಮಾರ್ ಎಸ್. ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಕುರಿತು ಕಲಬುರಗಿ ಪೀಠದಲ್ಲಿ ನಡೆದ ನ್ಯಾಯಾಂಗ ಪ್ರಕ್ರಿಯೆ ಹಾಗೂ ಬಾರ್ ಕೌನ್ಸಿಲ್ ಆಫ್ ಇಂಡಿಯಾ ಜುಲೈ 29ರಂದು ನೀಡಿರುವ ಸ್ಪಷ್ಟನೆಯಿಂದ ಯುವ ವಕೀಲರಿಗೆ ವೃತ್ತಿ ನಿರ್ವಹಿಸುವ ವಿಚಾರದಲ್ಲಿ ಇದ್ದ ಗೊಂದಲ ನಿವಾರಣೆಯಾಗಿದೆ ಎಂದರು.

ರಾಜ್ಯ ಬಾರ್ ಕೌನ್ಸಿಲ್‌ನಲ್ಲಿ ನೋಂದಣಿ ಪೂರ್ಣಗೊಂಡಿರುವ ಯುವ ವಕೀಲರು ಎಐಬಿಇ ಪರೀಕ್ಷೆ ಪಾಸಾಗುವ ಮುನ್ನವೇ ನಿಗದಿತ ಅವಧಿಯಲ್ಲಿ ವಕಾಲತ್ ವೃತ್ತಿ ಆರಂಭಿಸಬಹುದು. ವಕಾಲತ್‌ನ

3 ನೇ ಪುಟಕ್ಕೆ

ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಸಿಂಗ್ ಅವರ ಜಿಲ್ಲಾ ಪ್ರವಾಸ ಹಾಗೂ ಬೆಳೆ ಪರಿಶೀಲನೆ ಪ್ರವಾಸ ಬೆಳೆ ವೀಕ್ಷಣೆ



ನಿಮ್ಮೂರ ಸುದ್ದಿ

ಹಟ್ಟಿಚಿನ್ನದ ಗಣಿ , ಆ.08-

ವಿವಿಧ ತಾಲೂಕುಗಳು ಲಿಂಗಸುಗೂರು ಕ್ಷೇತ್ರ ಭೇಟಿ ಮತ್ತು ಪರಿಶೀಲನೆ: ಹೊಸ ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಸಿಂಗ್ ಅವರು ಇಂದು ಜಿಲ್ಲೆಯ ವಿವಿಧ ತಾಲೂಕುಗಳು ಹಾಗೂ ಮಸ್ಕಿ/ಲಿಂಗಸಗೂರು ಸುತ್ತಮುತ್ತಲಿನ ಕೃಷಿ ಕ್ಷೇತ್ರಗಳಿಗೆ ಭೇಟಿ ನೀಡಿ, ಕನಿಷ್ಠ ಮಳೆಯಿಂದಾಗಿ ಬಾಡಿಹೋಗಿರುವ ಹತ್ತಿ, ತೊಗರಿ ಮುಂತಾದ ಬೆಳೆಗಳನ್ನು ಖುದ್ದಾಗಿ ಪರಿಶೀಲಿಸಿದರು.

ರೈತರೊಂದಿಗೆ ಸಂವಾದ: ಶಾಸಕರು ಹಾಗೂ ಸ್ಥಳೀಯ ಜನಪ್ರತಿನಿಧಿಗಳ (ಡಿ.ಎಸ್. ಹುಲಿಗೇರಿ ಸೇರಿದಂತೆ ಸ್ಥಳೀಯ ನಾಯಕರ) ಸಮ್ಮುಖದಲ್ಲಿ ಸ್ಥಳಕ್ಕೆ ಆಗಮಿಸಿದ ಸಚಿವರು, ಮಳೆಯ ಅಭಾವದಿಂದ ಎದುರಾಗಿರುವ ತೊಂದರೆಗಳ ಬಗ್ಗೆ ರೈತರಿಂದ ಮಾಹಿತಿ ಪಡೆದರು.

ಪರಿಹಾರ ಮತ್ತು ವರದಿ: ಮಳೆ ಕೊರತೆಯಿಂದಾಗಿ ಹಲವೆಡೆ ರೈತರು

3 ನೇ ಪುಟಕ್ಕೆ

2006-07 ನೇ ಸಾಲಿನ ಹಳೆ ವಿದ್ಯಾರ್ಥಿಗಳಿಂದ ಪ್ರೌಢಶಾಲೆಗೆ ತಟ್ಟೆ ಮತ್ತು ಗ್ಲಾಸ್, ಅಲ್ಮಾರ ದೇಣಿಗೆ

ವಿದ್ಯಾರ್ಥಿಗಳಿಗೆ ನೆರವಾಗುತ್ತಿರುವ ಉತ್ತಮ ಬೆಳವಣಿಗೆ



ನಿಮ್ಮೂರ ಸುದ್ದಿ

ಸಿರವಾರ,ಆ.08-

ಶಾಲೆಗಳ ಅಭಿವೃದ್ಧಿಗೆ, ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಮತ್ತು ಬಡ ವಿದ್ಯಾರ್ಥಿಗಳಿಗೆ, ಅನುಕೂಲವಾಗಲೆಂದು ತಟ್ಟೆ,ಲೋಟ, ಅಲ್ಮಾರ ನೀಡುವ ಮೂಲಕ ವಿದ್ಯಾರ್ಥಿಗಳಿಗೆ ನೇರವಾಗುತ್ತಿರುವುದು. ಉತ್ತಮ ಬೆಳವಣಿಗೆಯಾಗಿದೆ ಎಂದು ಸರ್ಕಾರಿ ಬಾಲಕರ ಪ್ರೌಢಶಾಲೆಯ ಪ್ರಭಾರಿ ಮು.ಗು. ರಾಜಶೇಖರ ದಿನ್ನಿ ಹೇಳಿದರು.

ಸರ್ಕಾರಿ ಬಾಲಕರ ಪ್ರೌಢಶಾಲೆಯ 2006-07 ಸಾಲಿನ ಎಸ್ ಎಸ್ ಎಲ್ ಸಿ ಬ್ಯಾಚಿನ ವಿದ್ಯಾರ್ಥಿಗಳು ಸೇರಿ ಪ್ರಸ್ತುತ ಶಾಲೆಯಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿ ಎಂಬ ಸದುದ್ದೇಶದಿಂದ ಪ್ರೌಢಶಾಲೆಯ ಋಣವನ್ನು ತೀರಿಸುವುದು ನಮ್ಮ ಕರ್ತವ್ಯವಾಗಿದೆ ಎಂದು 100 ಗ್ಲಾಸ್, 100 ಪ್ಲೇಟ್ಸ್, ಅಲಾ

3 ನೇ ಪುಟಕ್ಕೆ

ನೀರು ಹರಿದು ಗಬ್ಬು ನಾರುವ ರಸ್ತೆಯಲ್ಲಿ ಸೊಳ್ಳೆಗಳ ಕಾರ್ಬಾರ: ಸಾಬಣ್ಣ ವಗ್ಗರ್ ಆರೋಪ

ನಿಮ್ಮೂರ ಸುದ್ದಿ

ಯಾದಗಿರಿ,ಆ.08-

ಯಾದಗಿರಿ ಜಿಲ್ಲೆಯ ವಡಗೇರಿ ತಾಲೂಕಿನ ಕುರಕುಂದ ಗ್ರಾಮ ಪಂಚಾಯತ್ ವ್ಯಾಪ್ತಿಯ ಕುರುಕುಂದ ಗ್ರಾಮದ ವಾರ್ಡ್ ನಂಬರ್ ಮೂರರಲ್ಲಿ ಸುಮಾರು 3-4 ವರ್ಷಗಳಿಂದ ರಸ್ತೆ ಮೇಲೆ ರಸ್ತೆ ಉದ್ದಕ್ಕೂ ಕೊಳಚೆ ನೀರು ಹರಿದು ಗಬ್ಬು ನಾರುತಿದ್ದು ಇದೆ ಗಬ್ಬು ನಾರುವ ನೀರಲ್ಲಿ ಸಾರ್ವಜನಿಕರು ತಿರುಗಾಡುವಾಗ ಕಾಲು ಜಾರಿ ಬಿದ್ದಿದ್ದಾರೆ ಸದರಿ ರಸ್ತೆಯಲ್ಲಿ ಅಂಗವಿಕಲರು ವೃದ್ಧರು ಜೀವ ಹಿಡಿದುಕೊಂಡು ಈ ರಸ್ತೆಯಲ್ಲಿ ತಿರುಗಾಡಲು ತುಂಬಾ ಭಯಪಡುತ್ತಾರೆ ಮತ್ತು ರಾತ್ರಿಯ ಆದರೆ ಈ ಕೊಳಚೆ ನೀರಿನಿಂದ



ವಿಪರೀತ ಸೊಳ್ಳೆ ಕಾಟ ಆಗಿದೆ ಇದರಿಂದ ರೋಗರುಜನಗಳು ಬರುವುದು ಗ್ಯಾರಂಟಿ ಇಂಥ ಹಲವಾರು ನಿರ್ದೇಶನಗಳು ಕುರುಕುಂದ ಊರಲ್ಲಿ ಸಾಕಷ್ಟು ಇದೆ

3 ನೇ ಪುಟಕ್ಕೆ

ಪ್ರಧಾನಮಂತ್ರಿ ಆವಾಸ್ ಯೋಜನೆ: ವಿದ್ಯಾರ್ಥಿಗಳಿಂದ ವ್ಯಾಪಕ ಜಾಗೃತಿ ಮೂಡಲಿ-ಡಾ. ಶರಣಪ್ಪ ಸತ್ಯಪೇಟೆ

ಯೋಜನೆಯ ಮಾಹಿತಿ ಪಡೆದು ಮನೆರಹಿತರಿಗೆ ತಲುಪಿಸಿ, ರಾಷ್ಟ್ರ ನಿರ್ಮಾಣಕ್ಕೆ ಕೈಜೋಡಿಸಿ

ನಿಮ್ಮೂರ ಸುದ್ದಿ

ರಾಯಚೂರು,ಆ.08-

ಪ್ರಧಾನಮಂತ್ರಿ ಆವಾಸ್ ಯೋಜನೆಯ ಕುರಿತು ವಿದ್ಯಾರ್ಥಿಗಳು ಸಮಗ್ರ ಮಾಹಿತಿ ಪಡೆದು, ಯೋಜನೆಯ ಸೌಲಭ್ಯಗಳನ್ನು ಅರ್ಹ ಮನೆರಹಿತ ಕುಟುಂಬಗಳಿಗೆ ತಲುಪಿಸುವ ನಿಟ್ಟಿನಲ್ಲಿ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದು ರಾಯಚೂರು ಮಹಾನಗರ ಪಾಲಿಕೆ ವಲಯ ಆಯುಕ್ತ ಡಾ. ಶರಣಪ್ಪ ಸತ್ಯಪೇಟೆ ಕರೆ ನೀಡಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ರಾಯಚೂರು ಮಹಾನಗರ ಪಾಲಿಕೆ ಹಾಗೂ ರಾಜೀವ್ ಗಾಂಧಿ ವಸತಿ ನಿಗಮ



ನಿಯಮಿತ, ಬೆಂಗಳೂರು ಸಹಯೋಗದಲ್ಲಿ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಪ್ರಧಾನ ಮಂತ್ರಿ ಆವಾಸ್ ಯೋಜನೆ ನಗರ-10 ಹಾಗೂ 2.0 ಜಾಗೃತಿ ಕಾರ್ಯಕ್ರಮ ಮತ್ತು ವಿವಿಧ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು.

ದೇಶದಲ್ಲಿ ಯಾವುದೇ ಕುಟುಂಬವೂ ಮನೆರಹಿತವಾಗಿರಬಾರದು ಎಂಬ ಉದ್ದೇಶದಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಪ್ರಧಾನಮಂತ್ರಿ ಆವಾಸ್ ಯೋಜನೆ ಜಾರಿಗೊಳಿಸಿವೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರ ಅರ್ಹ ವರ್ಗಗಳ ಫಲಾನುಭವಿಗಳಿಗೆ ಮನೆ ನಿರ್ಮಾಣಕ್ಕೆ ವಿವಿಧ ಸೌಲಭ್ಯಗಳು ಹಾಗೂ ಸಹಾಯಧನ ದೊರೆಯುತ್ತಿದ್ದು, ಇದರ ಮಾಹಿತಿ ಸಾರ್ವಜನಿಕರಿಗೆ ತಲುಪಿಸುವಲ್ಲಿ ಯುವಜನರು ಪ್ರಮುಖ ಪಾತ್ರ ವಹಿಸಬೇಕು ಎಂದರು.

3 ನೇ ಪುಟಕ್ಕೆ

ಕಲ್ಯಾಣ ಕರ್ನಾಟಕದ ಮಾದಿಗರಿಗೆ ಸಚಿವ ಸ್ಥಾನ ನೀಡದೆ ಅನ್ಯಾಯ

ಸಂಪುಟ ವಿಸ್ತರಣೆಯಲ್ಲಿ ಕಡೆಗಣನೆ -ಜೆ.ಎಂ. ಮೌನೇಶ್

ನಿಮ್ಮೂರ ಸುದ್ದಿ

ರಾಯಚೂರು,ಆ.08-

ಕರ್ನಾಟಕ ಸರ್ಕಾರದ ಇತ್ತೀಚಿನ ಸಚಿವ ಸಂಪುಟ ವಿಸ್ತರಣೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಮಾದಿಗ ಸಮಾಜಕ್ಕೆ ಸೂಕ್ತ ಪ್ರಾತಿನಿಧ್ಯ ನೀಡದೆ ಅನ್ಯಾಯ ಮಾಡಲಾಗಿದೆ ಎಂದು ಶ್ರೀ ಮಾದಾರ ಚನ್ನಯ್ಯ ಸೇವಾಸಮಿತಿ ಜಿಲ್ಲಾಧ್ಯಕ್ಷ ಜೆ.ಎಂ. ಮೌನೇಶ್ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿವ ಸಂಪುಟ ವಿಸ್ತರಣೆಯಲ್ಲಿ ವಿವಿಧ ಸಮುದಾಯಗಳಿಗೆ ಪ್ರಾತಿನಿಧ್ಯ ಕಲ್ಪಿಸಲಾಗಿದೆ. ಆದರೆ ಪರಿಶಿಷ್ಟ ಜಾತಿಯ ಎಡ (ಮಾದಿಗ) ಸಮುದಾಯಕ್ಕೆ ಸಮರ್ಪಕ ಪ್ರಾತಿನಿಧ್ಯ ದೊರೆತಿಲ್ಲ. ವಿಶೇಷವಾಗಿ



ಕಲ್ಯಾಣ ಕರ್ನಾಟಕ ಭಾಗದ ಮಾದಿಗ ಸಮಾಜಕ್ಕೆ ಯಾವುದೇ ಸಚಿವ ಸ್ಥಾನ ನೀಡದಿರುವುದು ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಹೇಳಿದರು.

ಹಿಂದಿನ ಸಚಿವ ಸಂಪುಟದಲ್ಲಿಯೂ ಮಾದಿಗ ಸಮಾಜಕ್ಕೆ ಸೂಕ್ತ ಪ್ರಾತಿನಿಧ್ಯ ದೊರೆತಿಲ್ಲ ಎಂಬ ಅಸಮಾಧಾನವಿತ್ತು. ಇದೀಗಲೂ ಅದೇ ಧೋರಣೆ ಮುಂದುವರಿದಿದ್ದು, ಬೆಂಗಳೂರು ವಿಭಾಗದ ಮಾದಿಗ ನಾಯಕರಿಗೆ ಮಾತ್ರ ಅವಕಾಶ ಕಲ್ಪಿಸಲಾಗುತ್ತಿದೆ. ಕಲ್ಯಾಣ ಕರ್ನಾಟಕದ ಮಾದಿಗ ಸಮಾಜವನ್ನು ನಿರಂತರವಾಗಿ ಕಡೆಗಣಿಸಲಾಗುತ್ತಿದೆ ಎಂದು ಆಕ್ಷೇಪಿಸಿದರು.

ಚುನಾವಣೆ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕದ ಮಾದಿಗ ಸಮಾಜದ ಬೆಂಬಲ ಮತ್ತು ಮತಗಳನ್ನು ಬಯಸುವ ಕಾಂಗ್ರೆಸ್ ಪಕ್ಷ, ಅಧಿಕಾರ ಹಂಚಿಕೆ ಹಾಗೂ ಸಚಿವ ಸ್ಥಾನ ನೀಡುವ ಸಂದರ್ಭದಲ್ಲಿ ಈ ಭಾಗದ ಸಮುದಾಯಕ್ಕೆ ನ್ಯಾಯಯುತ ಅವಕಾಶ ನೀಡುತ್ತಿಲ್ಲ. ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಪಕ್ಷದ ರಾಜ್ಯ ನಾಯಕತ್ವ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ, ಕಲ್ಯಾಣ ಕರ್ನಾಟಕದ ಮಾದಿಗ ಸಮಾಜಕ್ಕೆ ಸಚಿವ ಸ್ಥಾನ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ನಿರ್ಲಕ್ಷಿಸಿದರೆ ಚುನಾವಣೆಯಲ್ಲಿ ಉತ್ತರ:

ಸಮುದಾಯದ ನ್ಯಾಯಯುತ ಬೇಡಿಕೆಯನ್ನು ಸರ್ಕಾರ

3 ನೇ ಪುಟಕ್ಕೆ

ಬರಪೀಡಿತ ಪ್ರದೇಶಗಳಿಗೆ ಸಚಿವ ಝುಮೀರ್ ಅಹ್ಮದ್ ಭೇಟಿ; ರೈತರಿಗೆ ಪರಿಹಾರದ ಭರವಸೆ

ಕೂಡ್ಲಿಗಿ/ವಿಜಯನಗರ, ಆ.8-

ಮಳೆಯ ಕೊರತೆಯಿಂದ ಬರದ ತೀವ್ರತೆ ಎದುರಿಸುತ್ತಿರುವ ಕೂಡ್ಲಿಗಿ ತಾಲೂಕಿನ ಮರಭ ಗ್ರಾಮಕ್ಕೆ ಸಂಪುಟ ದರ್ಜೆ ಸಚಿವ ಬಿ. ಝುಮೀರ್ ಅಹ್ಮದ್ ಖಾನ್ ಭೇಟಿ ನೀಡಿ ರೈತರ ಹೊಲಗಳನ್ನು ಪರಿಶೀಲಿಸಿ ಪರಿಸ್ಥಿತಿಯನ್ನು ಅವಲೋಕಿಸಿದರು.



ಬಿತ್ತನೆಯಾಗದೆ ಖಾಲಿ ಉಳಿದ ಜಮೀನುಗಳು ಹಾಗೂ ಶೇ.60ರಷ್ಟು ಬಿತ್ತನೆಯಾದರೂ ಮೊಳಕೆಯೊಡೆಯದ ಬೆಳೆಗಳನ್ನು ವೀಕ್ಷಿಸಿದ ಸಚಿವರು, ರೈತರೊಂದಿಗೆ ಸಮಾಲೋಚನೆ ನಡೆಸಿ ಸಮಸ್ಯೆಗಳನ್ನು ಆಲಿಸಿದರು.

ಈ ವೇಳೆ ಶಾಸಕ ಡಾ. ಶ್ರೀನಿವಾಸ್ ಎನ್.ಟಿ. ಮಾತನಾಡಿ, ಈ ಭಾಗ ಸಂಪೂರ್ಣ ಮಳೆ ಆಶ್ರಿತ ಪ್ರದೇಶವಾಗಿದ್ದು, ಮುಂಗಾರು ವಿಫಲವಾದಾಗ ರೈತರು ಸಾಲದ ಹೊರೆ ಹಾಗೂ ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಾರೆ ಎಂದು ಸಚಿವರ ಗಮನಕ್ಕೆ ತಂದರು.

ರೈತರಿಗೆ ಧೈರ್ಯ ತುಂಬಿದ ಸಚಿವ ಝುಮೀರ್ ಅಹ್ಮದ್ ಖಾನ್, ''ಆಗಸ್ಟ್ 15ರೊಳಗೆ ಬರ ಪರಿಸ್ಥಿತಿಯ ಸಂಪೂರ್ಣ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು. ರೈತರ ಹಿತರಕ್ಷಣೆಗೆ ಸರ್ಕಾರ ಬದ್ಧವಾಗಿದ್ದು, ಸೂಕ್ತ ಪರಿಹಾರ ಕ್ರಮ ಕೈಗೊಳ್ಳಲಾಗುವುದು'' ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೊಹಮ್ಮದ್ ಅಕ್ರಮ್ ಷಾ, ವಿವಿಧ ಇಲಾಖೆಗಳ ಅಧಿಕಾರಿಗಳು, ರೈತ ಮುಖಂಡರು, ರೈತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಸಿಂಧಿಗೇರಿಯಲ್ಲಿ ಬೆಳೆ ಹಾನಿ ಪರಿವೀಕ್ಷಣೆ: ರೈತರ ಕೃಷಿ ಸಂಕಷ್ಟಗಳಿಗೆ ಸ್ಪಂದಿಸುವ ಭರವಸೆ ನೀಡಿದ ಸಚಿವ ಬಿ.ನಾಗೇಂದ್ರ

ಬಳ್ಳಾರಿ,ಆ.08-

ಬೆಳೆಗಳಿಗೆ ನೀರಾವರಿ ಹಾಗೂ ವಿದ್ಯುತ್ ಪೂರೈಕೆಯಲ್ಲಿ ಎದುರಾಗಿರುವ ಸಮಸ್ಯೆಗಳನ್ನು ಶಾಸಕ ಗಣೇಶ್ ಅವರೊಂದಿಗೆ ಚರ್ಚಿಸಿ ಶೀಘ್ರವೇ ಪರಿಹರಿಸಲಾಗುವುದು ಎಂದು ಬಳ್ಳಾರಿ ಜಿಲ್ಲಾ ಅತಿವೃಷ್ಠಿ ಮತ್ತು ಬರ ಪರಿಸ್ಥಿತಿ ನಿರ್ವಹಣೆಯ ಮೇಲುಸ್ತುವಾರಿ ಸಚಿವ ಬಿ. ನಾಗೇಂದ್ರ ಅವರು ರೈತರಿಗೆ ಭರವಸೆ ನೀಡಿದರು.

ಕುರುಗೋಡು ತಾಲೂಕಿನ ಸಿಂಧಿಗೇರಿಯಲ್ಲಿ ಶುಕ್ರವಾರ ಬರ ಪರಿಸ್ಥಿತಿ ಹಾಗೂ ಬೆಳೆ ಹಾನಿ ಪರಿವೀಕ್ಷಣೆ ನಡೆಸಿ ರೈತರ ಕುಂದುಕೊರತೆ ಆಲಿಸಿದ ಸಚಿವರು, ಈ ಭಾಗದ ರೈತರ ಕೃಷಿ ಸಂಕಷ್ಟಗಳಿಗೆ ಸ್ಪಂದಿಸುವುದಾಗಿ ಹಾಗೂ ಈ ಭಾಗದ ಕೃಷಿಕರು ಎದುರಿಸುತ್ತಿರುವ ಸಂಕಷ್ಟಗಳಿಗೆ ಸರ್ಕಾರ ಶೀಘ್ರವೇ ಸ್ಪಂದಿಸಲಿದೆ ಎಂದು ಅಭಯ ನೀಡಿದರು.



ಗ್ರಾಮದ ಕೃಷಿ ಜಮೀನುಗಳಿಗೆ ಖುದ್ದಾಗಿ ಭೇಟಿ ನೀಡಿದ ಸಚಿವರು, ಮಳೆಯ ಅಭಾವದಿಂದ ಒಣಗಿ ಹೋಗಿರುವ ಬೆಳೆಗಳನ್ನು ವೀಕ್ಷಿಸಿದರು. ಬಳಿಕ ಸ್ಥಳೀಯ ರೈತರೊಂದಿಗೆ ಸಂವಾದ ನಡೆಸಿ, ಪ್ರಸ್ತುತ ಎದುರಾಗಿರುವ ಬರ ಪರಿಸ್ಥಿತಿ ಮತ್ತು ಬೆಳೆ ನಷ್ಟದ ಕುರಿತು ವಿವರ ಮಾಹಿತಿ ಪಡೆದುಕೊಂಡರು.

ಮಳೆಯ ಅಭಾವದಿಂದ ಹಾನಿಗೊಳಗಾದ ಬೆಳೆಗಳ ನಿಖರ ಸಮೀಕ್ಷೆ ನಡೆಸಿ ತಕ್ಷಣವೇ ವರದಿ ಸಲ್ಲಿಸುವಂತೆ ಕೃಷಿ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಸಂಕಷ್ಟದಲ್ಲಿರುವ ಪ್ರತಿಯೊಬ್ಬ ಅರ್ಹ ರೈತನಿಗೂ ನಿಯಮಾನುಸಾರ ಸೂಕ್ತ ಪರಿಹಾರ ಧನ ದೊರಕುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಆಶ್ವಾಸನೆ ನೀಡಿದರು.

ಕೇವಲ ಬೆಳೆ ನಷ್ಟ ಪರಿಹಾರ ಮಾತ್ರವಲ್ಲದೆ, ಕುಡಿಯುವ ನೀರು ಮತ್ತು ಮೇವಿನ ಅಭಾವ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಲು ಸಂಬಂಧಪಟ್ಟ ಇಲಾಖೆಗಳಿಗೆ ಸೂಚಿಸಲಾಗಿದೆ. ರೈತರ ಹಿತ ಕಾಯುವುದು ಸರ್ಕಾರದ ಮೊದಲ ಆದ್ಯತೆಯಾಗಿದ್ದು, ಯಾವುದೇ ಕಾರಣಕ್ಕೂ ಕೃಷಿಕರು ಧೃತಿಗೆಡಬಾರದು ಎಂದು ಸಚಿವರು ವಿನಂತಿಸಿಕೊಂಡರು.

ಈ ವೇಳೆ ತಮ್ಮ ಅಳಲು ತೋಡಿಕೊಂಡ ರೈತರು, ಕೆಂಪು ರೋಗ ಹಾಗೂ ಪೋಷಕಾಂಶ ಕೊರತೆಯಿಂದ ಹತ್ತಿ ಮತ್ತು ಸೂರ್ಯಕಾಂತಿ ಬೆಳೆಗಳು ಹಾಳಾಗಿವೆ. ಮುಂದೆ ಬಿಳಿ ಜೋಳ ಬಿತ್ತನೆ ಮಾಡಲು ನಾಲೆ ನೀರು ಅಗತ್ಯವಿದೆ. ಆದರೆ, ಕುಡುತಿನಿ ಬಳಿಯ ಡಿ7 ಉಪಕಾಲುವೆಯಿಂದ 500 ಕ್ಯೂಸೆಕ್ ಬದಲು ಕೇವಲ 290 ಕ್ಯೂಸೆಕ್ ನೀರು ಹರಿಸುತ್ತಿರುವುದರಿಂದ 37 ಕಿ.ಮೀ ದೂರದ ಸಿಂಧಿಗೇರಿಗೆ ನೀರು ತಲುಪುತ್ತಿಲ್ಲ. ಅಲ್ಲದೆ, ನೀರುಗಂಟಿಗಳ ಸಂಖ್ಯೆ ಕಡಿಮೆಯಾಗಿರುವುದು ಸಮಸ್ಯೆಯನ್ನು ಮತ್ತಷ್ಟು ಉಲ್ಬಣಗೊಳಿಸಿದೆ ಎಂದು ಸಚಿವರಿಗೆ ಮನವರಿಕೆ ಮಾಡಿಕೊಟ್ಟರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್, ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ತಹಸೀಲ್ದಾರ್ ನರಸಪ್ಪ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಗರ್ಜಪ್ಪ ಹಾಗೂ ಪ್ರಮುಖ ರೈತರು ಉಪಸ್ಥಿತರಿದ್ದರು.

ಬರ ಪರಿಸ್ಥಿತಿ ನಿರ್ವಹಣೆ: ಅಧಿಕಾರಿಗಳು ಕಡ್ಡಾಯವಾಗಿ ಕ್ಷೇತ್ರ ಭೇಟಿ ನೀಡಲು ಸಚಿವ ಬಿ. ನಾಗೇಂದ್ರ ಸೂಚನೆ

ಬಳ್ಳಾರಿ,ಆ.08

ಜಿಲ್ಲೆಯಲ್ಲಿ ಉಂಟಾಗಿರುವ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಮತ್ತು ಸಂಕಷ್ಟದಲ್ಲಿರುವ ರೈತರ ನೆರವಿಗೆ ಧಾವಿಸಲು ಸರ್ಕಾರದ ಆದೇಶದಂತೆ ಎಲ್ಲಾ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಕ್ಷೇತ್ರ ಭೇಟಿ ನಡೆಸಬೇಕು ಎಂದು ಕರ್ನಾಟಕ ಸರ್ಕಾರದ ಸಂಪುಟ ದರ್ಜೆ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಅತಿವೃಷ್ಠಿ ಮತ್ತು ಬರ ಪರಿಸ್ಥಿತಿ ನಿರ್ವಹಣೆಯ ಮೇಲುಸ್ತುವಾರಿ ಸಚಿವ ಬಿ. ನಾಗೇಂದ್ರ ಅವರು ಹೇಳಿದರು.



ಗುರುವಾರದಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಏರ್ಪಡಿಸಿದ್ದ ಜಿಲ್ಲೆಯ ಬರಪರಿಸ್ಥಿತಿ ಕುರಿತು ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿಗಳ ಕಟ್ಟುನಿಟ್ಟಿನ ನಿರ್ದೇಶನದಂತೆ ಯಾವುದೇ ಅಧಿಕಾರಿಗಳು ಕೇಂದ್ರಸ್ಥಾನ ಬಿಡದೆ, ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿಯನ್ನು ವೀಕ್ಷಿಸಬೇಕು. 'ನಾವು ನಿಮ್ಮೊಂದಿಗಿದ್ದೇವೆ' ಎಂಬ ಧೈರ್ಯವನ್ನು ರೈತರಲ್ಲಿ ತುಂಬುವುದು ಸರ್ಕಾರದ ಮುಖ್ಯ ಉದ್ದೇಶವಾಗಿದೆ ಎಂದರು.

ರೈತರು ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸುವಂತೆ ಜಾಗೃತಿ ಮೂಡಿಸಲು ವಿಶೇಷ ಡ್ರೈವ್ ಮಾಡಬೇಕು ಎಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಮಧ್ಯಪ್ರವೇಶಿಸಿ, ಅಧಿಕಾರಿಗಳ ಜಾಗೃತಿಯ ಫಲವಾಗಿ ಪ್ರಸ್ತುತ ನೋಂದಾಯಿತ ರೈತರ ಸಂಖ್ಯೆ 37,000ಕ್ಕೆ ಏರಿಕೆಯಾಗಿದೆ. ಆಗಸ್ಟ್ 14ರವರೆಗೆ ಸಮಯಾವಕಾಶವಿದ್ದು, ಕನಿಷ್ಠ 60,000ದಿಂದ 75,000 ರೈತರನ್ನು ವಿಮಾ ವ್ಯಾಪ್ತಿಗೆ ತರುವ ಗುರಿ ಹೊಂದಲಾಗಿದೆ ಎಂದು ಸಚಿವರ ಗಮನಕ್ಕೆ ತಂದರು.

ಜಿಲ್ಲೆಯಲ್ಲಿ ಒಟ್ಟು 57,000 ಹೆಕ್ಟೇರ್ ಪ್ರದೇಶದಲ್ಲಿ ಒಣಬೇಸಾಯ (ಖುಷ್ಕಿ) ಮತ್ತು ಸಂರಕ್ಷಿತ ನೀರಾವರಿ ಬೆಳೆಗಳು ಹಾನಿಗೊಳಗಾಗಿವೆ ಎಂದು ಕಂದಾಯ ಮತ್ತು ಕೃಷಿ ಇಲಾಖೆಯ ಜಂಟಿ ಸಮೀಕ್ಷೆಯಿಂದ ಅಂದಾಜಿಸಲಾಗಿದೆ. ಪ್ರಸ್ತುತ ಭತ್ತದ ಬೆಳೆಗೆ ವಿಮೆ ಮಾಡಿಸಲು ಅವಕಾಶವಿದ್ದು, ರಾಗಿ ಮತ್ತು ಜೋಳದಂತಹ ಬೆಳೆಗಳಿಗೆ ಗಡುವು ಮುಕ್ತಾಯಗೊಂಡಿದೆ. ನಷ್ಟಕ್ಕೊಳಗಾದ ರೈತರಿಗೆ ಸೂಕ್ತ ಪರಿಹಾರ ಸಿಗುವಂತೆ ಪಟ್ಟಿ ಸಿದ್ಧಪಡಿಸಲು ನಿರ್ದೇಶಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಕೊರತೆಯಿಲ್ಲ. ಪ್ರಸ್ತುತ 69,877 ಮೆಟ್ರಿಕ್ ಟನ್ ಗೊಬ್ಬರ ದಾಸ್ತಾನಿದ್ದು, ಯೂರಿಯಾ ಮತ್ತು ಡಿಎಪಿ ಗೊಬ್ಬರಗಳಿಗೆ ಹೆಚ್ಚಿನ ಬೇಡಿಕೆಯಿದೆ. ಕೃತಕ ಅಭಾವ ಸೃಷ್ಟಿಯಾಗದಂತೆ ತಡೆಯಲು 'ಫ್ರೂಟ್ಸ್' ತಂತ್ರಾಂಶದ ಫಾರ್ಮರ್ ಐಡಿ ಆಧರಿಸಿ ಗೊಬ್ಬರ ವಿತರಿಸಲಾಗುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕ ಸೋಮ್ ಸುಂದರ್ ಅವರು ಹೇಳಿದರು. ಸಚಿವ ಬಿ.ನಾಗೇಂದ್ರ ಅವರು ಮಾತನಾಡಿ, ರಸಗೊಬ್ಬರ ಖರೀದಿಸುವಾಗ ರೈತರಿಗೆ ಅನಗತ್ಯವಾಗಿ ಇತರ ಸೂಕ್ಷ್ಮ ಪೋಷಕಾಂಶಗಳನ್ನು ಬಲವಂತವಾಗಿ ಜೋಡಿಸಿ ಮಾರಾಟ ಮಾಡುವ ಸಾಗಣೆದಾರರು ಮತ್ತು ಡೀಲರ್‌ಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ನಿಯಮ ಉಲ್ಲಂಘಿಸುವ ಮಾರಾಟಗಾರರ ವಿರುದ್ಧ ರಸಗೊಬ್ಬರ ನಿಯಂತ್ರಣ ಕಾಯ್ದೆ ಹಾಗೂ ಅಗತ್ಯ ವಸ್ತುಗಳ ಕಾಯ್ದೆಯಡಿ ಪ್ರಕರಣ ದಾಖಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ನೀರಾವರಿ ನೀರು ಕೊರತೆ ಎದುರಾಗುತ್ತಿರುವ ಹಿನ್ನೆಲೆಯಲ್ಲಿ, ಸಾಂಪ್ರದಾಯಿಕ ನೀರು ಭರಿತ ಭತ್ತದ ಬೇಸಾಯದ ಬದಲು ಕೂರಿಗೆ ಪದ್ಧತಿ ಮೂಲಕ ಭತ್ತ ಬೆಳೆಯಲು ರೈತರನ್ನು ಪ್ರೋತ್ಸಾಹಿಸುವ ಕೆಲಸ ಮಾಡಬೇಕು. ಸಾಂಪ್ರದಾಯಿಕ ಪದ್ಧತಿಗೆ ಹೋಲಿಸಿದರೆ ಕೂರಿಗೆ ಪದ್ಧತಿಯಲ್ಲಿ ಶೇ. 60 ರಷ್ಟು ನೀರು ಉಳಿತಾಯವಾಗಲಿದ್ದು, ಕೇವಲ ಶೇ. 40 ರಷ್ಟು ನೀರಿನ ಅಗತ್ಯವಿರುತ್ತದೆ. ಈ ಪದ್ಧತಿಯಲ್ಲಿ ಪ್ರತಿ ಹೆಕ್ಟೇರ್‌ಗೆ 62.5 ಕೆಜಿ ಬೀಜ ಬೇಕಿದ್ದರೆ, ಕೂರಿಗೆ ಪದ್ಧತಿಯಲ್ಲಿ ಕೇವಲ 12.5 ಕೆಜಿ ಬೀಜ ಸಾಕು. ಇದರಿಂದ ರೈತರ ಉತ್ಪಾದನಾ ವೆಚ್ಚ ಗಣನೀಯವಾಗಿ ಕಡಿಮೆಯಾಗುತ್ತದೆ. ಸಾಮಾನ್ಯ ಪದ್ಧತಿಯಲ್ಲಿ ಪ್ರತಿ ಹೆಕ್ಟೇರ್‌ಗೆ 60 ರಿಂದ 70 ಕ್ವಿಂಟಲ್ ಇಳುವರಿ ಬಂದರೆ, ಕೂರಿಗೆ ಪದ್ಧತಿಯಲ್ಲಿ 40 ರಿಂದ 45 ಕ್ವಿಂಟಲ್ (ಕೆಲವು ಕಡೆ 60 ಕ್ವಿಂಟಲ್ ವರೆಗೂ) ಇಳುವರಿ ಪಡೆಯಬಹುದಾಗಿದೆ ಎಂದು ತಿಳಿಸಿದರು.

ಜಂಟಿ ಕೃಷಿ ನಿರ್ದೇಶಕ ಕೆ.ಸೋಮಸುಂದರ್ ಅವರು ಮಾತನಾಡಿ, ಜಿಲ್ಲೆಯ ಅಚ್ಚುಕಟ್ಟು ಪ್ರದೇಶದಲ್ಲಿ ಒಟ್ಟು 1,18,000 ಹೆಕ್ಟೇರ್ ನೀರಾವರಿ ಭೂಮಿ ಇದ್ದು, ನಾನ್-ಅಚ್ಚುಕಟ್ಟು ಪ್ರದೇಶದಲ್ಲಿ ಸುಮಾರು 41,000 ಹೆಕ್ಟೇರ್ ಒಣಭೂಮಿ ಇದೆ. ಈಗಾಗಲೇ ಜಿಲ್ಲೆಯಾದ್ಯಂತ ಸುಮಾರು 1,500 ಹೆಕ್ಟೇರ್ ಪ್ರದೇಶದಲ್ಲಿ ಕೂರಿಗೆ ಪದ್ಧತಿಯನ್ನು ಅಳವಡಿಸಿಕೊಳ್ಳಲಾಗಿದೆ. ಸಿರುಗುಪ್ಪ ತಾಲೂಕಿನಲ್ಲಿ ಸುಮಾರು 3,000 ಹೆಕ್ಟೇರ್ ಹಾಗೂ ಬಳ್ಳಾರಿ ತಾಲೂಕಿನ ಕೃಷ್ಣಾನಗರ ಕ್ಯಾಂಪ್ ಸುತ್ತಮುತ್ತಲಿನ ಭಾಗಗಳಲ್ಲಿ ರೈತರು ಈ ಪದ್ಧತಿಯನ್ನು ಯಶಸ್ವಿಯಾಗಿ ಅಳವಡಿಸಿಕೊಂಡಿದ್ದಾರೆ ಎಂದು ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯ ಎಲ್ಲಾ 13 ಹೋಬಳಿಗಳಲ್ಲಿ ಜಾಗೃತಿ ಕಾರ್ಯಕ್ರಮಗಳ ಮೂಲಕ ಕೂರಿಗೆ ಪದ್ಧತಿಯ ಬಗ್ಗೆ ಜಾಗೃತಿ ಮೂಡಿಸಲಾಗಿದೆ. ಜಿಲ್ಲಾಧಿಕಾರಿಗಳ ಸೂಚನೆ ಮೇರೆಗೆ ತಾಲೂಕು ಮಟ್ಟದಲ್ಲಿ ರೈತ ಮುಖಂಡರನ್ನು ಕರೆದು ಸಭೆ ನಡೆಸಲಾಗಿದೆ. ನೀರಿನ ಅಭಾವವಿರುವ ಪ್ರಸ್ತುತ ಸನ್ನಿವೇಶದಲ್ಲಿ ಕುಡಿಯುವ ನೀರು ಮತ್ತು ಕೃಷಿ ನಡುವೆ ಸಮತೋಲನ ಕಾಯ್ದುಕೊಳ್ಳಲು ಈ ಪದ್ಧತಿ ಅತ್ಯಂತ ಸೂಕ್ತವಾಗಿದ್ದು, ಹೆಚ್ಚಿನ ರೈತರು ಇದನ್ನು ಅಳವಡಿಸಿಕೊಳ್ಳುವಂತೆ ಮನವಿ ಮಾಡಲಾಗಿದೆ ಎಂದು ತಿಳಿಸಿದರು.

ಬಳ್ಳಾರಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಅಭಾವವಾಗದಂತೆ ನೋಡಿಕೊಳ್ಳಬೇಕು. ಬಳ್ಳಾರಿ ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಕುಡಿಯುವ ನೀರಿನ ಅಭಾವ ತೀವ್ರಗೊಳ್ಳುತ್ತಿದ್ದು, ಜಿಲ್ಲೆಯ ಕೆರೆಗಳಲ್ಲಿ ನೀರಿನ ಮಟ್ಟ ಆತಂಕಕಾರಿ ರೀತಿಯಲ್ಲಿ ಕುಸಿದಿದೆ. ಜಿಲ್ಲಾಡಳಿತ ಹಾಗೂ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಸೂಕ್ತ ಕಾರ್ಯಯೋಜನೆ ರೂಪಿಸಿ ನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಸಂಡೂರು ಭಾಗದ ಮೆಟ್ರಿಕಿ ಮತ್ತು ವಿಟ್ಲಾಪುರ ಭಾಗಗಳಲ್ಲಿ ಜಾನುವಾರುಗಳ ಮೇವಿಗೆ ತೀವ್ರ ಅಭಾವ ಎದುರಾಗಿದೆ. ಈ ಪೈಕಿ ವಿಟ್ಲಾಪುರದಲ್ಲಿ ಮೇವಿಗೆ ಹೆಚ್ಚಿನ ಬೇಡಿಕೆಯಿದೆ. ನೀರಾವರಿ ಸೌಲಭ್ಯವಿರುವ ರೈತ ಕುಟುಂಬಕ್ಕೆ ಕಿಟ್‌ಗಳನ್ನು ವಿತರಣೆ ಮಾಡಬೇಕು. ಬರ ಘೋಷಣೆಯಾಗುವವರೆಗೆ ಕಾಯದೆ, ಸದ್ಯದ ಅಭಾವ ಪೂರೈಸಲು ಜಿಲ್ಲೆಯಾದ್ಯಂತ ಪ್ರತಿಯೊಂದು ಮನೆಗೆ ತೆರಳಿ ಜಾನುವಾರುಗಳ ಸಮೀಕ್ಷೆ ನಡೆಸಬೇಕು ಎಂದು ಪಶು ಸಂಗೋಪನಾ ಇಲಾಖಾಧಿಕಾರಿಗಳಿಗೆ ತಿಳಿಸಿದರು.

★ಉದ್ಯೋಗ ಖಾತ್ರಿ ಯೋಜನೆ ಸಮರ್ಪಕ ಅನುಷ್ಠಾನ:★

ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಜುಲೈ 1ರಿಂದ ಜಾರಿಗೆ ಬಂದಿರುವ ವಿ ಬಿ ಜಿ ರಾಮ್ ಜಿ ಹೊಸ ಮಾರ್ಗದರ್ಶನದಂತೆ ಉದ್ಯೋಗ ದಿನಗಳನ್ನು 100ರಿಂದ 125 ದಿನಗಳಿಗೆ ಹೆಚ್ಚಿಸಲಾಗಿದೆ. ಕೂಲಿ ಪ್ರಮಾಣವನ್ನು ರೂ.370 ರಿಂದ ರೂ.382 ಕ್ಕೆ ಏರಿಸಲಾಗಿದೆ. ಕೂಲಿ ಪಾವತಿಯಲ್ಲಿ ಶೇ. 40ರಷ್ಟು ಹಣವನ್ನು ರಾಜ್ಯ ಸರ್ಕಾರವೇ ಭರಿಸಬೇಕಾಗಿದ್ದು, ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

ಪ್ರಸ್ತುತ ರಾಜ್ಯದಲ್ಲಿ ಬಳ್ಳಾರಿ ಜಿಲ್ಲೆಯು ಉದ್ಯೋಗ ಖಾತ್ರಿ ಅನುಷ್ಠಾನದಲ್ಲಿ 2ನೇ ಸ್ಥಾನದಲ್ಲಿದೆ. ಇದರಲ್ಲಿ ಕಾಲುವೆ ಸ್ವಚ್ಛತೆ ಜೊತೆಗೆ ದನದ ಕೊಟ್ಟಿಗೆ, ಕೋಳಿ ಶೆಡ್, ಕೃಷಿ ಹೊಂಡ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಪ್ರತಿ ತಾಲೂಕಿನಲ್ಲಿ ಲಭ್ಯವಿರುವ 10 ಎಕರೆ ಸರ್ಕಾರಿ/ಗೋಮಾಳ ಜಮೀನಿನಲ್ಲಿ ದೊಡ್ಡ ಕೆರೆ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಸಭೆಯಲ್ಲಿ ಯಾವುದೇ ಕಾರಣಕ್ಕೂ ತಪ್ಪು ಅಥವಾ ಗೊಂದಲಕಾರಿ ಮಾಹಿತಿ ನೀಡಬಾರದು. ಯಾವುದೇ ನ್ಯೂನತೆಗಳಿದ್ದರೂ ನೇರವಾಗಿ ತಿಳಿಸಿದರೆ ಅದನ್ನು ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳಿಗೆ ಸ್ಪಷ್ಟಪಡಿಸಿದರು.

ಜಿಲ್ಲೆಯ ಅಭಿವೃದ್ಧಿಗೆ ಮತ್ತು ನೂತನ ಆಲೋಚನೆಗಳನ್ನು ಅನುಷ್ಠಾನಗೊಳಿಸಲು ಅಧಿಕಾರಿಗಳಿಗೆ ಆಡಳಿತಾತ್ಮಕವಾಗಿ ಸಂಪೂರ್ಣ ಮುಕ್ತ ಸ್ವಾತಂತ್ರ್ಯ ನೀಡಲಾಗುವುದು. ಸರ್ಕಾರದ ಹಣ ದುರುಪಯೋಗವಾಗದಂತೆ ತಡೆದು, ಪರಿಣಾಮಕಾರಿಯಾಗಿ ಕೆಲಸ ಮಾಡಲು ಕರೆ ನೀಡಿದರು.

ಸಭೆಯಲ್ಲಿ ಡಾ.ಬಾಬು ಜಗಜೀವನರಾಂ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮೇಯರ್ ಪಿ.ಗಾದೆಪ್ಪ, ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೊರೇಷನ್ ಲಿಮಿಟೆಡ್ ನ ಉಪಾಧ್ಯಕ್ಷ ಹೆಚ್.ಲಕ್ಷ್ಮಣ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್ ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್ ಬಸವರಾಜ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್. ಮಂಜುನಾಥ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಎಲ್ಲಾ ತಾಲೂಕು ತಹಶೀಲ್ದಾರರು ಹಾಗೂ ಇತರರು ಉಪಸ್ಥಿತರಿದ್ದರು.



ಬೀದರ್ ವಿಶ್ವವಿದ್ಯಾಲಯದ ಸಮಸ್ಯೆ ಪರಿಹಾರಕ್ಕೆ ಒತ್ತಾಯಿಸಿ ಮನವಿ

ಬೀದರ್,ಆ.8-

ಹಾಲಹಳ್ಳಿ ಸಮೀಪದ ಬೀದರ್ ವಿಶ್ವವಿದ್ಯಾಲಯದಲ್ಲಿ ವಿವಿಧ ಸಮಸ್ಯೆಗಳು ತಲೆದೋರಿದ್ದು, ಅವುಗಳನ್ನು ತಕ್ಷಣವೇ ಪರಿಹರಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ಪರಿವರ್ತನ ಸಂಘದ ಪದಾಧಿಕಾರಿಗಳು ಕುಲಪತಿಗೆ ಮನವಿ ಸಲ್ಲಿಸಿದರು.

ಗುರುವಾರ ಸಲ್ಲಿಸಿದ ಮನವಿಯಲ್ಲಿ, ವಿಶ್ವವಿದ್ಯಾಲಯದಲ್ಲಿ ಪರೀಕ್ಷೆ ಹಾಗೂ ಪ್ರವೇಶ ಶುಲ್ಕವನ್ನು ಹೆಚ್ಚಿಸಲಾಗಿದ್ದು, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಶುಲ್ಕವನ್ನು ಕೂಡಲೇ ಕಡಿಮೆಗೊಳಿಸಬೇಕು ಎಂದು ಆಗ್ರಹಿಸಲಾಗಿದೆ.

ಪ್ರಶ್ನೆ ಪತ್ರಿಕೆಗಳ ಮುದ್ರಣಕ್ಕೆ ಹಣ ಬಿಡುಗಡೆ ಮಾಡಿ ಟೆಂಡರ್ ನೀಡಿದ್ದರೂ ಮುದ್ರಿತ ಪ್ರಶ್ನೆ ಪತ್ರಿಕೆಗಳು ಪರೀಕ್ಷಾ ಕೇಂದ್ರಗಳಿಗೆ ತಲುಪದೆ, ಜೆರಾಕ್ಸ್ ಪ್ರತಿಗಳನ್ನು ವಿತರಿಸಲಾಗಿದೆ ಎಂದು ಆರೋಪಿಸಲಾಗಿದೆ. ಅಲ್ಲದೆ, ಕ್ರೀಡಾ ವಿಭಾಗಕ್ಕೆ ಸಮರ್ಪಕ ಪ್ರೋತ್ಸಾಹ ನೀಡದ ಕಾರಣ ಪ್ರತಿಭಾವಂತ ವಿದ್ಯಾರ್ಥಿಗಳು ರಾಜ್ಯ ಹಾಗೂ ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಸಾಧ್ಯವಾಗುತ್ತಿಲ್ಲ ಎಂದು ದೂರಲಾಗಿದೆ.

ವಿಶ್ವವಿದ್ಯಾಲಯ ವ್ಯಾಪ್ತಿಯ ಸುಮಾರು 24 ಬಿ.ಎಡ್. ಕಾಲೇಜುಗಳಲ್ಲಿ 20 ಕಾಲೇಜುಗಳು ಮುಕ್ತ ವಿಶ್ವವಿದ್ಯಾಲಯದ ಮಾದರಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಕೆಲವು ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ತರಗತಿಗಳಿಗೆ ಹಾಜರಾಗದೆ ನೇರವಾಗಿ ಪರೀಕ್ಷೆಗೆ ಹಾಜರಾಗುತ್ತಿರುವುದು, ಗೈರುಹಾಜರಾಗಿದ್ದ ವಿದ್ಯಾರ್ಥಿಗಳ ನಕಲಿ ಸಹಿ ಪಡೆದು ಹಣ ಪಡೆದು ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗುತ್ತಿದೆ ಎಂಬ ಆರೋಪವೂ ಮನವಿಯಲ್ಲಿ ಮಾಡಲಾಗಿದೆ.

ಕೆಲವು ಅತಿಥಿ ಉಪನ್ಯಾಸಕರು ನಕಲಿ ಪಿಎಚ್.ಡಿ. ಪದವಿ ಪ್ರಮಾಣಪತ್ರಗಳ ಆಧಾರದ ಮೇಲೆ ನೇಮಕಗೊಂಡಿರುವ ಶಂಕೆ ವ್ಯಕ್ತಪಡಿಸಿ, ಅವರ ಪದವಿ ಪ್ರಮಾಣಪತ್ರಗಳ ಪರಿಶೀಲನೆ ನಡೆಸಬೇಕು. ಜೊತೆಗೆ ಡಿಜಿಟಲ್ ಮೌಲ್ಯಮಾಪನ ಪದ್ಧತಿಯನ್ನು ತಕ್ಷಣವೇ ಕೈಬಿಡಬೇಕು ಎಂದು ಒತ್ತಾಯಿಸಲಾಗಿದೆ.


ಈ ಎಲ್ಲ ಆರೋಪಗಳ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಎರಡು ದಿನಗಳೊಳಗೆ ಕಾನೂನು ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ವಿಶ್ವವಿದ್ಯಾಲಯ ಆವರಣದಲ್ಲಿ ಉಪವಾಸ ಸತ್ಯಾಗ್ರಹ ನಡೆಸಲಾಗುವುದು ಎಂದು ಕರ್ನಾಟಕ ಪರಿವರ್ತನ ಸಂಘ ಎಚ್ಚರಿಕೆ ನೀಡಿದೆ.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾಧ್ಯಕ್ಷ ಪವನಕುಮಾರ್ ಮಿಠಾರೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭೀಮರಾವ್ ಮಾಲಗತ್ತಿ, ನಾಗಸೇನಾ ಗಾಯಕವಾಡ್, ಮಹೇಶ್ ಭಾವಿದೊಡ್ಡಿ ಹಾಗೂ ನಿತೀಶ್ ಸಿಂಧೆ ಸೇರಿದಂತೆ ವಿಶ್ವವಿದ್ಯಾಲಯದ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿ ತಡೆಗೆ ಕಟ್ಟುನಿಟ್ಟಿನ ಕ್ರಮ: ಡಿಸಿ

ಕಲಬುರಗಿ,ಆ.08-

ಜಿಲ್ಲೆಯಲ್ಲಿ ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿ, ಮಕ್ಕಳ ಭಿಕ್ಷಾಟನೆ ಹಾಗೂ ಪೋಕ್ಸೋ ಪ್ರಕರಣಗಳನ್ನು ಸಂಪೂರ್ಣವಾಗಿ ತಡೆಗಟ್ಟಲು ಜಿಲ್ಲಾಡಳಿತ, ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಮನ್ವಯದೊಂದಿಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಸೂಚಿಸಿದರು.



ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಜಿಲ್ಲಾ ಮಟ್ಟದ ಮಕ್ಕಳ ಮೇಲ್ವಿಚಾರಣಾ ಸಮಿತಿ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ, ಮುಖ್ಯಮಂತ್ರಿ ಬಾಲಸೇವಾ ಯೋಜನೆ ಹಾಗೂ ಪಿಎಂ ಕೇರ್ಸ್ ಫಾರ್ ಚಿಲ್ಡ್ರನ್ ಯೋಜನೆಗಳ ಜಿಲ್ಲಾ ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರಿ ಹಾಗೂ ಸ್ವಯಂಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿರುವ ಬಾಲಮಂದಿರಗಳಿಗೆ ಸಂಬಂಧಿಸಿದ ಅಧಿಕಾರಿಗಳು ಪ್ರತಿ ತಿಂಗಳು ಕಡ್ಡಾಯವಾಗಿ ಭೇಟಿ ನೀಡಿ ನೈರ್ಮಲ್ಯ, ಭದ್ರತೆ ಹಾಗೂ ಮೂಲಸೌಕರ್ಯಗಳನ್ನು ಪರಿಶೀಲಿಸಿ ವರದಿ ಸಲ್ಲಿಸಬೇಕು ಎಂದು ನಿರ್ದೇಶನ ನೀಡಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಮಾತನಾಡಿ, ಪೋಕ್ಸೋ ಪ್ರಕರಣಗಳ ತನಿಖೆಯನ್ನು ತ್ವರಿತವಾಗಿ ಪೂರ್ಣಗೊಳಿಸಿ 60 ದಿನಗಳೊಳಗೆ ದೋಷಾರೋಪಣಾ ಪಟ್ಟಿ ಸಲ್ಲಿಸಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ವಿ. ಮಂಜುಳಾ ಪಾಟೀಲ್ ಮಾಹಿತಿ ನೀಡಿ, ಜಿಲ್ಲೆಯಲ್ಲಿ ಇದುವರೆಗೆ 71 ಬಾಲ್ಯವಿವಾಹ, 22 ಬಾಲಕಾರ್ಮಿಕ, 16 ಪೋಕ್ಸೋ ಹಾಗೂ 14 ಮಕ್ಕಳ ಭಿಕ್ಷಾಟನೆ ಪ್ರಕರಣಗಳು ದಾಖಲಾಗಿವೆ ಎಂದು ಹೇಳಿದರು.

ಈವರೆಗೆ 198 ಮಕ್ಕಳನ್ನು ಸುರಕ್ಷಿತವಾಗಿ ಪೋಷಕರ ವಶಕ್ಕೆ ಒಪ್ಪಿಸಲಾಗಿದ್ದು, ಮಕ್ಕಳ ಸಹಾಯವಾಣಿಗೆ ಬಂದ 293 ಕರೆಗಳ ಪೈಕಿ 285 ದೂರುಗಳನ್ನು ಇತ್ಯರ್ಥಪಡಿಸಲಾಗಿದೆ. ವಿಶೇಷ ಕಾರ್ಯಾಚರಣೆಗಳ ಮೂಲಕ 22 ಬಾಲಕಾರ್ಮಿಕರು ಹಾಗೂ 13 ಭಿಕ್ಷಾಟನೆಯಲ್ಲಿ ತೊಡಗಿದ್ದ ಮಕ್ಕಳನ್ನು ರಕ್ಷಿಸಿ ಪುನರ್ವಸತಿ ಕಲ್ಪಿಸಲಾಗಿದೆ. ಅಲ್ಲದೆ 80 ಬಾಲಕಿಯರು ಹಾಗೂ ಒಬ್ಬ ಬಾಲಕನ ಬಾಲ್ಯವಿವಾಹವನ್ನು ತಡೆಗಟ್ಟಲಾಗಿದೆ ಎಂದು ವಿವರಿಸಿದರು. ಆಸ್ಪತ್ರೆಗಳಲ್ಲಿ ಅಪ್ರಾಪ್ತ ವಯಸ್ಸಿನ ಗರ್ಭಧಾರಣೆ ಪ್ರಕರಣಗಳು ಕಂಡುಬಂದಲ್ಲಿ ಕಡ್ಡಾಯವಾಗಿ ಮೆಡಿಕೋ-ಲೀಗಲ್ ಪ್ರಕರಣ ದಾಖಲಿಸಿ, ಆರ್‌ಸಿಎಚ್ ಪೋರ್ಟಲ್ ಹಾಗೂ ತಾಯಿ ಕಾರ್ಡ್ ಆಧಾರದ ಮೇಲೆ ಎಫ್‌ಐಆರ್ ದಾಖಲಿಸುವಂತೆ ಜಿಲ್ಲಾಧಿಕಾರಿ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಪೋಕ್ಸೋ ಹಾಗೂ ಬಾಲ್ಯವಿವಾಹ ಸಂತ್ರಸ್ತ ಮಕ್ಕಳು, ಎಚ್‌ಐವಿ ಸೋಂಕಿತ ಪೋಷಕರ ಮಕ್ಕಳು ಹಾಗೂ ಸಂಕಷ್ಟದಲ್ಲಿರುವ ಮಕ್ಕಳಿಗೆ ವಿವಿಧ ಯೋಜನೆಗಳಡಿ ನೆರವು ನೀಡಲಾಗುತ್ತಿದೆ ಎಂದು ಮಾಹಿತಿ ನೀಡಲಾಯಿತು.

ಪ್ರಾಯೋಜಕತ್ವ ಯೋಜನೆಯಡಿ 18 ವರ್ಷದೊಳಗಿನ ಅನಾಥ, ಕುಷ್ಠರೋಗ ಪೀಡಿತರ ಹಾಗೂ ಸಂಕಷ್ಟದಲ್ಲಿರುವ ಮಕ್ಕಳಿಗೆ ಮಾಸಿಕ 4 ಸಾವಿರ ರೂ. ಮತ್ತು ಬಾಲಗರ್ಭಿಣಿಯರಿಗೆ 6 ಸಾವಿರ ರೂ. ಆರ್ಥಿಕ ನೆರವು ನೀಡಲಾಗುತ್ತಿದೆ ಎಂದು ತಿಳಿಸಲಾಯಿತು.


ಬಾಲಮಂದಿರದ ಮಕ್ಕಳಿಗೆ ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಲ್ಲಿ ಉಚಿತ ಪ್ರವೇಶ ಕಲ್ಪಿಸಲಾಗಿದ್ದು, 18 ವರ್ಷ ಪೂರ್ಣಗೊಂಡ ಯುವಕರಿಗೆ ಉಪ್ಕಾರ ಯೋಜನೆಯಡಿ ಮಾಸಿಕ 3,500 ರೂ. ನೆರವು ನೀಡಲಾಗುತ್ತಿದೆ. ಅನುಪಾಲನಾ ಗೃಹಗಳ ಮೂಲಕ 19 ಬಾಲಕಿಯರಿಗೆ ಪದವಿ ಶಿಕ್ಷಣ, ನರ್ಸಿಂಗ್ ಹಾಗೂ ಟೈಲರಿಂಗ್ ತರಬೇತಿ ನೀಡಲಾಗುತ್ತಿದೆ ಎಂದು ಸಭೆಯಲ್ಲಿ ವಿವರಿಸಲಾಯಿತು. ಬಾಲ ನ್ಯಾಯ ಮಂಡಳಿಯಲ್ಲಿ ಬಾಕಿ ಇರುವ ಪ್ರಕರಣಗಳನ್ನು ಶೀಘ್ರ ವಿಲೇವಾರಿ ಮಾಡುವಂತೆ ಸೂಚಿಸಿದ ಜಿಲ್ಲಾಧಿಕಾರಿ, ಮಕ್ಕಳ ಹಕ್ಕುಗಳನ್ನು ಉಲ್ಲಂಘಿಸುವವರ ವಿರುದ್ಧ ಯಾವುದೇ ಮುಲಾಜಿಲ್ಲದೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಸಭೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಶ್ರೀನಿವಾಸ ನವಲೆ, ಡಿಸಿಪಿ ಶಾಲೂ, ಪ್ರೊಬೇಷನರಿ ಐಎಎಸ್ ಅಧಿಕಾರಿ ಶ್ರೀಕರ್ ಮೋಘ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಶಂಕರಮ್ಮ ಡವಳಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕ ಶರಣಪ್ಪ, ತಾಲೂಕು ಮಟ್ಟದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಮೈಲಾಪುರ ಬಳಿಯ 46ನೇ ಮೈಲು ಸೈಡ್ ಲೈನಿಂಗ್ ಕಾಲುವೆ ಕುಸಿತ; ಘಟನಾ ಸ್ಥಳಕ್ಕೆ ಸಚಿವರಾದ ಶಿವರಾಜ ತಂಗಡಗಿ ಭೇಟಿ

ಕೊಪ್ಪಳ ಆ.08-

2800 ಕ್ಯುಸೆಕ್ ನೀರು ಹರಿಯುವ ಸಾಮರ್ಥ್ಯದ ತುಂಗಭದ್ರಾ ಎಡದಂಡೆ ಮೈಲಾಪುರ ಬಳಿಯ 46ನೆ ಮೈಲು ಸೈಡ್ ಲೈನಿಂಗ್ ಕಾಲುವೆ ಕುಸಿತ ಕಾಮಗಾರಿಯನ್ನು ಆಗಸ್ಟ್ 9ರೊಳಗೆ ಪೂರ್ಣಗೊಳಿಸಬೇಕು ಎಂದು ಸಚಿವರಾದ ಶಿವರಾಜ ತಂಗಡಗಿ ಅವರು ಗಡುವು ವಿದಿಸಿದರು. ವಿಧಾನ ಪರಿಷತ್ ಶಾಸಕರಾದ ಬಸನಗೌಡ ಬಾದರ್ಲಿ ಅವರೊಂದಿಗೆ ಮೈಲಾಪುರ ಗ್ರಾಮದ ಹತ್ತಿರದಲ್ಲಿ ಕಾಲುವೆ ಕುಸಿತದ ಘಟನಾ ಸ್ಥಳಕ್ಕೆ ಆಗಸ್ಟ್ 7ರಂದು ಭೇಟಿ ನೀಡಿ ಕಾಲುವೆ ವೀಕ್ಷಿಸಿ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.



ಮೈಲಾಪುರ ಹತ್ತಿರದ ಕಾಲುವೆ ದುರಸ್ತಿ ಕಾರ್ಯ ದಿನದ 24 ಗಂಟೆಯೂ ನಡೆಯಬೇಕು. ಕಾಲುವೆ ದುರಸ್ತಿ ಅವಧಿವರೆಗೆ ಕಾಲುವೆ ಮೇಲಿನ ಸಂಚಾರಕ್ಕೆ ತಾತ್ಕಾಲಿಕ ನಿರ್ಬಂಧ ವಿದಿಸಿ ಕಾಮಗಾರಿಯನ್ನು ಬೇಗನೇ ಪೂರ್ಣಗೊಳಿಸಲು ಸಹಕಾರ ನೀಡಬೇಕು ಎಂದು ಪೊಲೀಸ್ ಅಧಿಕಾರಿಗಳಿಗೆ ಸಚಿವರು ಸೂಚನೆ ನೀಡಿದರು.

ಎಡದಂಡೆ ಮುಖ್ಯ ಕಾಲುವೆಯ ಎಲ್ಲ ಕಡೆಗೂ ಸಂಚರಿಸಿ, ಕಾಲುವೆಗೆ ದಕ್ಕೆಯಾದ ಸ್ಥಳಗಳನ್ನು ಗುರುತಿಸಿ ಆಯಾ ಕಡೆಗಳಲ್ಲಿ ಕೂಡಲೇ ದುರಸ್ತಿ ಕಾರ್ಯವನ್ನು ಕಾಲುವೆಗೆ ನೀರು ಹರಿಸುವ ಮೊದಲೇ ಪೂರ್ಣಗೊಳಿಸಬೇಕು ಎಂದು ಇದೆ ವೇಳೆ ಸಚಿವರು, ನೀರಾವರಿ ನಿಗಮದ ಅಭಿಯಂತರ ಮಲ್ಲಿಗವಾಡ ಅವರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಆ.11ನೇ ತಾರೀಖಿಗೆ ನೀರಾವರಿ ಸಲಹಾ ಸಮಿತಿ ಸಭೆ:★ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಟಿಬಿ ಡ್ಯಾಮಗೆ ನೀರಿನ ಒಳ ಹರಿವು ಹೆಚ್ಚಳವಾಗಿದೆ. ಕಳೆದೆರಡು ದಿನಗಳ ಹಿಂದೆ 10 ಟಿಎಂಸಿ ನೀರು ಬಂದಿದೆ. ಆಗಸ್ಟ್ 6ರಂದು ಒಂದೇ ದಿನ 4 ಟಿಎಂಸಿ ನೀರು ಹರಿದು ಬಂದಿದೆ. ಸದ್ಯ ತುಂಗಭದ್ರಾ ಜಲಾಶಯದಲ್ಲಿ 68 ಟಿಎಂಸಿ ನೀರು ಲಭ್ಯವಿದೆ. ನೀರಾವರಿ ಸಲಹಾ ಸಮಿತಿ ಸಭೆಯನ್ನು ಆಗಸ್ಟ್ 11ನೇ ತಾರೀಖಿಗೆ ನಡೆಸಲು ಯೋಜಿಸಲಾಗಿದೆ. ರೈತರ ಕೋರಿಕೆಯಂತೆ ಕಾಲುವೆಗೆ ನೀರು ಬಿಡುವ ಬಗ್ಗೆ ನಿರ್ಧರಿಸಲು ಸಭೆಯಲ್ಲಿ ಎಲ್ಲ ಸಂಸದರು, ಶಾಸಕರು ಮತ್ತು ವಿರೋಧ ಪಕ್ಷದ ಪ್ರಮುಖರು, ರೈತರು, ನೀರಾವರಿ ತಜ್ಞರಿಂದ ಸಲಹೆ ಪಡೆಯಲಾಗುವುದು ಎಂದು ಸಚಿವರು ತಿಳಿಸಿದರು.

ಈ ವೇಳೆ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ, ಜಿಲ್ಲಾ ಪಂಚಾಯತ್ ಸಿಇಓ ವರ್ಣಿತ್ ನೇಗಿ, ನೀರಾವರಿ ನಿಗಮದ ಅಭಿಯಂತರ ಶ್ರೀನಿವಾಸ ಮಲ್ಲಿಗವಾಡ, ಡಿವೈಎಸ್ಪಿ ನ್ಯಾಮಗೌಡ ಇದ್ದರು.

ಒಂದನೇಯ ಪುಟದಿಂದ

ವ್ಯಾಪಕ ಜಾಗೃತಿ ಮೂಡಲಿ-ಡಾ. ಶರಣಪ್ಪ ಸತ್ಯಪೇಟೆ

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಮಹಾನಗರ ಪಾಲಿಕೆ ಆಡಳಿತಾಧಿಕಾರಿ ಹಾಗೂ ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೃಷ್ಣ ಶಾವಂತಗೇರಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಯೋಜನೆಯ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಪ್ರಬಂಧ, ಭಾಷಣ, ಚಿತ್ರಕಲೆ ಹಾಗೂ ರಸಪ್ರಶ್ನೆ ಸೇರಿದಂತೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಬಹುಮಾನ ಪಡೆಯುವುದಕ್ಕಿಂತ ಸ್ಪರ್ಧೆಗಳಲ್ಲಿ ಭಾಗವಹಿಸಿ ಜ್ಞಾನ ಸಂಪಾದಿಸುವುದು ಮುಖ್ಯ ಎಂದು ಹೇಳಿದರು.

ಕಾಲೇಜಿನ ಪ್ರಾಂಶುಪಾಲ ಡಾ. ಯಂಕಣ್ಣ ಅಧ್ಯಕ್ಷತೆ ವಹಿಸಿ, ವಿದ್ಯಾರ್ಥಿಗಳ ಜ್ಞಾನ ಹಾಗೂ ಪ್ರತಿಭೆ ಅನಾವರಣಗೊಳಿಸಲು ಇಂತಹ ಕಾರ್ಯಕ್ರಮಗಳು ಸಹಕಾರಿಯಾಗಲಿವೆ. ವಿದ್ಯಾರ್ಥಿಗಳು ಸಾಮಾಜಿಕ ಹಾಗೂ ರಾಷ್ಟ್ರೀಯ ವಿಷಯಗಳ ಸ್ಪರ್ಧೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದರು.

ಎಸ್‌ಐಆರ್ ಕಾರ್ಯಕ್ರಮದ ನೋಡಲ್ ಅಧಿಕಾರಿ ಡಾ. ದಂಡಪ್ಪ ಬಿರಾದಾರ ಮಾತನಾಡಿ, ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ಆಗಸ್ಟ್ 8 ಕೊನೆಯ ದಿನವಾಗಿದ್ದು, ಕುಟುಂಬದ ಯಾರಾದರೂ ಮತದಾರರ ಪಟ್ಟಿಯಿಂದ ಹೊರಗುಳಿದಿದ್ದರೆ ಬಿಎಲ್‌ಒಗಳ ಮೂಲಕ ಹೆಸರು ಸೇರ್ಪಡೆ ಮಾಡಿಸಿಕೊಳ್ಳುವಂತೆ ತಿಳಿಸಿದರು. ಇದೇ ವೇಳೆ ಪರಿಸರ ಮತ್ತು ಸ್ವಚ್ಛತಾ ಪ್ರತಿಜ್ಞಾವಿಧಿ ಬೋಧಿಸಿದರು.

ಜಿಲ್ಲಾ ನಗರ ಅಭಿವೃದ್ಧಿ ಕೋಶದ ಯೋಜನಾಧಿಕಾರಿ ಹಂಪಮ್ಮ ಅವರು ಪ್ರಧಾನಮಂತ್ರಿ ಆವಾಸ್ ಯೋಜನೆ ಹಾಗೂ ಕಾರ್ಯಕ್ರಮದ ಉದ್ದೇಶ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ, ಪಾರಿತೋಷಕ ಹಾಗೂ ನಗದು ಬಹುಮಾನ ವಿತರಿಸಲಾಯಿತು.

ಡಾ. ಪ್ರಾಣೇಶ್ ಕುಲಕರ್ಣಿ, ಡಾ. ಮಹಂತೇಶ್ ಅಂಗಡಿ, ಡಾ. ಗೌಡಪ್ಪ, ಡಾ. ಸೋಮನಾಥ್ ರೆಡ್ಡಿ, ಡಾ. ಸುಭಾಷ್ ಚಂದ್ರ, ಡಾ. ಹಿರೇಮಠ ಸೇರಿದಂತೆ ಪಾಲಿಕೆ ಹಾಗೂ ವಸತಿ ಯೋಜನೆಯ ಅಧಿಕಾರಿಗಳು, ಸಿಬ್ಬಂದಿ, ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ರೈತನಿಗೆ ಸೂಕ್ತ ಪರಿಹಾರ: ಸಚಿವ ಡಾ.ಅಜಯ್ ಧರ್ಮಸಿಂಗ್

ಸೂಕ್ತ ಪರಿಹಾರ ಧನ ಹಾಗೂ ಕೃಷಿ ಸೌಲಭ್ಯಗಳನ್ನು ತಲುಪಿಸಲು ಬದ್ಧರಾಗಿದ್ದೇವೆ ಎಂದು ಭರವಸೆ ನೀಡಿದರು.

ವಿವಿಧ ಸ್ಥಳಗಳ ವೀಕ್ಷಣೆ: ಬರ ಪರಿಸ್ಥಿತಿ, ಅತಿವೃಷ್ಟಿ ನಿರ್ವಹಣೆ ಕುರಿತ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರಂಸಿಂಗ್ ಅವರು ರಾಯಚೂರು ಜಿಲ್ಲೆಯಲ್ಲಿ ಎರಡನೇ ದಿನವೂ ಪ್ರವಾಸ ಮುಂದುವರೆದಿದ್ದು, ರಾಯಚೂರು ಜಿಲ್ಲೆಯ ಮಾನ್ವಿ, ಮಸ್ಕಿ ಹಾಗೂ ಸಿಂಧನೂರು ತಾಲೂಕಿನ ಬರ ನಷ್ಟಕ್ಕೆ ಒಳಗಾದ ವಿವಿಧ ಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದರು.

ಶನಿವಾರ ಬೆಳಿಗ್ಗೆ ಲಿಂಗಸುಗೂರು ತಾಲೂಕಿನ ಹಟ್ಟಿ ಚಿನ್ನದ ಗಣಿಯ ಸರ್ಕಿಟ್ ಹೌಸ್ ನಿಂದ ನೇರವಾಗಿ ಮಸ್ಕಿ ತಾಲ್ಲೂಕಿನ ಸಂತೆಕಲ್ಲೂರು ಗ್ರಾಮದಲ್ಲಿ ತೇವಾಂಶ ಕೊರತೆಯಿಂದ ಬಾಧಿತ ತೊಗರಿ ಬೆಳೆಯ ಕ್ಷೇತ್ರ ವೀಕ್ಷಣೆ ಮಾಡಿ, ನಂತರ ಗುಡದೂರು ಗ್ರಾಮದಲ್ಲಿ ತೇವಾಂಶ ಕೊರತೆಯಿಂದ ಬಾಧಿತ ಸೂರ್ಯಕಾಂತಿ, ತೊಗರಿ ಹಾಗೂ ಹತ್ತಿ ಬೆಳೆಯ ಕ್ಷೇತ್ರ ವೀಕ್ಷಣೆ ಮಾಡಿದರು.

ನಂತರ ಹಸಮಕಲ್ ಗ್ರಾಮದ ಬಹು ಗ್ರಾಮ ಕುಡಿಯುವ ನೀರಿನ ಯೋಜನೆ ಕೆರೆ ವೀಕ್ಷಣೆ ಮಾಡಿದರು. ಸಿಂಧನೂರು ತಾಲ್ಲೂಕಿನ ಜವಳಗೇರ ಗ್ರಾಮದಲ್ಲಿ ತೇವಾಂಶ ಕೊರತೆಯಿಂದ ಬಾಧಿತ ಹತ್ತಿ ಬೆಳೆಯ ಕ್ಷೇತ್ರ ಹಾಗೂ ಬನ್ನಿಗನೂರು ಗ್ರಾಮದಲ್ಲಿ ತೇವಾಂಶ ಕೊರತೆಯಿಂದ ಬಾಧಿತ ಸೂರ್ಯಕಾಂತಿ ಹಾಗೂ ಹತ್ತಿ ಬೆಳೆಯ ಕ್ಷೇತ್ರ ವೀಕ್ಷಣೆ ಮಾಡಿದರು. ನಂತರ ಮಾನ್ವಿ ತಾಲೂಕಿನ ಹಿರೇಕೊಟ್ಟೆಕಲ್ ಹೋಬಳಿಯ ಪೋತನಾಳ್ ಗ್ರಾಮದಲ್ಲಿ ತೇವಾಂಶ ಕೊರತೆಯಿಂದ ಬಾಧಿತ ಹತ್ತಿ ಬೆಳೆಯ ಕ್ಷೇತ್ರ ವೀಕ್ಷಣೆ ಮಾಡಿ, ನೇರವಾಗಿ ಮಾನ್ವಿ ಪ್ರವಾಸ ಮಂದಿರಕ್ಕೆ ಆಗಮಿಸಿ ಮುಖಂಡರು ಚರ್ಚಿಸಿದರು.

ಇದೇ ಸಂದರ್ಭದಲ್ಲಿ ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್.ಭೋಸರಾಜು, ಮಾನ್ವಿ ಶಾಸಕ ಜಿ.ಹಂಪಯ್ಯ ನಾಯಕ, ಮಸ್ಕಿ ಶಾಸಕ ಬಸನಗೌಡ ತುರ್ವಿಹಾಳ, ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ, ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಬಸವಣ್ಣೆಪ್ಪ ಕಲಶೆಟ್ಟಿ, ಸಿಂಧನೂರು ತಹಶಿಲ್ದಾರ್ ಅರುಣ್ ಕುಮಾರ್ ದೇಸಾಯಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್, ಉಪ ನಿರ್ದೇಶಕ ನಹೀಂ ಹುಸೇನ್ ಸೇರಿದಂತೆ ಇತರರು ಇದ್ದರು.

ಎಐಬಿಇ ಪಾಸಾಗುವ ಮುನ್ನವೇ ವಕಾಲತ್‌ಗೆ ಅವಕಾಶ

ಾಮೆಗೆ ಸಹಿ ಮಾಡಿ ಸಲ್ಲಿಸುವುದು, ನ್ಯಾಯಾಲಯ ಹಾಗೂ ನ್ಯಾಯಮಂಡಳಿಗಳಲ್ಲಿ ಕಕ್ಷಿದಾರರ ಪರವಾಗಿ ಹಾಜರಾಗಿ ವಾದ ಮಂಡಿಸುವ ಅವಕಾಶವಿದೆ ಎಂದು ಹೇಳಿದರು.

ಆದರೆ ಎಐಬಿಇ ಪರೀಕ್ಷೆ ಉತ್ತೀರ್ಣರಾಗುವವರೆಗೆ ಮತದಾನದ ಹಕ್ಕು, ಬಾರ್ ಅಸೋಸಿಯೇಷನ್ ಚುನಾವಣೆಯಲ್ಲಿ ಸ್ಪರ್ಧಿಸುವ ಹಕ್ಕು, ಕೆಲವು ಗುರುತಿನ ಹಾಗೂ ಕಲ್ಯಾಣ ಸೌಲಭ್ಯಗಳು ಲಭ್ಯವಿರುವುದಿಲ್ಲ. ಪರೀಕ್ಷೆ ಉತ್ತೀರ್ಣರಾದ ಬಳಿಕ ಈ ಸೌಲಭ್ಯಗಳು ದೊರೆಯಲಿವೆ ಎಂದು ವಿವರಿಸಿದರು.

''ಎಐಬಿಇ ಪರೀಕ್ಷೆ ವ್ಯವಸ್ಥೆಯನ್ನು ಪ್ರಶ್ನಿಸುವುದು ನಮ್ಮ ಉದ್ದೇಶವಲ್ಲ. ನೋಂದಣಿ ಮಾಡಿಕೊಂಡಿರುವ ಯುವ ವಕೀಲರಿಗೆ ಕಾನೂನುಬದ್ಧವಾಗಿ ವೃತ್ತಿ ಆರಂಭಿಸಲು ಅವಕಾಶ ದೊರೆಯಬೇಕು ಎಂಬುದು ನಮ್ಮ ಬೇಡಿಕೆಯಾಗಿತ್ತು. ಇದೀಗ ದೊರೆತಿರುವ ಸ್ಪಷ್ಟತೆ ಯುವ ವಕೀಲರ ಹೋರಾಟಕ್ಕೆ ಸಂದ ಜಯವಾಗಿದೆ,'' ಎಂದು ಕಾರ್ತಿಕ್ ಕುಮಾರ್ ಹೇಳಿದರು.

ಎಲ್‌ಎಲ್‌ಬಿ ಪೂರ್ಣಗೊಳಿಸಿ ವೃತ್ತಿಗೆ ಪ್ರವೇಶಿಸುವ ಯುವ ವಕೀಲರು ಹಿರಿಯ ವಕೀಲರ ಮಾರ್ಗದರ್ಶನ ಪಡೆದು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಲ್ಲಿಕಾ ಪೂಜಾರಿ, ಶರಣಬಸವ, ಆದಪ್ಪ, ಬಸವಲಿಂಗಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸಂಪುಟ ವಿಸ್ತರಣೆಯಲ್ಲಿ ಕಡೆಗಣನೆ -ಜೆ.ಎಂ. ಮೌನೇಶ್

ನಿರ್ಲಕ್ಷಿಸಿದರೆ 2028ರ ವಿಧಾನಸಭಾ ಚುನಾವಣೆಯಲ್ಲಿ ಕಲ್ಯಾಣ ಕರ್ನಾಟಕದ ಮಾದಿಗ ಸಮಾಜ ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಉತ್ತರ ನೀಡಲಿದೆ ಎಂದು ಮೌನೇಶ್ ಎಚ್ಚರಿಸಿದರು.

ಇದೇ ವೇಳೆ ರಾಯಚೂರು ಜಿಲ್ಲೆಯಲ್ಲಿ ಇತ್ತೀಚೆಗೆ ಮಾದಿಗ ಸಮುದಾಯದವರ ಮೇಲೆ ನಡೆಯುತ್ತಿರುವ ಕೊಲೆ ಹಾಗೂ ಹಲ್ಲೆ ಪ್ರಕರಣಗಳನ್ನು ಮುಖಂಡರು ತೀವ್ರವಾಗಿ ಖಂಡಿಸಿದರು. ಸಮುದಾಯದವರ ಮೇಲೆ ಉದ್ದೇಶಪೂರ್ವಕವಾಗಿ ದೌರ್ಜನ್ಯ ನಡೆಯುತ್ತಿದೆ ಎಂಬ ಆರೋಪ ಕೇಳಿಬರುತ್ತಿದ್ದು, ಸರ್ಕಾರ ಕೂಡಲೇ ಕ್ರಮ ಕೈಗೊಂಡು ಸಮುದಾಯದ ಜನರಿಗೆ ಸೂಕ್ತ ರಕ್ಷಣೆ ಒದಗಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಗ್ರಾಮಾಂತರ ಅಧ್ಯಕ್ಷ ರಾಘವೇಂದ್ರ, ಬೋರೆಡ್ಡಿ, ನಗರ ಉಪಾಧ್ಯಕ್ಷ ಆಂಜನೇಯ ಸಿಯಾತಾಲಾಬ್, ಜಿಲ್ಲಾ ಕಾರ್ಯಕಾರಿಣಿ ಸದಸ್ಯ ವೆಂಕಟೇಶ್ ಸಗಮಕುಂಟ, ನಗರ ಪ್ರಧಾನ ಕಾರ್ಯದರ್ಶಿ ಹನುಮೇಶ್ ದಂಡು, ಜಿಲ್ಲಾ ಕಾರ್ಯದರ್ಶಿ ವಿಶ್ವನಾಥ, ಭೀಮಣ ಮಂಚಲು, ನಗರ ಅಧ್ಯಕ್ಷ ಜೆ. ನರಸಿಂಹಲು ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

ನೀರು ಹರಿದು ಗಬ್ಬು ನಾರುವ ರಸ್ತೆಯಲ್ಲಿ ಸೊಳ್ಳೆಗಳ ಕಾರ್ಬಾರ: ಸಾಬಣ್ಣ ವಗ್ಗರ್ ಆರೋಪ

ಈ ಸಂಬಂಧ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಒಮ್ಮೆಯಾದರೂ ಇಂಥ ಸಮಸ್ಯೆಗಳ ಸ್ಥಳಗಳಿಗೆ ಹೋಗಿ ಭೇಟಿ ನೀಡುವುದಿಲ್ಲ ಗಮನಕ್ಕೆ ತಂದರು ಕ್ಯಾರೇ ಎನ್ನುವುದಿಲ್ಲ ಎಸಿ ಡಿಸಿ ಹತ್ತಿರ ಹೋಗಿ ಕಂಪ್ಲೇಟ್ ಮಾಡಿ ನನಗೆ ಯಾರು ಏನು ಮಾಡಕ್ಕಾಗಲ್ಲ ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಉಡಾಫೆ ಉತ್ತರ ಹೇಳುತ್ತಾರೆ ಪಂಚಾಯಿತಿಗೆ ಬರದು ಅಪರೂಪ ಇಲ್ಲಿ ಹೇಳೋರು ಕೇಳೋರು ಯಾರು ಇಲ್ಲ ಈ ಸಂಬಂಧ ಮೇಲಾಧಿಕಾರಿಗಳು ಗಮನಹರಿಸಿ ಕಠಿಣ ಕ್ರಮ ಕೈಗೊಳ್ಳಬೇಕು ಒಂದು ವೇಳೆ ಸಮಸ್ಯೆಗೆ ಪರಿಹಾರ ನೀಡದಿದ್ದಲ್ಲಿ ಉಗ್ರ ಹೋರಾಟ ಮಾಡಲಾಗುವುದು ಎಂದು ಸಾಮಾಜಿಕ ಹೋರಾಟಗಾರ ಸಾಬಣ್ಣ ವಗ್ಗರ್ ಅವರು ಆಗ್ರಹಿಸಿದ್ದಾರೆ

ತಟ್ಟೆ ಮತ್ತು ಗ್ಲಾಸ್, ಅಲ್ಮಾರ ದೇಣಿಗೆ

ರಿಗಳನ್ನು ದೇಣಿಗೆಯಾಗಿ ನೀಡಿದ್ದರು. ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಊಟದ ಬಳಕೆಗೆ ಆವಶ್ಯಕವಿರುವ ಸ್ಟೀಲ್ ತಟ್ಟೆಗಳು, ಕುಡಿಯುವ ನೀರಿಗಾಗಿ ಸ್ಟೀಲ್ ಗ್ಲಾಸ್‌ಗಳು,ಶಾಲೆಯ ಕಡತಗಳು ಅಥವಾ ಪುಸ್ತಕಗಳನ್ನು ಸುರಕ್ಷಿತವಾಗಿಡಲು ಒಂದು ಅಲ್ಮಾರ ಕೊಡಲಾಗಿದ್ದು ಮುಂದಿನ ದಿನಗಳಲ್ಲೂ ಶಾಲೆಯ ಅಭಿವೃದ್ಧಿಗೆ ನಮ್ಮ ಕೈಲಾದ ಸಹಕಾರವನ್ನು ನೀಡಲು ನಾವು ಸದಾ ಸಿದ್ಧರಿದ್ದೇವೆ ಎಂದು ಪ್ರಮೋದ್ ಹೇಳಿದರು. ಈ ಸಂದರ್ಭದಲ್ಲಿ ಮುಖ್ಯಗುರುಗಳಾದ ರಾಜಶೇಖರ್ ದಿನ್ನಿ, ಶಿಕ್ಷಕ ವೆಂಕಟೇಶ, ಮಂಜುನಾಥ, ಕ.ಕಾ. ಪತ್ರಕರ್ತರ ಸಂಘದ ಅಧ್ಯಕ್ಷ ಹನುಮೇಶ, ಪ್ರ.ಕಾ. ನಾಗರಾಜ್ ಕರಿಬಿಲ್ಕರ್ ಹಳೇ ವಿದ್ಯಾರ್ಥಿಗಳಾದ

ರಘು ಮಡಿವಾಳ, ಅಮರೇಶಗೌಡ ಚಾಗಬಾವಿ, ಚನ್ನ ಚಾಗಬಾವಿ, ಯಲ್ಲಪ್ಪ ದೊರೆ, ಪ್ರಮೋದ್, ಮೊಹಮ್ಮದ್ ರಫಿ, ಅಕ್ಬರ್‌ನಾಗರಾಜ್ (ವಿಜ್ಜು) ಶಿವಲಿಂಗ, ಗೋಪಾಲ್ ನಾಯಕ, ಬಸವ ನಾಯಕ, ರವಿನಾಯಕ್, ಚನ್ನ ಸೋಡಾ, ಬಾಳಪ್ಪ ಶಾಲೆಯ ವಿದ್ಯಾರ್ಥಿಗಳು ಇದ್ದರು.

ಪ್ರವಾಸ ಹಾಗೂ ಬೆಳೆ ಪರಿಶೀಲನೆ ಪ್ರವಾಸ ಬೆಳೆ ವೀಕ್ಷಣೆ

ಎರಡೆರಡು-ಮೂರೂ ಮೂರು ಬಾರಿ ಬಿತ್ತನೆ ಮಾಡಿದರೂ ಬೆಳೆಗಳು ಒಣಗಿಹೋಗಿವೆ. ಕಂದಾಯ ಹಾಗೂ ಕೃಷಿ ಇಲಾಖೆ ಅಧಿಕಾರಿಗಳೊಂದಿಗೆ ಪ್ರತಿ ತಾಲೂಕಿನ ನೈಜ ಪರಿಸ್ಥಿತಿಯ ಸಮಗ್ರ ವರದಿ ಸಿದ್ಧಪಡಿಸಲಾಗುತ್ತಿದ್ದು, ಇದನ್ನು ಶೀಘ್ರದಲ್ಲೇ ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಗುವುದು ಎಂದು ಸಚಿವರು ಭರವಸೆ ನೀಡಿದ್ದಾರೆ.

ಸಂಕಷ್ಟದಲ್ಲಿರುವ ರೈತರಿಗೆ ಎಕರೆಗೆ ಗರಿಷ್ಠ ಮಟ್ಟದ ಪರಿಹಾರ ಧನ ಒದಗಿಸುವ ಕುರಿತು ಉನ್ನತ ಮಟ್ಟದ ಸಭೆಯಲ್ಲಿ ಚರ್ಚಿಸುವುದಾಗಿ ತಿಳಿಸಿದ್ದಾರೆ.

ಕುಡಿಯುವ ನೀರು ಮತ್ತು ಅಧಿಕಾರಿಗಳಿಗೆ ಸೂಚನೆ: ಜಿಲ್ಲೆಯಲ್ಲಿ ಎದುರಾಗಿರುವ ಕುಡಿಯುವ ನೀರಿನ ಅಭಾವವನ್ನು ತಕ್ಷಣವೇ ಬಗೆಹರಿಸಲು ಮತ್ತು ಬೆಳೆ ಹಾನಿ ಸಮೀಕ್ಷೆಯನ್ನು ಪಾರದರ್ಶಕವಾಗಿ ಪೂರ್ಣಗೊಳಿಸಲು ಜಿಲ್ಲಾಧಿಕಾರಿಗಳು ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ. ಕಾಂಗ್ರೆಸ್ ಕಾರ್ಯಕರ್ತರು ಸ್ವಾಗತಿಸಿದರು .

ಬರ ಪರಿಸ್ಥಿತಿ ಹಾಗೂ ಬೆಳೆ ಹಾನಿ ಪರಿವೀಕ್ಷಣೆ ನಡೆಸಿದ ಸಚಿವ ಬಿ.ನಾಗೇಂದ್ರ



ಬಳ್ಳಾರಿ,ಆ.08-

ಜಿಲ್ಲೆಯಲ್ಲಿ ತಲೆದೋರಿರುವ ಬರ ಪರಿಸ್ಥಿತಿ ಹಾಗೂ ಬೆಳೆ ಹಾನಿ ಪರಿವೀಕ್ಷಣೆ ನಡೆಸುವ ಸಂಬಧ ನಿಯೋಜಿಸಿರುವ ಬಳ್ಳಾರಿ ಜಿಲ್ಲಾ ಅತಿವೃಷ್ಠಿ ಮತ್ತು ಬರ ಪರಿಸ್ಥಿತಿ ನಿರ್ವಹಣೆಯ ಮೇಲುಸ್ತುವಾರಿ ಸಚಿವ ಬಿ. ನಾಗೇಂದ್ರ ಅವರು ಶುಕ್ರವಾರ ಸಂಡೂರು ತಾಲೂಕಿನ ವಿಠಲಾಪುರ ಗ್ರಾಮದಲ್ಲಿ ಸ್ಥಳೀಯ ಶಾಸಕರು ಮತ್ತು ಜಿಲ್ಲಾಧಿಕಾರಿಗಳ ತಂಡದೊದಿಗೆ ಸ್ಥಳಕ್ಕೆ ಭೇಟಿ ನೀಡಿ ಬರ ಅಧ್ಯಯನ ನಡೆಸಿದರು.

ಈ ವೇಳೆ ಮಾತನಾಡಿದ ಸಚಿವರು, ಮುಖ್ಯಮಂತ್ರಿಗಳ ಸೂಚನೆಯಂತೆ ಸರ್ಕಾರವು ರೈತರ ಬೆಂಬಲಕ್ಕೆ ನಿಲ್ಲಲಿದ್ದು, ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಎಲ್ಲಾ ಅಗತ್ಯ ಕ್ರಮುಗಳನ್ನು ಕೈಗೊಳ್ಳಲಾಗುತ್ತಿದೆ. ಸಂಪುಟ ಸಭೆಯ ತೀರ್ಮಾನ ಮತ್ತು ಮುಖ್ಯಮಂತ್ರಿಯವರ ಆದೇಶದಂತೆ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ವರದಿ ಸಿದ್ದಪಡಿಸಲಾಗುತ್ತಿದೆ ಎಂದು ಹೇಳಿದರು.

ಬಳ್ಳಾರಿಗೆ ಹೋಲಿಸಿದರೆ ಸಂಡೂರಿನಲ್ಲಿ ಮಳೆಯಾಶ್ರಿತ ಸಣ್ಣ ಹಾಗೂ ಅತಿ ಸಣ್ಣ ರೈತರೇ ಹೆಚ್ಚಾಗಿದ್ದು, ಬರಪರಿಸ್ಥಿತಿ ತೀವ್ರವಾಗಿದೆ. ಒಂದು ಅಥವಾ ಐದು ಎಕರೆ ಒಳಗಿನ ಹಿಡುವಳಿದಾರರಿಗೆ ಕೃಷಿ ನಷ್ಟದಿಂದ ಬದುಕು ಸಾಗಿಸುವುದು ಕಷ್ಟವಾಗಿದೆ. ಈ ಕುರಿತು ಶೀಘ್ರವೇ ಮುಖ್ಯಮಂತ್ರಿಗಳಿಗೆ ವರದಿ ಸಲ್ಲಿಸಲಾಗುವುದು ಹಾಗೂ ಮುಂಬರುವ ಸಭೆಯಲ್ಲಿ ಪರಿಹಾರ ಘೋಷಿಸುವ ಕುರಿತು ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಬೆಳೆ ವಿಮೆ ಮತ್ತು ಉದ್ಯೋಗ ಭರವಸೆ:

ಈ ಬಾರಿ ಜಿಲ್ಲಾಡಳಿತದ ಜಾಗೃತಿಯಿಂದಾಗಿ ಸುಮಾರು 40,000 ಖುಷ್ಕಿ ಜಮೀನಿನ ಪೈಕಿ 37,000 ರೈತರು ಬೆಳೆ ವಿಮೆ ಮಾಡಿಸಿದ್ದಾರೆ. ವಿಮೆ ವ್ಯಾಪ್ತಿಗೆ ಬಾರದ ರೈತರಿಗೆ ತಾಂತ್ರಿಕ ತೊಡಕುಗಳಿದ್ದರೆ ಅದನ್ನು ಪರಿಶೀಲಿಸಿ ಪರಿಹಾರ ಒದಗಿಸಲು ಕ್ರಮ ವಹಿಸಲಾಗುವುದು. ವಿಬಿ ಜಿ ರಾಮ್ ಜಿ ಯೋಜನೆಯಡಿ ಕೆಲಸದ ದಿನಗಳನ್ನು 100 ರಿಂದ 125 ದಿನಗಳಿಗೆ ಹೆಚ್ಚಿಸಲಾಗಿದೆ ಹಾಗೂ ದಿನಗೂಲಿಯನ್ನು 12 ರೂಪಾಯಿ ಹೆಚ್ಚಿಸಲಾಗಿದೆ. ಕೂಲಿ ಒದಗಿಸುವಲ್ಲಿ ಬಳ್ಳಾರಿ ಜಿಲ್ಲೆ ರಾಜ್ಯದಲ್ಲೇ ಎರಡನೇ ಸ್ಥಾನದಲ್ಲಿದೆ. ತಾಂಡಾದವರು ಕೆಲಸಕ್ಕಾಗಿ ಬೇರೆ ಜಿಲ್ಲೆಗೆ ವಲಸೆ ಹೋಗುವುದನ್ನು ತಡೆಯಲು ವಿಶೇಷ ಯೋಜನೆ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಕೈಗಾರಿಕಾ ಮಾಲಿನ್ಯ ಹಾಗೂ ಸಾರ್ವಜನಿಕ ಆರೋಗ್ಯ:

ಸಂಡೂರು ವ್ಯಾಪ್ತಿಯ ಕೈಗಾರಿಕೆಗಳಿಂದ ಧೂಳು ಹೆಚ್ಚಾಗುತ್ತಿದ್ದು, ಕೆರೆಗಳಿಗೆ ಕಲುಷಿತ ನೀರು ಬಿಡಲಾಗುತ್ತಿದೆ. ಇದರಿಂದ ಮೀನುಗಳು ಸಾಯುತ್ತಿದ್ದು, ನೀರು ಕುಡಿದ ಜನರಿಗೆ ಮೂಳೆ ಸಂಬಧಿತ ಅನಾರೋಗ್ಯ ಸಮಸ್ಯೆಗಳು ಉಂಟಾಗುತ್ತಿವೆ ಎಂಬ ದೂರುಗಳು ವ್ಯಾಪಕವಾಗಿವೆ. ಹೀಗಾಗಿ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳನ್ನು ಕರೆಸಿ ಶೀಘ್ರವೇ ಸಭೆ ನಡೆಸಲಾಗುವುದು. ಕೈಗಾರಿಕೆಗಳು ವೈಜ್ಞಾನಿಕವಾಗಿ ಫಿಲ್ಟರ್‌ಗಳನ್ನು ಅಳವಡಿಸಿ ಮಾಲಿನ್ಯ ನಿಯಂತ್ರಿಸುವುದನ್ನು ಕಡ್ಡಾಯಗೊಳಿಸಲಾಗುವುದು ಎಂದು ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದರು.

ತ್ಯಾಜ್ಯ ನೀರು ಮತ್ತು ಮಾಲಿನ್ಯ ತಡೆಗೆ ಎಸ್‌ಟಿಪಿ ನಿರ್ಮಾಣ:

ಕುರೆಕುಪ್ಪ ಮತ್ತು ದರೋಜಿ ಭಾಗಗಳಲ್ಲಿ ಹರಿಯುವ ತ್ಯಾಜ್ಯ ನೀರು ಕೆರೆ-ಕೊಳ್ಳಗಳಿಗೆ ಸೇರಿ ನೀರು ಕಲುಷಿತಗೊಳ್ಳುತ್ತಿರುವುದು ಶಾಸಕರು ಮತ್ತು ರೈತರು ಆತಂಕ ವ್ಯಕ್ತಪಡಿಸಿದ್ದಾರೆ. ಈ ಮಾಲಿನ್ಯದಿಂದ ಬೆಳೆ ನಷ್ಟವಾಗುತ್ತಿದ್ದು, ತ್ಯಾಜ್ಯ ನೀರು ಮತ್ತು ಫ್ಯಾಕ್ಟರಿ ನೀರು ಕಲುಷಿತಗೊಳ್ಳುವುದನ್ನು ತಡೆಯಲು ಎಸ್‌ಟಿಪಿ ಘಟಕವನ್ನು ಸ್ಥಾಪಿಸಲಾಗುವುದು. ಇದರಿಂದ ಅರ್ಧದಷ್ಟು ಮಾಲಿನ್ಯದ ಸಮಸ್ಯೆ ಬಗೆಹರಿಯಲಿದೆ ಎಂದು ತಿಳಿಸಿದರು.

ತುಂಗಭದ್ರಾ ಜಲಾಶಯವು 80 ಟಿಎಂಸಿ ತಲುಪಿದ ನಂತರವೇ ನೀರಾವರಿ ಸಲಹಾ ಸಮಿತಿ ಸಭೆಯನ್ನು ಕರೆಯಲಾಗುತ್ತದೆ. ಮುಂದಿನ ದಿನಗಳಲ್ಲಿ ಸಲಹಾ ಸಮಿತಿಯ ಅಧ್ಯಕ್ಷರ ನೇಮಕವಾದ ತಕ್ಷಣವೇ ಈ ವಿಷಯಕ್ಕೆ ಸಂಬಧಿಸಿದತೆ ಅಧಿಕೃತ ಮತ್ತು ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಅವರು ಸ್ಪಷ್ಟಪಡಿಸಿದರು.

ಸಂಡೂರು ಶಾಸಕರಾದ ಈ.ಅನ್ನಪೂರ್ಣ ಅವರು ಮಾತನಾಡಿ, ಸಂಡೂರು ತಾಲೂಕಿನಲ್ಲಿ ಈ ಬಾರಿ ತೀವ್ರ ಮಳೆ ಅಭಾವ ಎದುರಾಗಿದ್ದು, ರೈತರು ಮತ್ತು ಸಾರ್ವಜನಿಕರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸಂಡೂರು ತಾಲೂಕು ಸಾಮಾನ್ಯವಾಗಿ ಜಿಲ್ಲೆಯಲ್ಲೇ ಅತಿ ಹೆಚ್ಚು ಮಳೆ ಪಡೆಯುವ ಪ್ರದೇಶವಾಗಿದೆ. ಆದರೆ, ಈ ಬಾರಿ ಶೇಕಡಾ 67 ರಷ್ಟು ಮಳೆ ಕೊರತೆಯಾಗಿದ್ದು, ಪರಿಸ್ಥಿತಿ ಗಂಭೀರವಾಗಿದೆ. ಈ ಕುರಿತು ಸಚಿವರು ಹಾಗೂ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು, ತುರ್ತು ಪರಿಹಾರ ಕ್ರಮಗಳಿಗೆ ಮನವಿ ಮಾಡಲಾಗಿದೆ ಎಂದು ತಿಳಿಸಿದರು.

ನಮ್ಮ ತಾಲೂಕಿನಲ್ಲಿ ಕೃಷಿ ಭೂಮಿಯ ಲಭ್ಯತೆ ಅತ್ಯಂತ ಕಡಿಮೆಯಾಗಿದೆ. ಈ ಭಾಗವು ಬೆಟ್ಟಗುಡ್ಡಗಳಿಂದ ಕೂಡಿದ್ದು, ಸಣ್ಣ ಮತ್ತು ಅತಿ ಸಣ್ಣ ರೈತರೇ ಹೆಚ್ಚಾಗಿದ್ದಾರೆ. ಇಲ್ಲಿ ಕಂಪ್ಲಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ದೊಡ್ಡ ಹಿಡುವಳಿದಾರರಿಗಿಂತ ಬಡ ರೈತರೇ ಹೆಚ್ಚಿನ ಸಂಖ್ಯೆಯಲ್ಲಿದ್ದು, ಇವರ ಬದುಕಿಗೆ ಈ ಸಣ್ಣ ಹಿಡುವಳಿ ಭೂಮಿಯೇ ಆಧಾರವಾಗಿದೆ. ಅಲ್ಲದೆ, ಜಿಲ್ಲೆಯಲ್ಲಿ ಗಣಿಗಾರಿಕೆ ಚಟುವಟಿಕೆಗಳು ಬಹಳಷ್ಟು ಸ್ಥಗಿತಗೊಂಡಿರುವುದರಿಂದ ಜನರು ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

ಮುಂಗಾರು ಮಳೆ ತಡವಾಗಿ ಬಂದಿದ್ದರಿಂದ ಬಿತ್ತನೆ ಮಾಡಿದ ಬೆಳೆಗಳು ಸಂಪೂರ್ಣವಾಗಿ ಕೈಗೆ ಸಿಗದಂತಾಗಿವೆ. ಕೇವಲ ರೈತರಷ್ಟೇ ಅಲ್ಲದೆ, ದನ-ಕರುಗಳಿಗೂ ಕುಡಿಯುವ ನೀರು ಹಾಗೂ ಮೇವಿನ ತೀವ್ರ ಕೊರತೆ ಎದುರಾಗಿದೆ. ತಾಲೂಕಿನ ನೈಜ ಪರಿಸ್ಥಿತಿಯ ಕುರಿತು ಸರ್ಕಾರಕ್ಕೆ ಸೂಕ್ತ ವರದಿ ಸಲ್ಲಿಸಿ, ರೈತರಿಗೆ ಅನುಕೂಲವಾಗುವ ರೀತಿಯಲ್ಲಿ ಪರಿಹಾರ ಘೋಷಿಸಬೇಕೆಂದು ಶಾಸಕರು, ಸಚಿವರಿಗೆ ಮನವಿ ಮಾಡಿದರು.

ಜಾನುವಾರುಗಳ ಮೇವಿನ ಲಭ್ಯತೆ ಮತ್ತು ಮೇವಿನ ಬ್ಯಾಂಕ್ ಸ್ಥಾಪನೆ:

ಸಂಡೂರು ತಾಲೂಕಿನಲ್ಲಿ ವಿಠಲಾಪುರ, ಗಂಗಲಾಪುರ, ಮೆಟ್ರಿಕಿ, ರಾಜಾಪುರ ಸೇರಿದಂತೆ 21 ಹಳ್ಳಿಗಳ ವ್ಯಾಪ್ತಿಯಲ್ಲಿ ಸುಮಾರು 9,000 ಜಾನುವಾರುಗಳಿವೆ. ತಾಲೂಕು ಮಟ್ಟದಲ್ಲಿ ಒಟ್ಟು 44,292 ಜಾನುವಾರುಗಳಿವೆ. ಪ್ರಸ್ತುತ ಲಭ್ಯವಿರುವ ಒಣ ಮೇವಿನ ದಾಸ್ತಾನು ಮುಂದಿನ ಒಂದು ತಿಂಗಳ ಕಾಲ ನಿರ್ವಹಣೆಗೆ ಸಾಕಾಗುತ್ತದೆ. ಮೆಕ್ಕೆಜೋಳ ಮತ್ತು ಜೋಳದ ದಂಟನ್ನು ದಾಸ್ತಾನು ಮಾಡಲಾಗಿದೆ. ಮೇವಿನ ಅಭಾವವಿರುವ ವಿಠಲಾಪುರ ಮತ್ತು ಮೆಟ್ರಿಕಿ ಪಂಚಾಯಿತಿ ವ್ಯಾಪ್ತಿಯಲ್ಲಿ ಮೇವಿನ ಬ್ಯಾಂಕ್ ಸ್ಥಾಪಿಸಲು ನಿರ್ಧರಿಸಲಾಗಿದೆ. ರೈತರು ದೂರದ ಪ್ರದೇಶಗಳಿಗೆ ಜಾನುವಾರುಗಳನ್ನು ಕರೆದೊಯ್ಯುವುದನ್ನು ತಪ್ಪಿಸಲು ಆಯಾ ಪಂಚಾಯಿತಿ ಮಟ್ಟದಲ್ಲೇ ಮೇವಿನ ವಿತರಣೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಪಶು ಸಂಗೋಪನಾ ಇಲಾಖಾಧಿಕಾರಿಗಳು ಸಚಿವರ ಗಮನಕ್ಕೆ ತಂದರು.

ಈ ವೇಳೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಜಂಟಿ ಕೃಷಿ ನಿರ್ದೇಶಕ ಕೆ.ಸೋಮಸುಂದರ್ ಸಂಡೂರು ತಹಶೀಲ್ದಾರ ಅನಿಲ್ ಕುಮಾರ್ ಸೇರಿದಂತೆ ಪಶು ಸಂಗೋಪನಾ ಇಲಾಖೆ, ತೋಟಗಾರಿಕೆ ಇಲಾಖಾಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ರೈತರು, ಸಾರ್ವಜನಿಕರು ಹಾಜರಿದ್ದರು.

ಬೃಹತ್ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಆಶಯ



ಬಳ್ಳಾರಿ,ಆ.08-

ರಕ್ತದಾನವು ಅತ್ಯುನ್ನತ ಮಾನವೀಯ ಸೇವೆಯಾಗಿದ್ದು, ಒಂದು ಯೂನಿಟ್ ರಕ್ತದಿಂದ ಜೀವ ಉಳಿಸಲು ಸಾಧ್ಯವಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜೆಎಸ್‌ಡಬ್ಲ್ಯೂ ತೋರಣಗಲ್ಲು ಇವರ ಸಂಯುಕ್ತ ಆಶ್ರಯದಲ್ಲಿ ಒಪಿಜೆ ಸೆಂಟರ್ ನಲ್ಲಿ ಶುಕ್ರವಾರ ಆಯೋಜಿಸಿದ್ದ ರಕ್ತ ಮಿತ್ರ 2.0 ಬೃಹತ್ ರಕ್ತದಾನ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಕೈಗಾರಿಕಾ ಕ್ಷೇತ್ರದ ಜೊತೆಗೆ ಶಿಕ್ಷಣ, ಆರೋಗ್ಯ ಹಾಗೂ ಸಮಾಜ ಮುಖಿ ಕಾರ್ಯಗಳಲ್ಲಿ ಇತರೆ ಸಂಸ್ಥೆಗಳು ಕೊಡುಗೆ ನೀಡಬೇಕು ಎಂದು ತಿಳಿಸಿದರು.


ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ರಕ್ತದ ಕೊರತೆಯಿಂದ ಅಮೂಲ್ಯ ಜೀವಗಳು ಅಪಾಯಕ್ಕೀಡಾಗಬಾರದು. ವಿಶೇಷವಾಗಿ ಅಪರೂಪದ ರಕ್ತ ಗುಂಪಿನ ದಾನಿಗಳು ಅಗತ್ಯ ಬಿದ್ದಾಗ ಜಿಲ್ಲಾ ಆಸ್ಪತ್ರೆ ಹಾಗೂ ಬಿಎಂಸಿಆರ್‌ಸಿಗೆ ರಕ್ತದಾನ ಮಾಡಲು ಮುಂದೆ ಬರಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್ ಅವರು ಮಾತನಾಡಿ, ವೈದ್ಯರಷ್ಟೇ ಅಲ್ಲದೆ, ರಕ್ತ ನೀಡುವ ದಾನಿಗಳೂ ಸಹ ಜೀವ ಉಳಿಸುವ ನಿಜವಾದ ಜೀವದಾತರು. ಪ್ರತಿಯೊಬ್ಬ ನಾಗರಿಕನೂ ಸ್ವಯಂಪ್ರೇರಿತನಾಗಿ ರಕ್ತದಾನ ಮಾಡುವ ಮೂಲಕ ರೋಗಿಗಳಿಗೆ ಸಮಯಕ್ಕೆ ಸರಿಯಾಗಿ ರಕ್ತ ದೊರೆಯುವಂತೆ ನೋಡಿಕೊಳ್ಳುವುದು ಸಾಮಾಜಿಕ ಜವಾಬ್ದಾರಿ ಎಂದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಮರಿಯಂಬಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಜನಸಂಖ್ಯೆಗೆ ಅನುಗುಣವಾಗಿ ಕನಿಷ್ಠ ಶೇ. 1 ರಷ್ಟು ರಕ್ತದ ಅವಶ್ಯಕತೆ ಇದೆ. ಜಿಲ್ಲೆಯಲ್ಲಿ ಈಗಾಗಲೇ 243 ರಕ್ತದಾನ ಶಿಬಿರಗಳನ್ನು ಆಯೋಜಿಸಿ 14,034 ರಕ್ತಚೀಲಗಳನ್ನು ಸಂಗ್ರಹಿಸಲಾಗಿದ್ದು, ಒಟ್ಟಾರೆಯಾಗಿ 31,741 ರಕ್ತಚೀಲಗಳನ್ನು ಸಂಗ್ರಹಿಸಿ ನಿಗದಿತ ಗುರಿಯನ್ನು ಸಾಧಿಸಲಾಗಿದೆ ಎಂದು ಹೇಳಿದರು.

ಜೆಎಸ್‌ಡಬ್ಲ್ಯೂ ಆವರಣದ 20 ವಿಭಿನ್ನ ಸ್ಥಳಗಳಲ್ಲಿ ಈ ಶಿಬಿರ ನಡೆದಿದ್ದು, ಜಿಲ್ಲೆಯ 9 ರಕ್ತ ಕೇಂದ್ರಗಳು ಇದರಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದವು. ಶುಕ್ರವಾರ ಸಂಜೆ ವೇಳೆಗೆ 2,000ಕ್ಕೂ ಅಧಿಕ ದಾನಿಗಳು ರಕ್ತದಾನ ಮಾಡಿದ್ದು, ಒಟ್ಟು 3,000 ರಕ್ತಚೀಲಗಳನ್ನು ಸಂಗ್ರಹಿಸುವ ಗುರಿ ಹೊಂದಲಾಗಿದೆ. ಕಳೆದ ವರ್ಷ ಇದೇ ಸಂದರ್ಭದಲ್ಲಿ 3 ದಿನಗಳಲ್ಲಿ 5,024 ರಕ್ತಚೀಲಗಳನ್ನು ಸಂಗ್ರಹಿಸಲಾಗಿತ್ತು. ರಕ್ತದಾನ ಮಾಡಿದ ದಾನಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಶಸ್ತಚಿಕಿತ್ಸ ಕ ಡಾ. ಬಸರೆಡ್ಡಿ, ಜಿಲ್ಲಾ ಮಲೇರಿಯಾ ನಿರ್ಮೂಲನಾಧಿಕಾರಿ ಡಾ. ಅಬ್ದುಲ್ಲಾ, ಸಂಡೂರು ತಾಲೂಕು ವೈದ್ಯಾಧಿಕಾರಿ ಡಾ. ಹರೀಶ್, ಜೆಎಸ್‌ಡಬ್ಲ್ಯೂ ಸಂಸ್ಥೆಯ ಸಿಇಒ ಎಲ್.ಆರ್. ಸಿಂಗ್, ಎಕ್ಸಿಕ್ಯೂಟಿವ್ ವೈಸ್ ಪ್ರೆಸಿಡೆಂಟ್ ಮಯೂಶ್ ಬಾಪಾಟ್, ವೈಸ್ ಪ್ರೆಸಿಡೆಂಟ್ ಸುನಿಲ್ ರಲ್ಪೆ ಹಾಗೂ ರಿತೇಶ್ ಸಿನ್ಹಾ, ಸೌತ್ ರೀಜನಲ್ ಹೆಡ್ ಪೆದ್ದಣ್ಣ ಬೀಡಾಲ್ ಹಾಗೂ ಭಾರತಿ ಪಳನಿಸ್ವಾಮಿ ಸೇರಿದಂತೆ ಜೆಎಸ್‌ಡಬ್ಲ್ಯೂ ಫೌಂಡೇಶನ್ ಅಧಿಕಾರಿಗಳು, ಆರೋಗ್ಯ ಇಲಾಖೆ ಹಾಗೂ ನರ್ಸಿಂಗ್ ಕಾಲೇಜಿನ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಸಿರುಗುಪ್ಪ ತಾಲ್ಲೂಕಿನಲ್ಲಿ ಬರ ಅಧ್ಯಯನ ಸಮೀಕ್ಷೆ ನಡೆಸಿದ ಸಚಿವ ಬಿ.ನಾಗೇಂದ್ರ

ಬಳ್ಳಾರಿ,ಆ.08-

ಸಿರುಗುಪ್ಪ ತಾಲ್ಲೂಕಿನಲ್ಲಿ ಮುಂಗಾರು ಮಳೆ ಅಭಾವದಿಂದಾಗಿ ತೀವ್ರ ಬರ ಪರಿಸ್ಥಿತಿ ನಿರ್ಮಾಣವಾಗಿದ್ದು, ಶುಕ್ರವಾರ ಬಳ್ಳಾರಿ ಜಿಲ್ಲಾ ಅತಿವೃಷ್ಠಿ ಮತ್ತು ಬರ ಪರಿಸ್ಥಿತಿ ನಿರ್ವಹಣೆಯ ಮೇಲುಸ್ತುವಾರಿ ಸಚಿವ ಬಿ. ನಾಗೇಂದ್ರ ಅವರು, ಸಮೀಪದ ಸಿದ್ದರಾಂಪುರ ಗ್ರಾಮದ ರೈತರ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಾದ್ಯಂತ ರೈತರ ಜಮೀನುಗಳಲ್ಲಿ ಬೆಳೆದ ಬೆಳೆಯ ಸ್ಥಿತಿಗತಿಯನ್ನು ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸುತ್ತಿದ್ದು, ರೈತರಿಂದ ಬೆಳೆ ನಷ್ಟದ ಬಗ್ಗೆ ಮಾಹಿತಿಯನ್ನು ಪಡೆದುಕೊಂಡು ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದರು.

ಸಿದ್ದರಾಂಪುರ ಗ್ರಾಮದ ರೈತ ಮಹಿಳೆ ರಾಜೇಶ್ವರಮ್ಮ ಇವರ 3 ಎಕರೆಯಲ್ಲಿ ಬೆಳೆದ ಸಜ್ಜೆ ಬೆಳೆಯನ್ನು ಪರಿಶೀಲಿಸಿ ನಡೆಸಿ, ಸಜ್ಜೆ ಬಿತ್ತನೆ ಮಾಡಿದ್ದ ಬೆಳೆ ಸಂಪೂರ್ಣ ಒಣಗಿರುವುದನ್ನು ಕಂಡು ಸ್ಥಳದಲ್ಲಿದ್ದ ಕೃಷಿ ಅಧಿಕಾರಿಗಳಿಗೆ ರೈತರಿಗೆ ಬೆಳೆ ವಿಮೆ ಪಡೆಯಲು ಕ್ರಮ ವಹಿಸಲು ಸೂಚಿಸಿದರು.

ಸಿರುಗುಪ್ಪ ತಾಲ್ಲೂಕಿನಲ್ಲಿ ಮಳೆ ಕೊರತೆಯಿಂದಾಗಿ ಮುಂಗಾರು ಹಂಗಾಮು ಸಂಪೂರ್ಣ ವಿಫಲಗೊಳ್ಳುವ ಭೀತಿ ಎದುರಾಗಿದೆ. ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯಡಿ ಶೇ.25 ಕ್ಕಿಂತ ಕಡಿಮೆ ಬಿತ್ತನೆಯಾಗಿರುವ ಪ್ರದೇಶಗಳಲ್ಲಿ ಮುಂಜಾಗ್ರತಾ ಬಿತ್ತನೆ ನಿಯಮದಡಿ ರೈತರಿಗೆ ರಕ್ಷಣೆ ಸಿಗಲಿದೆ ಎಂದು ತಿಳಿಸಿದರು. ತುಂಗಭದ್ರಾ ನೀರಾವರಿ ಸಲಹಾ ಸಮಿತಿ ಸಭೆ ಕರೆಯುವ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗಿದೆ. ಜಲಾಶಯದಲ್ಲಿ 80 ಟಿಎಂಸಿ ನೀರು ಸಂಗ್ರಹವಾಗುವ ನಿರೀಕ್ಷೆ ಇದ್ದು, ಆದಷ್ಟು ಶೀಘ್ರವಾಗಿ ಕಾಲುವೆಗಳಿಗೆ ಬೆಳೆಗಾಗಿ ನೀರು ಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಸಿರುಗುಪ್ಪ ಶಾಸಕ ಬಿ.ಎಂ ನಾಗರಾಜ ಅವರು ಮಾತನಾಡಿ, ಸಿರುಗುಪ್ಪ ತಾಲ್ಲೂಕಿನ ಹಚ್ಚೊಳ್ಳಿ ಹೋಬಳಿ ಹೊರತಾಗಿ ಉಳಿದೆಲ್ಲ ಹೋಬಳಿಗಳಲ್ಲಿ ಮಳೆಯ ಕೊರತೆಯಿದ್ದು, ಸರ್ಕಾರಕ್ಕೆ ವರದಿ ಸಲ್ಲಿಸಿ ರೈತರಿಗೆ ಅನುಕೂಲ ಕಲ್ಪಿಸುವ ಕ್ರಮ ವಹಿಸಲಾಗುವುದು ಎಂದರು. ವಿವಿಧ ಸಂಘಟನೆಗಳ ರೈತರು ಹಾಗೂ ಗ್ರಾಮಸ್ಥರು ವಿವಿಧ ಬೇಡಿಕೆ ಈಡೇರಿಸುವಂತೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಕೆ.ನಾಗೇಂದ್ರ ಪ್ರಸಾದ್, ಜಂಟಿ ಕೃಷಿ ನಿರ್ದೇಶಕ ಸೋಮಸುಂದರ, ತೋಟಗಾರಿಕಾ ಜಂಟಿ ನಿರ್ದೇಶಕ ಶಶಿಕಾಂತ್, ತಹಶೀಲ್ದಾರ್ ಗೌಸಿಯಾ ಬೇಗಂ ಸೇರಿದಂತೆ ತಾಲ್ಲೂಕಿನ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ರೈತರು, ಸಾರ್ವಜನಿಕರು ಹಾಜರಿದ್ದರು.

ವಿಕಸಿತ ಭಾರತ ಜಿ ರಾಮ್ ಜಿ ಯೋಜನೆಯ ಸೌಲಭ್ಯ ಪಡೆದುಕೊಳ್ಳಲು ರೈತರಿಗೆ ಕುಷ್ಟಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕರೆ

ಕೊಪ್ಪಳ ಆ.08-

2026-27ನೇ ಸಾಲಿನಲ್ಲಿ ಕುಷ್ಟಗಿ ತಾಲೂಕಿನ ಗ್ರಾಮಗಳ ಸಮಗ್ರ ಅಭಿವೃದ್ಧಿ, ಗ್ರಾಮೀಣ ಪ್ರದೇಶದ ರೈತರು, ಕೂಲಿಕಾರರು ಮತ್ತು ಜೀವನೋಪಾಯ ಚಟುವಟಿಕೆಗಳ ಮೂಲಕ ಆರ್ಥಿಕ ಸದೃಢತೆ ಸಾಧಿಸಲು ಜಾರಿಯಾದ ವಿಕಸಿತ ಭಾರತ ಜಿ ರಾಮ್ ಜಿ ಯೋಜನೆಯ ಲಾಭ ಪಡೆದುಕೊಳ್ಳುವಂತೆ ಕುಷ್ಟಗಿ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ಶಿವಯೋಗಿ ಅವರು ಕರೆ ನೀಡಿದರು. ಕುಷ್ಟಗಿ ತಾಲೂಕಿನ ಸಂಗನಾಳ, ಮಾಲಗಿತ್ತಿ, ಹಿರೇನಂದಿಹಾಳ, ಬಿಜಕಲ್ಲ ಹಾಗೂ ಕಿಲಾರಹಟ್ಟಿ ಗ್ರಾಮ ಪಂಚಾಯಿತಿಗಳಲ್ಲಿ ಆಯೋಜಿಸಲಾಗಿದ್ದ ವಿಕಸಿತ ಭಾರತ ಜಿ ರಾಮ್ ಜಿ ಯೋಜನೆಯ ಕ್ರಿಯಾ ಯೋಜನೆ ಸಿದ್ದಪಡಿಸುವ ಕುರಿತಂತೆ ಇತ್ತೀಚೆಗೆ ಆಯಾ ಗ್ರಾಮಗಳಲ್ಲಿ ಹಮ್ಮಿಕೊಂಡಿದ್ದ ಗ್ರಾಮ ಸಭೆಗಳಲ್ಲಿ ಅವರು ಮಾತನಾಡಿದರು.

ವೈಯಕ್ತಿಕ ಕಾಮಗಾರಿಗಳಿಗೆ ಅವಕಾಶ: ವಿಕಸಿತ ಭಾರತ ಜಿ ರಾಮ್ ಜಿ ಯೋಜನೆಯಡಿ ತೋಟಗಾರಿಕೆ ಇಲಾಖೆಯಿಂದ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಅವಕಾಶವಿದ್ದು, ರೈತರು ವೈಯಕ್ತಿಕ ಕಾಮಗಾರಿಗಳನ್ನು ಕೈಗೊಳ್ಳಬಹುದು. ರಾಷ್ಟ್ರೀಯ ತೋಟಗಾರಿಕೆ ಇಲಾಖೆಯಿಂದ ಇದಕ್ಕೆ ಅಗತ್ಯ ಸೌಲಭ್ಯಗಳು ದೊರೆಯಲಿವೆ ಎಂದರು. ವಿವಿಧ ಬೆಳೆಗಳಿಗೆ ಆದ್ಯತೆ: ಗ್ರಾಮೀಣ ಭಾಗದ ರೈತರಿಗೆ ಮಾವು, ದಾಳಿಂಬೆ, ಮುಂತಾದ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಸಹ ವಿಕಸಿತ ಭಾರ ತ ಜಿ ರಾಮ್ ಜಿ ಯೋಜನೆಯಡಿ ಪ್ರಮುಖ ಆದ್ಯತೆ ನೀಡಲಾಗುತ್ತದೆ ಎಂದು ಹೇಳಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಅಮಿತ್ ಶಾ ರಾಜೀನಾಮೆ ನೀಡಬೇಕಲ್ಲವೇ?

ಅಧಿಕಾರಕ್ಕೆ ಮಾತ್ರ ವಿಳಾಸವಿದ್ದು, ಹೊಣೆಗಾರಿಕೆಗೆ ವಿಳಾಸವೇ ಇಲ್ಲ ಎಂಬುದು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲ. ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಂದಕ್ಕೂ ಹೊಣೆಗಾರಿಕೆ ಇದ್ದೇ ಇದೆ. ಅದರಿಂದ, ಮೋದಿ ಆಗಲೀ, ಅಮಿತ್ ಶಾ ಆಗಲೀ ಹೊರತಲ್ಲ. ಅವರೂ ಹೊಣೆ ಹೊರಬೇಕು, ಉತ್ತರ ನೀಡಬೇಕು, ಉತ್ತರದಾಯಿ ಆಗಬೇಕು.

ದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲೆ ಭೀಕರ ಪೊಲೀಸ್ ದೌರ್ಜನ್ಯ ನಡೆದು 18 ದಿನಗಳು ಕಳೆದಿವೆ. ಈವರೆಗೆ, ಈ ಕ್ರೌರ್ಯದ ಕುರಿತು ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಸದನದ ಒಳಗಾಗಲೀ, ಹೊರಗಾಗಲೀ ಉತ್ತರಿಸಿಲ್ಲ. ಯಾವುದೇ ಸ್ಪಷ್ಟನೆಯನ್ನೂ ನೀಡಿಲ್ಲ. ಈ ಭೀಕರ ಘಟನೆಗೆ ಹೊಣೆಗಾರಿಕೆ ವಹಿಸುವಂತೆ ವಿಪಕ್ಷಗಳು ನಿರಂತರವಾಗಿ ಆಗ್ರಹಿಸುತ್ತಿದ್ದರೆ, ಇಬ್ಬರೂ ನಾಯಕರು ನಡೆಯುತ್ತಿರುವ ಸದನದಿಂದಲೇ ಕಾಣೆಯಾಗಿದ್ದಾರೆ. ಪ್ರಧಾನಿ ಮೋದಿ ಅವರು ರಾತ್ರಿ 11 ಪಾಳಿಯಲ್ಲಿ ಸಾಮಾಜಿಕ ಜಾಲತಾಣದಲ್ಲಿ ಫ್ರಾಂಡ್ಸ್ ಎನ್ನುತ್ತ ವಿಡಿಯೋ ಅಪ್‌ಲೋಡ್ ಮಾಡಿಕೊಂಡು ಕಾಲ ಕಳೆಯುತ್ತಿದ್ದರೆ, ಗೃಹ ಸಚಿವ ಅಮಿತ್ ಶಾ ನಾಪತ್ತೆಯಾಗಿದ್ದಾರೆ.

ಇಂತಹ ಸನ್ನಿವೇಶದಲ್ಲಿ ಪರೀಕ್ಷಾ ಅಕ್ರಮ, ಪ್ರಶ್ನೆಪತ್ರಿಕೆ ಸೋರಿಕೆ, ನೇಮಕಾತಿ ವಿಳಂಬ, ಶಿಕ್ಷಣ ವ್ಯವಸ್ಥೆಯ ಅನ್ಯಾಯಗಳ ವಿರುದ್ಧ ಬೀದಿಗಿಳಿದ ಯುವಜನರನ್ನು ಜುಲೈ 20ರಂದು ಕೇಂದ್ರ ಸರ್ಕಾರ ನಡೆಸಿಕೊಂಡ ರೀತಿಗೆ ಉತ್ತರವೂ-ಉತ್ತರದಾಯಿಯೂ ಇಲ್ಲದಂತಾಗಿವೆ. ಜಂತರ್ ಮಂತರ್‌ನಲ್ಲಿ ನಡೆದ ಪೊಲೀಸ್ ದಾಳಿಯಲ್ಲಿ ಬಳಸಿದ ಲಾಠಿಗಳ ಸಂಖ್ಯೆಯನ್ನಾದರೂ ಎಣಿಸಬಹುದು. ಆದರೆ, ಲಾಠಿಗಳ ಹಿಂದಿನ ರಾಜಕೀಯ ಹೊಣೆಗಾರಿಕೆಯನ್ನು ಎಣಿಸುವುದು ಜಟಿಲವಾಗಿದೆ.

ಅನ್ಯಾಯ-ಅಕ್ರಮಗಳ ವಿರುದ್ಧ ಪ್ರತಿಭಟನೆಗಾಗಿ ಬೀದಿಗಿಳಿದಿದ್ದ ಯುವಜನರು ದೇಶದ ಗಡಿ ದಾಟಿ ಬಂದವರಲ್ಲ. ಸರ್ಕಾರವನ್ನು ಉರುಳಿಸಲು ಶಸ್ತ್ರ ಹಿಡಿದು ಬಂದವರೂ ಅಲ್ಲ. ಅವರ ಕೈಯಲ್ಲಿದ್ದದ್ದು ತಮ್ಮ ಭವಿಷ್ಯದ ಕುರಿತ ಪ್ರಶ್ನೆಗಳು. ವರ್ಷಗಟ್ಟಲೆ ಓದಿದ ಪರೀಕ್ಷೆ ಏಕೆ ರದ್ದಾಗುತ್ತದೆ? ಪ್ರಶ್ನೆಪತ್ರಿಕೆ ಹೇಗೆ ಸೋರಿಕೆಯಾಗುತ್ತದೆ? ನೇಮಕಾತಿ ಏಕೆ ವರ್ಷಗಟ್ಟಲೆ ನಡೆಯುವುದಿಲ್ಲ? ನಮ್ಮ ಬದುಕಿನ ಅಮೂಲ್ಯ ವರ್ಷಗಳಿಗೆ ಯಾರು ಉತ್ತರ ಕೊಡುತ್ತಾರೆ? -ಈ ಪ್ರಶ್ನೆಗಳಿಗೆ ಶಿಕ್ಷಣ ಇಲಾಖೆ ಉತ್ತರಿಸಬೇಕು. ಸರ್ಕಾರ ಉತ್ತರಿಸಬೇಕು. ಸಂಸತ್ತು ಚರ್ಚಿಸಬೇಕು ಎಂಬುದು ಅವರ ಆಗ್ರಹವಾಗಿತ್ತು.

ಆದರೆ, ಪ್ರಜಾಪ್ರಭುತ್ವದ ಸೋಗಿನಲ್ಲಿ ಸರ್ವಾಧಿಕಾರಿ ಆಡಳಿತ ನಡೆಸುತ್ತಿರುವ ಪ್ರಭುತ್ವವು ಪ್ರಶ್ನೆಗೆ ಉತ್ತರಿಸುವುದನ್ನು ಬಿಟ್ಟು ಪ್ರಶ್ನೆ ಕೇಳುವವರನ್ನೇ ಕಾನೂನು ಸುವ್ಯವಸ್ಥೆಯ ಸಮಸ್ಯೆಯಾಗಿ ಬಿಂಬಿಸಿತು. ದೇಶದ್ರೋಹಿಗಳು ಎಂಬ ಪಟ್ಟ ಕಟ್ಟಿತು. ಉತ್ತರ ಇರಬೇಕಿದ್ದ ಜಾಗದಲ್ಲಿ ಪೊಲೀಸ್ ಲಾಠಿಗಳು ಬಂದವು. ಜಂತರ್ ಮಂತರ್‌ನಲ್ಲಿ ಅಪ್ರಾಪ್ತರು, ಮಹಿಳೆಯರು ಹಾಗೂ ವಿದ್ಯಾರ್ಥಿಗಳ ಮೇಲೆ ಅತಿಯಾದ ಬಲಪ್ರಯೋಗ ನಡೆಯಿತು. ಪೊಲೀಸರು ಲಾಠಿ ಬೀಸಿದರು. ಕ್ರೌರ್ಯ ಮೆರೆದರು. ಈ ದೌರ್ಜನ್ಯದ ವೇಳೆ, ಕೆಲ ಪೊಲೀಸ್ ಸಿಬ್ಬಂದಿ ಗುರುತು ಮರೆಮಾಚಿಕೊಂಡಿದ್ದರು, ಪ್ರತಿಭಟನಾಕಾರರು ಗಾಯಗೊಂಡರು.

ದೆಹಲಿ ಪೊಲೀಸರು ಕೇಂದ್ರ ಗೃಹ ಸಚಿವಾಲಯದ ಆಡಳಿತಾತ್ಮಕ ನಿಯಂತ್ರಣದಲ್ಲಿದ್ದಾರೆ. ಹಾಗಾಗಿ, ಜಂತರ್ ಮಂತರ್‌ನಲ್ಲಿ ಪೊಲೀಸರು ಕಾನೂನಿನ ಮಿತಿಯಲ್ಲೇ ನಡೆದುಕೊಂಡಿದ್ದರೆ ಗೃಹ ಸಚಿವ ಅಮಿತ್ ಶಾ ಸಂಸತ್ತಿನಲ್ಲಿ ನಿಂತು ಅದನ್ನು ವಿವರಿಸಬೇಕಿತ್ತು. ಪೊಲೀಸರು ಕಾನೂನು ಮೀರಿ ವರ್ತಿಸಿದ್ದರೆ, ಅಂದಿನ ಇಡೀ ಘಟನೆ ಸ್ವತಂತ್ರ ತನಿಖೆಗೆ ಒಳಪಡಬೇಕಿತ್ತು. ಪೊಲೀಸ್ ಅಲ್ಲದ ವ್ಯಕ್ತಿಗಳು ಹಿಂಸಾಚಾರದಲ್ಲಿ ಪಾಲ್ಗೊಂಡಿದ್ದಾರೆ ಎಂಬ ಆರೋಪಗಳನ್ನು ಸಾಕ್ಷ್ಯಾಧಾರಗಳೊಂದಿಗೆ ತನಿಖೆ ಮಾಡಬೇಕಿತ್ತು. ಅತಿಯಾದ ಬಲಪ್ರಯೋಗದ ತನಿಖೆ ನಡೆಸಿ ಹೊಣೆಗಾರರನ್ನು ಗುರುತಿಸಬೇಕಿತ್ತು. ಆದರೆ, ಅದಾಗಲಿಲ್ಲ. ಉತ್ತರವೂ ದೊರೆಯುತ್ತಿಲ್ಲ. ಹೊಣೆಗಾರಿಕೆಯಂತೂ ಇಲ್ಲವೇ ಇಲ್ಲ. ಇದೆಲ್ಲವನ್ನೂ ಮಾಡಬೇಕಿದ್ದ ಅಮಿತ್ ಶಾ ಪತ್ತೆಯೇ ಇಲ್ಲ!

ಅಧಿಕಾರ ಮೇಲಿನ ಮಹಡಿಯಲ್ಲಿ ಕೇಂದ್ರೀಕೃತವಾಗಿರಬೇಕು; ವೈಫಲ್ಯ ಸಂಭವಿಸಿದಾಗ ಹೊಣೆ ಮಾತ್ರ ಕೆಳಗಿನ ಕಾನ್‌ಸ್ಟೆಬಲ್‌ಗಳಿಗೆ ಮಾತ್ರ ಸೀಮಿತವಾಗಿರಬೇಕು ಎಂದಾದರೆ ಅದನ್ನು ಉತ್ತರದಾಯಿ ಆಡಳಿತ ಎನ್ನಲಾಗದು. ಉತ್ತರ ಮತ್ತು ಉತ್ತರದಾಯಿ ಎರಡೂ ಮೇಲಿನ ಮಹಡಿಯಲ್ಲಿ ಕುಳಿತವರದ್ದೇ ಆಗಿರುತ್ತದೆ.

ಇದರರ್ಥ, ಸಂಸದೀಯ ಪ್ರಜಾಪ್ರಭುತ್ವದಲ್ಲಿ ಸಚಿವರ ಹೊಣೆಗಾರಿಕೆ ಎಂದರೆ ಇಲಾಖೆಯ ಪ್ರತಿಯೊಂದು ಕೆಲಸವನ್ನೂ ಸಚಿವರೇ ಮಾಡುತ್ತಾರೆ ಎಂದಲ್ಲ. ಆದರೆ, ಅವರ ಅಧೀನದ ವ್ಯವಸ್ಥೆಯ ಗಂಭೀರ ವೈಫಲ್ಯಗಳಿಗೆ ಅವರೇ ರಾಜಕೀಯವಾಗಿ ಉತ್ತರದಾಯಿ ಆಗಿರುತ್ತಾರೆ.

ಆದ್ದರಿಂದಲೇ, ಕಳೆದ ವಾರ ಲೋಕಸಭೆಯಲ್ಲಿ ಮಾತನಾಡಿದ್ದ ವಿಪಕ್ಷ ನಾಯಕ ರಾಹುಲ್ ಗಾಂಧಿ, ವಿದ್ಯಾರ್ಥಿಗಳ ಮೇಲಿನ ಪೊಲೀಸ್ ದೌರ್ಜನ್ಯಕ್ಕೆ ನೇರವಾಗಿ ಗೃಹ ಸಚಿವರೇ ಹೊಣೆ ಎಂದು ವಾಗ್ದಾಳಿ ನಡೆಸಿದ್ದರು. ''ಪೊಲೀಸರ ಬಲಪ್ರಯೋಗಕ್ಕೆ ಗೃಹ ಸಚಿವರು ಅಥವಾ ಪ್ರಧಾನ ಮಂತ್ರಿಯಷ್ಟೇ ಅಧಿಕಾರ ನೀಡಲು ಸಾಧ್ಯ. ಆದ್ದರಿಂದ, ಅಮಿತ್ ಶಾ ಅವರು ಈ ಕೃತ್ಯದ ಜವಾಬ್ದಾರಿ ಹೊತ್ತು ತಕ್ಷಣ ರಾಜೀನಾಮೆ ನೀಡಬೇಕು'' ಎಂದು ಆಗ್ರಹಿಸಿದ್ದರು.

ಆದಾಗ್ಯೂ, ಮೋದಿ ಆಡಳಿತದಲ್ಲಿ ಉತ್ತರದಾಯಿತ್ವ ಎಂಬುದೇ ಮರೀಚಿಕೆಯಾಗಿದೆ. ದೇಶದ ನಾಗರಿಕರ ಮೇಲೆ ಆಡಳಿತಾತ್ಮಕ ಕ್ರೌರ್ಯ ನಡೆದಾಗ ಅಮಿತ್ ಶಾ ನಾಪತ್ತೆಯಾಗುವುದು ಇದೇ ಮೊದಲೇನೂ ಅಲ್ಲ. ಈ ಹಿಂದೆ, 2020-21ರಲ್ಲಿ ನಡೆದ ರೈತ ಹೋರಾಟದ ಸಮಯದಲ್ಲಿ ದೆಹಲಿಯ ಗಡಿಗಳಲ್ಲಿ ಕಾಂಕ್ರೀಟ್ ತಡೆಗೋಡೆ, ಮುಳ್ಳುತಂತಿ ಹಾಗೂ ರಸ್ತೆಗಳಿಗೆ ಕಬ್ಬಿಣದ ಮೊಳೆಗಳನ್ನು ಹೊಡದು ರೈತರನ್ನು ತಡೆಯಲು ಮೋದಿ ಸರ್ಕಾರ ಮತ್ತು ಅಮಿತ್ ಶಾ ಅವರ ಗೃಹ ಇಲಾಖೆ ಯತ್ನಿಸಿತ್ತು. ತಮ್ಮ ಹಕ್ಕೊತ್ತಾಯಗಳನ್ನು ಮಂಡಿಸಲು ದೆಹಲಿಗೆ ಬರುತ್ತಿದ್ದ ರೈತರ ಎದುರು ಕೋಟೆ ಕಟ್ಟಿಕೊಂಡು ಅಡಗಿ ಕುಳಿತಿತ್ತು. ಮಾತ್ರವಲ್ಲ, ರೈತರ ಮೇಲೆ ಜಲಫಿರಂಗಿ, ಲಾಠಿ ಪ್ರಹಾರ ಹಾಗೂ ಟಿಯರ್ ಗ್ಯಾಸ್‌ಗಳನ್ನು ಪ್ರಯೋಗಿಸಿ, ದೌರ್ಜನ್ಯ ಎಸಗಿತು.

ಅದೇ ರೈತ ಹೋರಾಟದ ವೇಳೆ, ಲಖೀಂಪುರ ಖೇರಿಯಲ್ಲಿ ಪ್ರತಿಭಟನಾ ನಿರತ ರೈತರ ಮೇಲೆ ಇದೇ ಗೃಹ ಸಚಿವ ಅಮಿತ್ ಶಾ ಅವರ ಸಹೋದ್ಯೋಗಿ, ಕೇಂದ್ರ ಗೃಹ ಇಲಾಖೆಯ ರಾಜ್ಯ ಸಚಿವ ಅಜಯ್ ಮಿಶ್ರಾ ತೇಣಿಯ ಮಗ ಆಶಿಶ್ ಮಿಶ್ರಾ ಜೀಪು ಹರಿಸಿ 8 ಮಂದಿ ರೈತರನ್ನು ಕೊಂದಿದ್ದನು. ಆಗ, ರಾಜಕೀಯ ಹೊಣೆಗಾರಿಕೆಯ ಪ್ರಶ್ನೆ ಮುನ್ನೆಲೆಗೆ ಬಂದರೂ, ಯಾವುದೇ ಹೊಣೆಗಾರಿಕೆಗೆ ಮೋದಿ ಸರ್ಕಾರ ಮುಂದಾಗಲಿಲ್ಲ.

ಅಂತೆಯೇ, 2023ರಲ್ಲಿ ಇದೇ ಜಂತರ್ ಮಂತರ್‌ನಲ್ಲಿ ದೇಶಕ್ಕಾಗಿ ಪದಕ ಗೆದ್ದ ಮಹಿಳಾ ಕುಸ್ತಿಪಟುಗಳು ನ್ಯಾಯ ಕೇಳಿ ಧರಣಿ ಕುಳಿತಿದ್ದರು. ಹೊಸ ಸಂಸತ್ ಭವನ ಉದ್ಘಾಟನೆಯ ದಿನವೇ ಅವರನ್ನು ಅದೇ ದೆಹಲಿ ಪೊಲೀಸರು ಬೀದಿಗಳಲ್ಲಿ ಎಳೆದೊಯ್ದು, ಹಿಂಸಿಸಿ ಕ್ರೌರ್ಯ ಮೆರೆದರು.

ಇನ್ನೊಂದೆಡೆ, ಮಣಿಪುರದಲ್ಲಿ 2023ರಲ್ಲಿ ಆರಂಭವಾದ ಜನಾಂಗೀಯ ಸಂಘರ್ಷ ಜೀವಗಳನ್ನು ಕಸಿದುಕೊಂಡಿತು, ಮಹಿಳೆಯರನ್ನು ಬೆತ್ತಲುಗೊಳಿಸಿ ಬೀದಿಗಳಲ್ಲಿ ಎಳೆದೊಯ್ದು ಸಾಮೂಹಿಕ ಅತ್ಯಾಚಾರ ಎಸಗಲಾಯಿತು, ಸಾವಿರಾರು ಜನರನ್ನು ಮನೆಗಳಿಂದ ಹೊರದಬ್ಬಲಾಯಿತು, ಸಮಾಜವನ್ನು ಜನಾಂಗೀಯ ಗಡಿಗಳಲ್ಲಿ ವಿಭಜಿಸಿತು. ಶಸ್ತ್ರಾಗಾರಗಳಿಂದ ಆಯುಧಗಳು ಕಳವಾದವು. ಕುಟುಂಬಗಳು ಪರಿಹಾರ ಶಿಬಿರಗಳಿಗೆ ತಳ್ಳಲ್ಪಟ್ಟವು. ಒಂದು ರಾಜ್ಯ ಇಷ್ಟು ದೀರ್ಘಕಾಲ ಅಶಾಂತಿಯಲ್ಲಿದ್ದರೂ, ಆಂತರಿಕ ಭದ್ರತೆಯ ಹೊಣೆಹೊತ್ತಿರುವ ಕೇಂದ್ರ ಗೃಹ ಇಲಾಖೆ ನಿರ್ಲಜ್ಜ ಮೌನಕ್ಕೆ ಜಾರಿತು.

ಈ ಎಲ್ಲ ಸಂದರ್ಭಗಳಲ್ಲೂ ಕೇಂದ್ರ ಗೃಹ ಸಚಿವಾಲಯವು ಘಟನೆಗಳ ರಾಜಕೀಯ ಹೊಣೆಗಾರಿಕೆ ಯಾರದ್ದು ಎಂಬ ಪ್ರಶ್ನೆಗೆ ಉತ್ತರಿಸಬೇಕಿತ್ತು. ಹೊಣೆಹೊರಬೇಕಿತ್ತು. ಉತ್ತರ ನೀಡಬೇಕಿತ್ತು. ಆದರೆ, ಉತ್ತರಿಸಲಿಲ್ಲ. ಬದಲಾಗಿ, ವೈಫಲ್ಯಗಳು ಸರಣಿಯಾಗಿ ಎದುರಾಗುತ್ತಿದ್ದರೂ ಅಧಿಕಾರದ ಶಿಖರದಲ್ಲಿರುವವರು ಯಾವತ್ತೂ ಉತ್ತರಿಸಬೇಕಿಲ್ಲ ಎಂಬಂತಹ ಧೋರಣೆಗೆ ಮೋದಿ-ಶಾ ಜೋಡಿ ತಲುಪಿದೆ.

ಮುಖ್ಯವಾಗಿ, ಈವರೆಗೆ ವೈಫಲ್ಯಗಳಿಗೆ ಹೊಣೆಗಾರಿಕೆ ಕೇಳುವ ಗಟ್ಟಿಧ್ವನಿಗಳು ಕಳೆದ ಒಂದು ದಶಕದಲ್ಲಿ ಕೊಂಚ ಹಿಂದೆ ಉಳಿದಿದ್ದವು. ಈಗ ಆ ಧ್ವನಿ ಬಿರುಗಾಳಿಯಂತೆ ಮುಂದೆ ಬಂದಿದೆ. ಈ ಬಿರುಗಾಳಿಗೆ ಜೆನ್-ಝೀ ಎಂಬ ಹೊಸತಲೆಮಾರಿನ ಯುವಪಡೆ ನಾಯಕತ್ವ ನೀಡಿದೆ. ಅದು ವೈಫಲ್ಯಗಳಿಗೆ ಉತ್ತರದಾಯಿತ್ವ ಕೇಳುತ್ತಿದೆ.

ಈಗಾಗಲೇ, ಪರೀಕ್ಷಾ ಅಕ್ರಮಗಳ ಹೊಣೆಹೊತ್ತು ಕೇಂದ್ರ ಶಿಕ್ಷಣ ಖಾತೆಗೆ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡುವಂತೆ ಮಾಡುವಲ್ಲಿ ಜೆನ್-ಝೀ ಪ್ರತಿಭಟನೆ ಯಶಸ್ವಿಯಾಗಿದೆ. ಇಷ್ಟು ದಿನ ನಾವು ನಡೆಸಿದ್ದೇ ಆಡಳಿತ ಮಾಡಿದ್ದೇ ಕಾನೂನು ಎಂಬ ಧೋರಣೆಯಲ್ಲಿದ್ದ ಮೋದಿ ಸರ್ಕಾರದ ನಿದ್ರೆಗೆಡಿಸಿದೆ. ಈಗ, ದೇಶವಾಸಿಗಳ ಮೇಲೆ ನಿರಂತರವಾಗಿ ನಡೆದಿರುವ ಆಡಳಿತಾತ್ಮಕ ಕ್ರೌರ್ಯಕ್ಕೂ ಹೊಣೆಗಾರಿಕೆಯನ್ನು ಕೇಳುತ್ತಿದೆ.

ಪೊಲೀಸ್ ಅತಿರೇಕಗಳು ನಡೆದರೆ ಕಾನ್‌ಸ್ಟೆಬಲ್‌ಗಳ ಅಮಾನತುಗಳು ನಡೆಯುತ್ತವೆ. ಗುಪ್ತಚರ ವೈಫಲ್ಯವಾದರೆ ಅಧಿಕಾರಿಯ ವರ್ಗಾವಣೆ ಆಗುತ್ತದೆ. ಯಾವುದೇ ಇಲಾಖೆಯಲ್ಲಿನ ಅಕ್ರಮಗಳ ನಡೆದರೆ, ಅಲ್ಲಿನ ಅಧಿಕಾರಿಗಳ ಅಮಾನತು-ವಜಾ-ವರ್ಗಾವಣೆಗಳು ಜರುಗುತ್ತವೆ. ಹಾಗಿದ್ದಾಗ, ಭದ್ರತೆ ಹೆಸರಿನಲ್ಲಿ ದೇಶದ ಜನರ ಮೇಲೆ ನಡೆಯುವ ಕ್ರೌರ್ಯ ಮತ್ತು ವ್ಯವಸ್ಥೆಯಲ್ಲಿನ ಲೋಪಕ್ಕೆ ಅಮಿತ್ ಶಾ ಹೊಣೆ ಹೊರಬೇಕಲ್ಲವೇ? ರಾಜೀನಾಮೆ ನೀಡಬೇಕಲ್ಲವೇ?

ಅಧಿಕಾರಕ್ಕೆ ಮಾತ್ರ ವಿಳಾಸವಿದ್ದು, ಹೊಣೆಗಾರಿಕೆಗೆ ವಿಳಾಸವೇ ಇಲ್ಲ ಎಂಬುದು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲ. ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಂದಕ್ಕೂ ಹೊಣೆಗಾರಿಕೆ ಇದ್ದೇ ಇದೆ. ಅದರಿಂದ, ಮೋದಿ ಆಗಲೀ, ಅಮಿತ್ ಶಾ ಆಗಲೀ ಹೊರತಲ್ಲ. ಅವರೂ ಹೊಣೆ ಹೊರಬೇಕು, ಉತ್ತರ ನೀಡಬೇಕು, ಉತ್ತರದಾಯಿ ಆಗಬೇಕು.

ಸರ್ಕಾರವು ಶಿಕ್ಷಣ ಸಚಿವರ ರಾಜೀನಾಮೆಯೊಂದಿಗೆ ರಾಜಕೀಯ ಹೊಣೆಗಾರಿಕೆಯ ತತ್ವವನ್ನು ಒಪ್ಪಿಕೊಂಡಿದೆ. ಈಗ ಅದೇ ಮಾನದಂಡ ಗೃಹ ಸಚಿವರಿಗೂ ಅನ್ವಯಿಸಬೇಕು. ಜಂತರ್ ಮಂತರ್‌ನ ಲಾಠಿಗಳಿಗೆ, ಮಣಿಪುರದ ವೈಫಲ್ಯಕ್ಕೆ, ಪ್ರತಿಭಟನೆಯ ಮೇಲಿನ ನಿರಂತರ ಬಲಪ್ರಯೋಗಕ್ಕೆ ಯಾರಾದರೂ ರಾಜಕೀಯವಾಗಿ ಉತ್ತರಿಸಲೇಬೇಕು. ಆ ಸರಪಳಿಯ ಕೊನೆಯ ಮೇಜು ಕೇಂದ್ರ ಗೃಹ ಸಚಿವರದ್ದೇ.

ಆರ್ಥಿಕವಾಗಿ ಹಿಂದುಳಿದ ವರ್ಗ: ಯಾವ ವರದಿಯನ್ನೂ ಪಡೆಯದೆ ಜಾರಿಗೆ ತಂದ ಇಡಬ್ಲ್ಯೂಎಸ್

ಹಿಂದುಳಿದ ವರ್ಗಗಳಿಗೆ ಮೀಸಲಾತಿ ಜಾರಿಗೊಳಿಸಿರುವುದನ್ನು ಸಹಿಸದ ಬಲಿಷ್ಠ ಮೇಲ್ಜಾತಿಗಳು ಪ್ರತಿಭಟನೆಗೆ ಇಳಿಯುತ್ತವೆ. ಅಷ್ಟೇ ಅಲ್ಲ ಅಮಾಯಕ ಹಿಂದುಳಿದ ಜಾತಿಗಳ ಯುವಕರನ್ನೂ ವರದಿ ಜಾರಿ ವಿರುದ್ಧ ಬಂಡೇಳುವಂತೆ ಪ್ರಚೋದಿಸಿ ಸುಮಾರು 200ಕ್ಕೂ ಹೆಚ್ಚು ಮಂದಿಯ ಆತ್ಮಾಹುತಿಗೂ ಕಾರಣರಾಗಿ ಕ್ರೌರ್ಯ ಮೆರೆಯುತ್ತಾರೆ.

ಹಿಂದುಳಿದ ವರ್ಗಗಳಿಗೆ ಮೀಸಲಾತಿ ಕಲ್ಪಿಸುವುದನ್ನು ಸಂವಿಧಾನದ ಆಶಯವಾಗಿದ್ದರೂ ಕೇಂದ್ರ ಸರ್ಕಾರದಲ್ಲಿ ಅದು ಜಾರಿಗೆ ಬಂದದ್ದು ಮಾತ್ರ 42 ವರ್ಷಗಳ ನಂತರವಷ್ಟೇ. ಮೂರು ವರ್ಷ ಹೊರತುಪಡಿಸಿ ಅಧಿಕಾರದಲ್ಲಿದ್ದ ಪಕ್ಷವೊಂದರ ಸರ್ಕಾರದ ಉದ್ದೇಶಿತ ಉಪೇಕ್ಷೆ ಹಾಗೂ ಪುರೋಹಿತಶಾಹಿಯ ನಾನಾ ತಂತ್ರಗಳು ಹಿಂದುಳಿದ ವರ್ಗಗಳ ಮೀಸಲಾತಿ ಅನುಷ್ಠಾನಕ್ಕೆ ದೊಡ್ಡ ಕಂದಕವನ್ನೇ ನಿರ್ಮಿಸಿಬಿಟ್ಟಿದ್ದವು.

ಅಂತೂ ಇಂತೂ 1977 ರಲ್ಲಿ ಅಧಿಕಾರಕ್ಕೆ ಬಂದ ಜನತಾ ಪಕ್ಷ ಸರ್ಕಾರದ ದಿಟ್ಟ ನಡೆಯ ಕಾರಣ ಎರಡನೇ ಹಿಂದುಳಿದ ರಾಷ್ಟ್ರೀಯ ಆಯೋಗವನ್ನು ಬಿ. ಪಿ. ಮಂಡಲ್ ಅವರ ಅಧ್ಯಕ್ಷತೆಯಲ್ಲಿ ಸಂವಿಧಾನದ ವಿಧಿ 340ರ ಮೇರೆಗೆ ರಚಿಸಲಾಯಿತು. ಆಯೋಗ ಎರಡು ವರ್ಷದ ಅವಧಿಯಲ್ಲೆ ಹಿಂದುಳಿದ ವರ್ಗಗಳಿಗೆ ಮೀಸಲಾತಿ ನೀಡಬೇಕೆಂಬ ಶಿಫಾರಸಿನೊಡನೆ ಶೇ.52 ರಷ್ಟಿರುವ ಹಿಂದುಳಿದ ವರ್ಗಗಳಿಗೆ ಶೇ. 27ರಷ್ಟು ಮೀಸಲಾತಿ ಕೋಟಾ ನಿಗದಿ ಮಾಡಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿತು. ಅಷ್ಟರಲ್ಲಿ ಸಾರ್ವತ್ರಿಕ ಚುನಾವಣೆ ನಡೆದು ಮತ್ತೆ ಕಾಂಗ್ರೆಸ್ ಪಕ್ಷವೇ ಅಧಿಕಾರಕ್ಕೆ ಬಂದಿತು. ಹಾಗೇ, ಇಂದಿರಾ ಗಾಂಧಿ ಪ್ರಧಾನಮಂತ್ರಿ ಪದವಿಗೇರಿದರು. ಮಂಡಲ್ ವರದಿಯನ್ನು ಇಂದಿರಾಗಾಂಧಿ ಲೋಕಸಭೆಯಲ್ಲೇನೋ ಮಂಡಿಸಿದರು. ಲೋಕಸಭೆಯಲ್ಲಿ ಅದು ಅಂಗೀಕಾರವಾಗದೆ ಮೀಸಲಾತಿಯ ಅನುಷ್ಠಾನಕ್ಕೆ ಹಿನ್ನಡೆಯಾಯಿತು. ಲೋಕಸಭೆಯಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ಸದಸ್ಯರಿದ್ದರೂ ಕೂಡ ಅಂಗೀಕಾರವಾಗದಿದ್ದದ್ದು, ಈ ವರ್ಗಗಳ ಸದಸ್ಯರು ಮೇಲ್ಜಾತಿಗಳ ಹಿಡಿತದಲ್ಲಿದ್ದರು ಅಥವಾ ಮೀಸಲಾತಿಯ ಮೂಲ ಕಲ್ಪನೆಯನ್ನೇ ಅರಿಯದವರಾಗಿದ್ದರು ಎಂಬುದು ಸೋಜಿಗದ ಸಂಗತಿ.

ಅದಾದ ಬಳಿಕ ಕೆಲ ದಿನಗಳಲ್ಲೇ ಇಂದಿರಾಗಾಂಧಿಯವರು ಹತ್ಯೆಗೀಡಾಗುತ್ತಾರೆ. ಜನತೆಯ ಅನುಕಂಪದ ಆಧಾರದ ಮೇಲೆ ರಾಜೀವ್ ಗಾಂಧಿ ಪ್ರಧಾನಮಂತ್ರಿ ಆಗುತ್ತಾರೆ. ಅವರ ಅವಧಿಯಲ್ಲಿ ಬೋಫೋರ್ಸ್ ಹಗರಣ ಭೂತದಂತೆ ಬೆಂಬತ್ತಿ ಚುನಾವಣೆಯಲ್ಲಿ ಅಧಿಕಾರ ಕಳೆದುಕೊಳ್ಳುವರು. ವಿ ಪಿ ಸಿಂಗ್ ನೇತೃತ್ವದ ರಾಷ್ಟ್ರೀಯರಂಗ ಅಧಿಕಾರಕ್ಕೆ ಬರುತ್ತದೆ. ಕಾನ್ಷಿರಾಮ್ ಮತ್ತು ದ್ರಾವಿಡ ಪಕ್ಷಗಳ ಪ್ರಬಲ ಒತ್ತಾಯದ ಮೇರೆಗೆ ಪ್ರಧಾನಿ ವಿ ಪಿ ಸಿಂಗ್ ಮಂಡಲ್ ವರದಿಯನ್ನು ಜಾರಿಗೆ ತರಲು ಸಿದ್ದರಾಗಿ 1990ರಲ್ಲಿ ಹಿಂದುಳಿದ ವರ್ಗಗಳ ಶಿಕ್ಷಣ ಮತ್ತು ಉದ್ಯೋಗದ ಹಿತದೃಷ್ಟಿಯಿಂದ ಮೀಸಲಾತಿ ಜಾರಿಗೆ ಕೊಡುತ್ತಾರೆ.

ಹಿಂದುಳಿದ ವರ್ಗಗಳಿಗೆ ಮೀಸಲಾತಿ ಜಾರಿಗೊಳಿಸಿರುವುದನ್ನು ಸಹಿಸದ ಬಲಿಷ್ಠ ಮೇಲ್ಜಾತಿಗಳು ಪ್ರತಿಭಟನೆಗೆ ಇಳಿಯುತ್ತವೆ. ಅಷ್ಟೇ ಅಲ್ಲ ಅಮಾಯಕ ಹಿಂದುಳಿದ ಜಾತಿಗಳ ಯುವಕರನ್ನೂ ವರದಿ ಜಾರಿ ವಿರುದ್ಧ ಬಂಡೇಳುವಂತೆ ಪ್ರಚೋದಿಸಿ ಸುಮಾರು 200ಕ್ಕೂ ಹೆಚ್ಚು ಮಂದಿಯ ಆತ್ಮಾಹುತಿಗೂ ಕಾರಣರಾಗಿ ಕ್ರೌರ್ಯ ಮೆರೆಯುತ್ತಾರೆ.

ಪ್ರತಿಭಟನೆ ಕಾವು ಧಗಧಗಿಸುತ್ತಿರುವಾಗಲೇ, ಸರ್ವೋಚ್ಚ ನ್ಯಾಯಾಲಯದಲ್ಲಿ ಹಲವಾರು ವಿರೋಧಿಗಳು ರಿಟ್ ದಾಖಲಿಸುತ್ತಾರೆ. ಪ್ರಾರಂಭದಲ್ಲಿ ನ್ಯಾಯಾಲಯ ಮೀಸಲಾತಿ ಜಾರಿಗೆ ತಡೆಯಾಜ್ಞೆ ನೀಡುತ್ತದೆ. ಅಂತಿಮವಾಗಿ 9 ಮಂದಿ ನ್ಯಾಯಾಧೀಶರ ಸಾಂವಿಧಾನಿಕ ಪೀಠದಲ್ಲಿ ಆರು ಮಂದಿ ನ್ಯಾಯಾಧೀಶರು ಮೀಸಲಾತಿಯನ್ನು ಎತ್ತಿ ಹಿಡಿಯುತ್ತಾರೆ. ಸರ್ವೋಚ್ಚ ನ್ಯಾಯಾಲಯದ ತೀರ್ಪಿನಲ್ಲಿ ಪ್ರಾಮುಖ್ಯತೆ ಪಡೆದ ಅಂಶವೊಂದು ನಕಾರಾತ್ಮಕವಾಗಿ ತೀರ್ಮಾನಿಸಲ್ಪಡುತ್ತದೆ. ಅದುವೇ, ಕೇವಲ ಆರ್ಥಿಕ ಹಿಂದುಳಿದಿರುವಿಕೆಯನ್ನು ಅನುಸರಿಸಿ ಮೀಸಲಾತಿ ನೀಡಲು ಸಾಧ್ಯವಿಲ್ಲ ಎಂಬುದು(ಇಂದಿರಾ ಸಹಾನಿ ಒಕ್ಕೂಟ ಸರ್ಕಾರ ,1992).

ನ್ಯಾಯಾಲಯದ ಈ ನಕಾರಾತ್ಮಕ ಆದೇಶದ ಹೊರತಾಗಿಯೂ ಮೀಸಲಾತಿ ನೀಡಲೇಬೇಕು ಎಂಬ ಪ್ರಯತ್ನ ಮಾತ್ರ ನಿಲ್ಲಲಿಲ್ಲ. ಸತ್ತಂತಿದ್ದ ಹಕ್ಕಿಯೊಂದರಲ್ಲಿ ಇನ್ನೂ ಜೀವದ ಉಸಿರಾಟ ಇರುವಂತೆ ಆ ಪ್ರಯತ್ನಗಳು ಮುಂದುವರಿದಿದ್ದವು.

2006ರಲ್ಲಿ, ಮುಂದುವರಿದ ಪ್ರಯತ್ನದ ಫಲವಾಗಿ ಅಂದಿನ ಮನಮೋಹನ ಸಿಂಗ್ ಸರ್ಕಾರ ಮೇಜರ್ ಜನರಲ್ ಎಸ್. ಆರ್. ಸಿನ್ಹಾ ಆಯೋಗ ರಚಿಸಿ ವರದಿ ಕೇಳಿತು. ಆಯೋಗ 2010ರಲ್ಲಿ ಆಯೋಗ ಸರ್ಕಾರಕ್ಕೆ ವರದಿಯನ್ನೇನೋ ಸಲ್ಲಿಸಿತು. ಆದರೆ ಸರ್ಕಾರದಿಂದ ವರದಿ ಬಿಡುಗಡೆಯೂ ಆಗಲಿಲ್ಲ; ಆ ಬಗ್ಗೆ ಬಹಿರಂಗ ಚರ್ಚೆಯೂ ಆಗಲಿಲ್ಲ. ವರದಿಯಲ್ಲಿ ಆರ್ಥಿಕ ದುರ್ಬಲ ವರ್ಗಗಳ ಮೀಸಲಾತಿ ಕುರಿತು ಏನೂ ಹೇಳದೆ ಮೇಲ್ಜಾತಿ ವರ್ಗಗಳ ಕಲ್ಯಾಣ ಕಾರ್ಯಕ್ರಮಗಳ ಬಗ್ಗೆ ಮಾತ್ರ ಹೇಳಲಾಗಿದೆ ಎಂಬುದಷ್ಟೇ



ಬಹಿರಂಗಗೊಂಡಿತು. 2014ರ ಸಾರ್ವತ್ರಿಕ ಚುನಾವಣೆಯಲ್ಲಿ ಮನಮೋಹನ್ ಸಿಂಗ್ ನೇತೃತ್ವದ ಯುಪಿಎ ಸರ್ಕಾರ ಸೋಲಬೇಕಾಯಿತು. ಸೋಲಿನ ಜೊತೆಗೆ ಆರ್ಥಿಕವಾಗಿ ಹಿಂದುಳಿದವರಿಗೆ ಮೀಸಲಾತಿ ನೀಡುವ ವಿಷಯವೂ ಕೂಡ ಮೂಲೆ ಸೇರಿತು ಎನ್ನಬಹುದು.

2014ರ ಸಾರ್ವತ್ರಿಕ ಚುನಾವಣೆಯಲ್ಲಿ, ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳು ಪ್ರಣಾಳಿಕೆಯಲ್ಲಿ ಆರ್ಥಿಕವಾಗಿ ಹಿಂದುಳಿದವರಿಗೆ ಪ್ರತ್ಯೇಕವಾಗಿ ಮೀಸಲಾತಿ ನೀಡುವುದಾಗಿ ಭರವಸೆ ನೀಡಿದ್ದವು. ಚುನಾವಣೆಯಲ್ಲಿ ಕಾಂಗ್ರೆಸ್ ಹೀನಾಯವಾಗಿ ಸೋತು ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಅಧಿಕಾರದ ಚುಕ್ಕಾಣಿ ಹಿಡಿಯಿತು. ಸ್ವಭಾವತಃ ಮೇಲ್ಜಾತಿ- ವರ್ಗಗಳ ಹಿತ ಕಾಯುವ ಪಕ್ಷವೆಂದೇ ಆರೋಪ ಹೊತ್ತಿರುವ ಬಿಜೆಪಿ ಅಧಿಕಾರ ಹಿಡಿದದ್ದು ಆ ವರ್ಗಗಳ ರೊಟ್ಟಿ ಜಾರಿ ತುಪ್ಪದಲ್ಲಿ ಬಿದ್ದಂತಾಯಿತು. ಸಂಕ್ರಮಣ ಕಾಲಕ್ಕಾಗಿ ಕಾಯುತ್ತಿದ್ದ ಮೇಲ್ಜಾತಿಯ ಜನರಲ್ಲಿ ಸುಪ್ತವಾಗಿದ್ದ ಬಯಕೆ ಚಿಗುರೊಡೆಯುವುದು ಕಷ್ಟವೇನಾಗಲಿಲ್ಲ. ಯುಕ್ತ ಸಮಯಕ್ಕಾಗಿ ಕಾದು ಕುಳಿತಿದ್ದ ಬಿಜೆಪಿ ಸರ್ಕಾರಕ್ಕೆ 2019ರ ಚುನಾವಣೆಯ ಮುನ್ನಾ ದಿನಗಳು ಪ್ರಸಕ್ತವಾಗಿ ಕಂಡವು. ಆ ವರ್ಷದ ಜನವರಿ ತಿಂಗಳಲ್ಲಿ ಸಂಸತ್ತಿನ ಉಭಯ ಸದನಗಳಲ್ಲಿ ವಿಧೇಯಕ ಮಂಡಿಸಿ ಸಂವಿಧಾನದ 103ನೇ ತಿದ್ದುಪಡಿಯನ್ನು ಅತ್ಯಾತುರವಾಗಿ ಸರ್ಕಾರ ಅನುಮೋದನೆ ಪಡೆದುಕೊಂಡು ಬಿಟ್ಟಿತು. ಇತರ ಹಿಂದುಳಿದವರಿಗೆ ಮೀಸಲಾತಿ ಜಾರಿಗೊಳ್ಳಲು 42 ವರ್ಷಗಳೇ ಬೇಕಾದರೂ, ಆರ್ಥಿಕವಾಗಿ ದುರ್ಬಲ ವರ್ಗದವರಿಗೆ ಮೀಸಲಾತಿ ಜಾರಿ ಕೇವಲ ಕೆಲವೇ ಗಂಟೆಗಳಲ್ಲಿ ಆಗಿ ಹೋಯಿತು! ತಿದ್ದುಪಡಿಗೆ ಡಿಎಂಕೆ ಮತ್ತು ಆರ್ ಜೆ ಡಿ ಪಕ್ಷಗಳ ಹೊರತಾಗಿ ಉಳಿದೆಲ್ಲಾ ಪಕ್ಷಗಳು ತುದಿಗಾಲಲ್ಲಿ ನಿಂತು ಒಪ್ಪಿಗೆ ಸೂಚಿಸಿದವು. ಕಾಂಗ್ರೆಸ್‌ನ ಇಬ್ಬಂದಿತನದ ಬಗ್ಗೆ ಬೇರೇನೂ ಹೇಳಬೇಕಾಗಿಲ್ಲ. ಸಂಸತ್ತಿನ ಅನುಮೋದನೆಯಿಂದಾಗಿ ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ಶೇ.10ರಷ್ಟು ಮೀಸಲಾತಿ ದಕ್ಕಿತು. ಆರ್ಥಿಕ ದುರ್ಬಲ ವರ್ಗದವರಿಗೆ ಮೀಸಲಾತಿ ಜಾರಿಯಾದದ್ದನ್ನು ಪ್ರತಿಭಟನಾರ್ಥ ಯಾವ ಒಬ್ಬ ಹಿಂದುಳಿದ ವರ್ಗದ ವ್ಯಕ್ತಿ ಧ್ವನಿಯೆತ್ತಲಿಲ್ಲ. ಬಾಯಿ ಮುಚ್ಚಿಕೊಂಡು ತೆಪ್ಪಗಾದರು. ಈ ನಿಷ್ಕ್ರಿಯತೆ ಅವರ ಅಮಾಯಕತನವೋ ಅಥವಾ ಕೈಲಾಗದ ರಣ ಹೇಡಿತನವೋ ಏನೊಂದೂ ತಿಳಿಯಲಿಲ್ಲ.103 ನೇ ತಿದ್ದುಪಡಿಯಂತೆ ಆರ್ಥಿಕ ದುರ್ಬಲರಿಗೆ ಮೀಸಲಾತಿ ಸೌಲಭ್ಯ ಪಡೆಯುವ ಉದ್ದೇಶಕ್ಕಾಗಿ ವಿಧಿ15(6) ಮತ್ತು ವಿಧಿ16(6) ಅನ್ನು ಹೊಸದಾಗಿ ಸಂವಿಧಾನದಲ್ಲಿ ಸೇರಿಸಲಾಯಿತು.

ಏಕೆಂದರೆ -ಇತರ ಹಿಂದುಳಿದ ವರ್ಗಗಳನ್ನು ಗುರುತಿಸಲು ಸಂವಿಧಾನಬದ್ಧವಾಗಿ ಅನೇಕ ಪ್ರಕ್ರಿಯೆಗಳಿವೆ. ಮೊದಲನೆಯದಾಗಿ ಇತರ ಹಿಂದುಳಿದ ವರ್ಗಗಳನ್ನು ಗುರುತಿಸಲು ಅನುವಾಗುವಂತೆ ಆಯೋಗವೊಂದರ ರಚನೆ ಅವಶ್ಯಕವಿದೆ. ರಾಷ್ಟ್ರಪತಿಗಳು ಸಂವಿಧಾನದ ವಿಧಿ 340ರ ಅಡಿಯಲ್ಲಿ ಆಯೋಗ ರಚಿಸುವರು. ಆಯೋಗ ಸಂವಿಧಾನದ ವಿಧಿಗಳಾದ 15(4) ಮತ್ತು ವಿಧಿ16(4)ಅನ್ನು ಕಡ್ಡಾಯವಾಗಿ ಅನುಸರಿಸಿ ಹಿಂದುಳಿದ ವರ್ಗಗಳ ಪಟ್ಟಿ ಮಾಡಬೇಕು.

ಆ ಪ್ರಕಾರ, ವಿಧಿ15(4) ರನ್ವಯ ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದ ನಾಗರಿಕರನ್ನು ಅವಶ್ಯ ಗುರುತಿಸಬೇಕು. ವಿಧಿ 16 (4)ರಂತೆ ಯಾವುದೇ ಹಿಂದುಳಿದ ವರ್ಗದ ನಾಗರಿಕರು ರಾಜ್ಯದ ಅಧೀನದಲ್ಲಿರುವ ಸೇವೆಗಳಲ್ಲಿ ''ಸಾಕಷ್ಟು ಪ್ರಾತಿನಿಧ್ಯ''ವನ್ನು ಹೊಂದಿಲ್ಲವೆಂದು ರಾಜ್ಯವು ಅಭಿಪ್ರಾಯಪಟ್ಟಲ್ಲಿ ಮಾತ್ರ ಅಂತವರಿಗಾಗಿ ನೇಮಕಗಳನ್ನು ಅಥವಾ ಹುದ್ದೆಗಳನ್ನು ಮೀಸಲಿಡಬಹುದು. ಅದೇ ಮಾದರಿಯಲ್ಲಿ ಆರ್ಥಿಕವಾಗಿ ಹಿಂದುಳಿದ ವರ್ಗಗಳನ್ನು ಗುರುತಿಸುವ ಕಾರ್ಯವನ್ನು ಆಯೋಗವೊಂದರ ಮೂಲಕ ಕಡಾ ಖಂಡಿತವಾಗಿ ಕಂಡುಕೊಳ್ಳಬೇಕಾಗಿತ್ತು. ಅದೂ, ಅಲ್ಲದೆ ಹಾಗೆ ಗುರುತಿಸಿರುವ ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ಸರ್ಕಾರದ ಹುದ್ದೆ ಮತ್ತು ನೇಮಕಾತಿಯಲ್ಲಿ ''ಸಾಕಷ್ಟು ಪ್ರಾತಿನಿಧ್ಯ'' ಇಲ್ಲ ಎಂಬುದನ್ನೂ ಖಚಿತಪಡಿಸಿಕೊಳ್ಳಬೇಕಾದ ಅಗತ್ಯವಿತ್ತು. ಸಂವಿಧಾನದ ಈ ಎರಡೂ ವಿಧಿಗಳನ್ನು ಪಾಲಿಸದಿರುವುದು ಘನ ಘೋರ ತಾರತಮ್ಯ ಮತ್ತು ಮಹಾ ಮೋಸ.

ಹಿಂದುಳಿದ ವರ್ಗಗಳನ್ನು ಗುರುತಿಸಲು ಹಾವನೂರು ಆಯೋಗ ಅಳವಡಿಸಿಕೊಂಡ ನ್ಯಾಯ ವಿಧಾನವನ್ನು ಈ ಸಂದರ್ಭದಲ್ಲಿ ಉದಾಹರಣೆ ಸಹಿತ ಪ್ರಸ್ತುತಪಡಿಸುವ ಅವಶ್ಯಕತೆ ಇದೆ. ಅರಸು, ಬಲಿಜ, ದೇವಾಡಿಗ, ಗಾಣಿಗ, ನಾಯಿಂದ, ರಜಪುತ್, ಸತಾನಿ ಇತ್ಯಾದಿ ಸಮುದಾಯಗಳು ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದವು (15/4) ಎಂದು ಪರಿಗಣಿತವಾಗಿದ್ದರೂ, ಅವು ಸರ್ಕಾರಿ ಸೇವೆಯಲ್ಲಿ ''ಸಾಕಷ್ಟು ಪ್ರಾತಿನಿಧ್ಯ'' ಪಡೆದುಕೊಂಡಿದ್ದ ಕಾರಣ ಆ ಸಮುದಾಯಗಳನ್ನು ಆಯೋಗ ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿಸಿರಲಿಲ್ಲ. ಹಾವನೂರು ಆಯೋಗ ಅಷ್ಟರಮಟ್ಟಿಗೆ ಕಠಿಣ ನಿಲುವು ತಾಳಿತ್ತು.

ಸಂವಿಧಾನದ 103ನೇ ತಿದ್ದುಪಡಿ, ಆರ್ಥಿಕ ದುರ್ಬಲ ವರ್ಗಗಳಿಗೆ ಶೇ.10ರಷ್ಟು ಮೀಸಲಾತಿಯನ್ನು ಶಿಕ್ಷಣ ಮತ್ತು ಉದ್ಯೋಗದಲ್ಲಿ ಕೊಡುವುದಾಗಿದೆ. ಈ ತಿದ್ದುಪಡಿಯ ಕಾರಣ ಖಂಡ 15(6) ಮತ್ತು 16(6)ಅನ್ನು ಹೊಸದಾಗಿ ಸೇರಿಸಲಾಗಿದೆ ಎಂಬುದನ್ನು ಈಗಾಗಲೇ ಹೇಳಲಾಗಿದೆ. ಖಂಡ 16(6) ಹೀಗಿದೆ- '' ಈ ಅನುಚ್ಛೇದದಲ್ಲಿ ಇರುವುದು ಯಾವುದೂ ಅಸ್ತಿತ್ವದಲ್ಲಿರುವ ಮೀಸಲಾತಿಗೆ ಹೆಚ್ಚುವರಿಯಾಗಿ ಆದರೆ ಪ್ರತಿಯೊಂದು ಪ್ರವರ್ಗದಲ್ಲಿನ ಹುದ್ದೆಗಳಲ್ಲಿ ಗರಿಷ್ಠ ಶೇ.10ರಷ್ಟಕ್ಕೆ ಒಳಪಟ್ಟು, (4) ನೇ ಖಂಡದಲ್ಲಿ ಉಲ್ಲೇಖಿಸಿರುವ ವರ್ಗಗಳಲ್ಲದ ಆರ್ಥಿಕವಾಗಿ ದುರ್ಬಲರಾದ ನಾಗರಿಕರ ವರ್ಗಗಳಿಗೆ ನೇಮಕಗಳಲ್ಲಿ ಅಥವಾ ಹುದ್ದೆಗಳಲ್ಲಿ ಯಾವುದೇ ಉಪಬಂಧವನ್ನು ಮಾಡದಂತೆ ರಾಜ್ಯವನ್ನು ಪ್ರತಿ ಬಂಧಿಸತಕ್ಕದ್ದಲ್ಲ''. ಸಂವಿಧಾನದ ಈ ಖಂಡದಲ್ಲಿ ಸಾರ್ವಜನಿಕ ಸೇವೆಯಲ್ಲಿ ''ಸಾಕಷ್ಟು ಪ್ರಾತಿನಿಧ್ಯ ಹೊಂದಿಲ್ಲ''ದ ಎಂಬ ಅಂಶ ಇರುವ ನುಡಿಗಟ್ಟನ್ನು ಸೇರಿಸಿಲ್ಲ ಎಂಬುದು ಅತಿ ಮುಖ್ಯ. ಹಾಗೊಂದು ವೇಳೆ ಈ ಅಂಶದ ನುಡಿಗಟ್ಟನ್ನು ಸೇರ್ಪಡೆ ಮಾಡಿದ್ದಲ್ಲಿ, ಆರ್ಥಿಕ ದುರ್ಬಲ ವರ್ಗಗಳಲ್ಲಿರುವ ಸಮುದಾಯಗಳಲ್ಲಿ ಯಾವುದೇ ಸಮುದಾಯ ಸಾರ್ವಜನಿಕ ಸೇವೆಯಲ್ಲಿ ''ಸಾಕಷ್ಟು ಪ್ರಾತಿನಿಧ್ಯ ಪಡೆದಿದ್ದ'' ಪಕ್ಷದಲ್ಲಿ ಅಂಥಾ ಸಮುದಾಯ ಈ ಕೋಟಾದಲ್ಲಿ ಮೀಸಲಾತಿ ಪಡೆಯಲು ಅರ್ಹತೆ ಗಳಿಸುತ್ತಿರಲಿಲ್ಲ ಎಂಬುದನ್ನು ಗಮನಿಸಬೇಕು. ಅಷ್ಟೇ ಅಲ್ಲ, ಅವುಗಳನ್ನು ಗುರುತಿಸಲು ಆಯೋಗವನ್ನು ರಚಿಸಬೇಕಾದ ಅವಶ್ಯಕತೆ ಕೂಡ ಇರುತ್ತಿತ್ತು. ಈ ಸೂಕ್ಷ್ಮತೆಯ ಒಳಸುಳಿಗಳನ್ನು ಗಮನಿಸಿಯೇ ಬಹು ಚಾಣಾಕ್ಷತನದಿಂದ ಈ ಅಂಶವನ್ನು ತಿದ್ದುಪಡಿ ವಿಧಿ (16/6)ಯಲ್ಲಿ ಸೇರ್ಪಡೆ ಮಾಡಿಲ್ಲ ಎಂಬುದು ಸರ್ವ ವಿಧಿತ. ಮೇಲ್ಜಾತಿ- ವರ್ಗಗಳು ಸಾಮಾನ್ಯ ವರ್ಗದಲ್ಲಿ( ) ಸ್ಪರ್ಧಿಸಿ ಸೇವೆಯಲ್ಲಿ ''ಸಾಕಷ್ಟು ಪ್ರಾತಿನಿಧ್ಯ'' ಪಡೆದುಕೊಂಡಿರುವ ವಿಷಯ ಸರ್ಕಾರದ ಗಮನದಲ್ಲಿ ಇದ್ದಿರಬೇಕು ಎಂದೆನ್ನಿಸದಿರದು.

103ನೇ ತಿದ್ದುಪಡಿಯನ್ನು ವಿರೋಧಿಸಿ ಸರ್ವೋಚ್ಚ ನ್ಯಾಯಾಲಯದಲ್ಲಿ ರಿಟ್ ಗಳು ದಾಖಲಾದವು ಎಂಬುದು ಸರಿ. ಆದರೆ ನ್ಯಾಯಾಲಯ ಸಂವಿಧಾನ ತಿದ್ದುಪಡಿಯನ್ನು 3-2 ರ ಬಹುಮತದೊಡನೆ ಎತ್ತಿಹಿಡಿಯಿತು. ನ್ಯಾಯಾಲಯದ ತೀರ್ಪುನಿಂದಾಗಿ ಸದ್ಯ ಆರ್ಥಿಕ ದುರ್ಬಲ ವರ್ಗಗಳ ಮೀಸಲಾತಿಗೆ ಯಾವ ಬಾಧಕವೂ ಇಲ್ಲ. ತೀರ್ಪಿನಿಂದಾಗಿ ದೇಶದಲ್ಲಿ ಶೇ.100ರಷ್ಟು ಜನಸಮುದಾಯಗಳು ಒಂದಲ್ಲಾ ಒಂದು ರೀತಿಯಲ್ಲಿ ಮೀಸಲಾತಿಗೆ ಒಳಪಡುವಂತಾಯಿತು. ಸರ್ವೇ ಜನ ಸುಖಿನೋ ಭವಂತು!!

ಉಡುಪಿ ಕರಾವಳಿಯಲ್ಲಿ ಮತ್ತೆ ಶೂಟೌಟ್ ಸದ್ದು: ಉದ್ಯಮಿಗಳ ಹತ್ಯೆ ಹಿಂದೆ ಸುಪಾರಿ ಜಾಲ?

ಕರಾವಳಿಯ ಉಡುಪಿ ಜಿಲ್ಲೆಯಲ್ಲಿ ಇತ್ತೀಚಿನ ದಿನಗಳಲ್ಲಿ ಕೇಳಿಬರುತ್ತಿರುವ ಗುಂಡಿನ ಸದ್ದು ಜನರಲ್ಲಿ ಆತಂಕ ಮೂಡಿಸಿದೆ. ಒಂದು ಕಡೆ ಹಗಲೇ ಗುಂಡಿಕ್ಕಿ ಹತ್ಯೆ, ಮತ್ತೊಂದೆಡೆ ರಾತ್ರಿ ವೇಳೆ ಗುಂಡಿನ ದಾಳಿ. ಹೀಗೆ ಅಲ್ಪ ಅವಧಿಯಲ್ಲೇ ನಡೆದ ಎರಡು ಶೂಟೌಟ್ ಪ್ರಕರಣಗಳು ಕರಾವಳಿಯ ಕಾನೂನು ಸುವ್ಯವಸ್ಥೆಯ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿವೆ.

ಕಳೆದ ಜುಲೈ 31ರಂದು ಕುಂದಾಪುರದಲ್ಲಿ ಉದ್ಯಮಿ ಐವನ್ ರಿಚರ್ಡ್ ಮಸ್ಕರೇನಸ್ ಅವರನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿತ್ತು. ಈ ಘಟನೆಗೆ ಹತ್ತು ದಿನವೂ ಕಳೆಯುವ ಮುನ್ನವೇ ಆಗಸ್ಟ್ 7ರಂದು ಕಾಪು ತಾಲೂಕಿನ ಮುದರಂಗಡಿಯಲ್ಲಿ ಕಾಂಗ್ರೆಸ್ ಮುಖಂಡ, ಉದ್ಯಮಿ ಹಾಗೂ ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಡೇವಿಡ್ ಡಿಸೋಜಾ (ಪ್ರಿನ್ಸ್) ಅವರನ್ನು ಹಗಲೇ ಗುಂಡಿಕ್ಕಿ ಹತ್ಯೆ ಮಾಡಲಾಗಿದೆ.

ಎರಡೂ ಘಟನೆಗಳ ಹಿನ್ನೆಲೆ ಬೇರೆಬೇರೆಯಾಗಿದ್ದರೂ, ಎರಡೂ ಪ್ರಕರಣಗಳಲ್ಲಿ ಬಂದೂಕು ಬಳಕೆಯಾಗಿರುವುದು ಕರಾವಳಿಯಲ್ಲಿ ಅಕ್ರಮ ಶಸ್ತ್ರಾಸ್ತ್ರಗಳ ಬಳಕೆ ಮತ್ತು ಅಪರಾಧ ಜಾಲದ ಬಗ್ಗೆ ಆತಂಕ ಮೂಡಿಸಿದೆ.

ಕುಂದಾಪುರದ ಶೂಟೌಟ್‌ನ ಆತಂಕ ಇನ್ನೂ ಮಾಸುವ ಮುನ್ನವೇ ಆಗಸ್ಟ್ 7ರಂದು ಕಾಪು ತಾಲೂಕಿನ ಮುದರಂಗಡಿಯಲ್ಲಿ ಮತ್ತೊಂದು ಭೀಕರ ಘಟನೆ ನಡೆದಿದೆ.

ಮುದರಂಗಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸೆಂಟ್ ಕ್ಸೇವಿಯರ್ ಚರ್ಚ್ ಸಂಕೀರ್ಣದಲ್ಲಿ ಪ್ರಿನ್ಸ್ ಎಂಟರ್‌ಪ್ರೈಸಸ್ ಹೆಸರಿನ ಉದ್ಯಮ ಕಚೇರಿ ಹೊಂದಿದ್ದ ಡೇವಿಡ್ ಡಿಸೋಜಾ ಅವರು ಕಚೇರಿಗೆ ಬಂದಿದ್ದರು. ನಂತರ ತಮ್ಮ ಥಾರ್ ವಾಹನದ ಚಾಲಕನ ಬದಿಯ ಬಾಗಿಲ ಬಳಿ ತೆರಳುತ್ತಿದ್ದ ವೇಳೆ ಬೈಕ್‌ನಲ್ಲಿ ಬಂದ ದುಷ್ಕರ್ಮಿಗಳ ಪೈಕಿ ಒಬ್ಬರು ಪಿಸ್ತೂಲ್‌ನಿಂದ ಡೇವಿಡ್ ಅವರ ತಲೆಗೆ ಗುಂಡು ಹಾರಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಗುಂಡಿನ ದಾಳಿಯಿಂದ ಗಂಭೀರವಾಗಿ ಗಾಯಗೊಂಡ ಡೇವಿಡ್ ಅವರನ್ನು ಸ್ಥಳೀಯರು ಉಡುಪಿಯ ಆದರ್ಶ ಆಸ್ಪತ್ರೆಗೆ ಕರೆದೊಯ್ದರಾದರೂ, ವೈದ್ಯರು ಅವರು ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ.

ಈ ಪ್ರಕರಣಕ್ಕೆ ಸಂಬಂಧಿಸಿ ಶಿರ್ವ ಪೊಲೀಸ್ ಠಾಣೆಯಲ್ಲಿ ಅಪರಾಧ ಕ್ರಮಾಂಕ 66/2026, ಬಿಎನ್‌ಎಸ್ ಕಲಂ 103, 3(5) ಹಾಗೂ ಆರ್ಮ್ಸ್ ಆಕ್ಟ್‌ನ ಸಂಬಂಧಿತ ಕಲಂಗಳಡಿ ಪ್ರಕರಣ ದಾಖಲಾಗಿದೆ.

ಮುದರಂಗಡಿ ಹತ್ಯೆಯ ಹಿಂದೆ ಸುಪಾರಿ ಹಿಂಟ್?

ಪೊಲೀಸರ ತನಿಖೆಯಲ್ಲಿ ಡೇವಿಡ್ ಡಿಸೋಜಾ ಅವರು ನಡೆಸುತ್ತಿದ್ದ ಕಾಮಗಾರಿಗೆ ಸಂಬಂಧಿಸಿದಂತೆ ಅನ್ಯ ರಾಜ್ಯದ ಕಂಪೆನಿಯೊಂದರೊಂದಿಗೆ ಹಣಕಾಸಿನ ವಿಚಾರದಲ್ಲಿ ವೈಮನಸ್ಸು ಉಂಟಾಗಿತ್ತು ಎನ್ನುವ ಮಾಹಿತಿ ಹೊರಬಂದಿದೆ. ಈ ವೈಮನಸ್ಸಿನ ಹಿನ್ನೆಲೆಯಲ್ಲಿ ಡೇವಿಡ್ ಅವರನ್ನು ಹತ್ಯೆ ಮಾಡಲು ಸುಪಾರಿ ನೀಡಿರುವ ಸಾಧ್ಯತೆ ಪೊಲೀಸ್ ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಆದರೆ ಹತ್ಯೆಯ ಹಿಂದೆ ನಿಖರವಾಗಿ ಯಾರು ಇದ್ದರು, ಸುಪಾರಿ ನೀಡಿದವರು ಯಾರು, ಹಣಕಾಸಿನ ನೆರವು ನೀಡಿದವರು ಯಾರು ಮತ್ತು ಆರೋಪಿಗಳಿಗೆ ಆಶ್ರಯ ನೀಡಿದವರು ಯಾರು ಎಂಬುದರ ಬಗ್ಗೆ ತನಿಖೆ ಮುಂದುವರಿದಿದೆ.

ಹತ್ಯೆ ಪ್ರಕರಣದ ತನಿಖೆ ಮುಂದುವರಿದಿದ್ದ ಸಂದರ್ಭದಲ್ಲಿ ಕೃತ್ಯದಲ್ಲಿ ನೇರವಾಗಿ ಭಾಗಿಯಾಗಿದ್ದ ಮೂವರು ಆರೋಪಿಗಳು ಬಸ್‌ನಲ್ಲಿ ಭಟ್ಕಳ ಕಡೆಗೆ ತೆರಳುತ್ತಿದ್ದಾರೆ ಎಂಬ ಖಚಿತ ಮಾಹಿತಿ ಪೊಲೀಸರಿಗೆ ದೊರೆತಿತ್ತು. ಈ ಹಿನ್ನೆಲೆಯಲ್ಲಿ ಬೈಂದೂರು ಸಮೀಪದ ಒತ್ತಿನಾಣೆ ಬಳಿ ಬಸ್‌ನ್ನು ತಡೆದು ಪೊಲೀಸರು ಪರಿಶೀಲನೆ ನಡೆಸಿದರು.

ಪೊಲೀಸರನ್ನು ಕಂಡ ಆರೋಪಿಗಳು ಬಸ್‌ನಿಂದ ಇಳಿದು ಪರಾರಿಯಾಗಲು ಯತ್ನಿಸಿದ್ದಾರೆ ಎನ್ನಲಾಗಿದೆ. ಪೊಲೀಸರು ಬೆನ್ನಟ್ಟುತ್ತಿದ್ದ ಸಂದರ್ಭದಲ್ಲಿ ರಾಜು (ಸುಮಾರು 42 ವರ್ಷ, ಉತ್ತರ ಪ್ರದೇಶದ ನಿವಾಸಿ) ಕಾಪು ಪೊಲೀಸ್ ಠಾಣೆಯ ಪಿಎಸ್‌ಐ ತೇಜಸ್ವಿ ಅವರನ್ನು ದೂಡಿ ಹಾಕಿ, ಅವರ ಬಳಿಯಿದ್ದ ಪಿಸ್ತೂಲ್‌ನಿಂದ ಗುಂಡು ಹಾರಿಸಿ ಪರಾರಿಯಾಗಲು ಯತ್ನಿಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ವೇಳೆ ಆತ್ಮರಕ್ಷಣೆಗಾಗಿ ಪಿಎಸ್‌ಐ ತೇಜಸ್ವಿ ಅವರು ರಾಜುವಿನ ಕಾಲಿಗೆ ಗುಂಡು ಹಾರಿಸಿದ್ದಾರೆ. ರಾಜು ಗಾಯಗೊಂಡು ಪೊಲೀಸರ ವಶಕ್ಕೆ ಸಿಕ್ಕಿದ್ದಾನೆ. ಆತನ ಬಳಿಯಿಂದ ಪಿಸ್ತೂಲ್‌ನ್ನು ಕೂಡ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಈ ಘಟನೆಯಲ್ಲಿ ಪಿಎಸ್‌ಐ ತೇಜಸ್ವಿ ಅವರಿಗೂ ಗಾಯವಾಗಿದ್ದು, ಅವರು ಉಡುಪಿ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಗಾಯಗೊಂಡ ಆರೋಪಿ ರಾಜುವಿಗೂ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದೆ.

ಮತ್ತಿಬ್ಬರು ಆರೋಪಿಗಳೂ ಪೊಲೀಸರ ವಶಕ್ಕೆ

ಮುದರಂಗಡಿ ಹತ್ಯೆ ಪ್ರಕರಣದಲ್ಲಿ ಭಾಗಿಯಾಗಿದ್ದ ಮತ್ತಿಬ್ಬರು ಆರೋಪಿಗಳನ್ನೂ ಪೊಲೀಸರು ಬಂಧಿಸಿದ್ದಾರೆ. ಅಜಯ್ ರಸ್ತೋಗಿ ಅನ್ಮೋಲ್ (23 ವರ್ಷ, ಉತ್ತರಾಖಂಡ) ಅವರನ್ನು ಕುಮಟಾ ಪೊಲೀಸರ ಸಹಕಾರದಿಂದ ಕುಮಟಾದಲ್ಲಿ ವಶಕ್ಕೆ ಪಡೆಯಲಾಗಿದೆ. ಜಿಯಾಹುಲ್ ವಜೂಲ್ ಶೇಖ್ ದೀಪಕ್ (38 ವರ್ಷ, ಬಿಹಾರ) ಅವರನ್ನು ಭಟ್ಕಳ ಪೊಲೀಸರ ಸಹಕಾರದಿಂದ ಭಟ್ಕಳದಲ್ಲಿ ವಶಕ್ಕೆ ಪಡೆಯಲಾಗಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR